ಸಂಪುಟ: 14 Volume | ಸಂಚಿಕೆ: 86 Issue | ಪುಟಗಳು 08 Pages | ಬುಧವಾರ 08 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಬಾಳು ಇರುವುದು
ಬದುಕುವುದಕ್ಕಾಗಿ;
ಬದುಕಿನಿಂದ
ಬೆಳೆಯುವುದಕ್ಕಾಗಿ.

–ಶಿವರಾಮ ಕಾರಂತ

## ಅವಲೋಕನ ಸಭೆ: ಸುದೀರ್ಘವಾಗಿ ಚರ್ಚೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ನೇತೃತ್ವದಲ್ಲಿ ಕಲಬುರಗಿ ವಿಭಾಗದ ಬರ ಪರಿಸ್ಥಿತಿ ಅವಲೋಕನ ಸಭೆ ಅರಂಭವಾಗಿದ್ದು, ಜನ ಜಾನುವಾರುಗಳಿಗೆ ಕುಡಿಯುವ ನೀರು, ಮೇವು ಸೇರಿದಂತೆ ವಿವಿಧ ವಿಷಯಗಳ ಕುರಿತು ಸುದೀರ್ಘವಾಗಿ ಚರ್ಚೆ ನಡೆಯುತ್ತಿದೆ.

ಉಪಮುಖ್ಯಮಂತ್ರಿ, ಕಂದಾಯ ಮತ್ತು ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವ ಡಾ.ಜಿ.ರಮೇಶ್ವರ, ಗೃಹ, ಐ.ಟಿ–ಬಿ.ಟಿ ಹಾಗೂ ಇ–ಆಡಳಿತ ಎಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ.ಶರಣಪ್ರಕಾಶ ಪಾಟೀಲ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ, ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್, ಮುಖ್ಯಮಂತ್ರಿಗಳ ಅರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್,



ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ತುಷಾರ ಗಿರಿನಾಥ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ಉಮಾ ಮಹಾದೇವನ್, ಗೌರವ ಗುಪ್ತಾ, ಕಾರ್ಯದರ್ಶಿಗಳು, ಕಲಬುರಗಿ ವಿಭಾಗದ ಡಿ.ಸಿ., ಜಿಲ್ಲಾ ಪಂಚಾಯತ್ ಸಿ.ಇ.ಓಗಳು, ಕೃಷಿ ತೆ–ೋಟಗಾರಿಕೆ, ಭಾಗವಹಿಸಿದ್ದರು. ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಹೀರಾ ನಸ್ಸಿಮ್ ಸ್ವಾಗತಿಸಿದರು. ಕಂದಾಯ ಇಲಾಖೆ ವಿಪತ್ತು ನಿರ್ವಹಣೆ ಕಾರ್ಯದರ್ಶಿ ಮನೋಜಕುಮಾರ ಮೀನಾ ಅವರು ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಬರ ಪರಿಸ್ಥಿತಿ ಕುರಿತು ಅಂಕಿ ಸಂಖ್ಯೆಯನ್ನು ಸಭೆಗೆ ವಿವರಿಸಿದರು.

## 14ನೇ ಶರಣ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವೀರಶೈವ ಲಿಂಗಾಯತ ಧರ್ಮವು ಮೂಲತಃ ಜಾತಿರಹಿತವಾದ ಧರ್ಮವಾಗಿದೆ. ಆದರೆ ಈ ಧರ್ಮವು ಇಂದು ಒಳಪಂಗಡಗಳ ಹೆಸರಿನಲ್ಲಿ ಹರಿದು ಹಂಚಿಹೋಗಿದೆ. ಈ ವಿದ್ಯಮಾನದ ಬಗ್ಗೆ ಸಮುದಾಯದ ಸದಸ್ಯರು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಸಮುದಾಯದ ಹಿರಿಯ ಮುಖಂಡ ಮತ್ತು ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಕರೆ ಕೊಟ್ಟಿದ್ದಾರೆ.

ಮಂಗಳವಾರ ಆರಂಭವಾದ ಎರಡು ದಿನಗಳ 14ನೇ ಶರಣ ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷರಾಗಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಈ ಸಮ್ಮೇಳನವನ್ನು ಇಲ್ಲಿನ ವಿಜಯನಗರದ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಏರ್ಪಡಿಸಿದ್ದು, ಹಿರಿಯ ಸಾಹಿತಿ ಗೊ.ರು.ಚನ್ನಬಸಪ್ಪನವರು ಸರ್ವಾಧ್ಯಕ್ಷರಾಗಿದ್ದಾರೆ.



ಶರಣ ಸಾಹಿತ್ಯ ಮತ್ತು ಶರಣ ಧರ್ಮಕ್ಕೆ ಬಹಳ ಒಳ್ಳೆಯ ಬುನಾದಿ ಇದೆ. ಹಾಗೆ ನೋಡಿದರೆ, ವೃತ್ತಿಗೆ ತಕ್ಕ ಘನತೆ ಎನ್ನುವ ತತ್ವವನ್ನು ಬಸವಣ್ಣನವರು ಕಾರ್ಲ್ ಮಾರ್ಕ್ಸ್ ಗಿಂತ ನಾಲ್ಕು ಶತಮಾನ ಮೊದಲೇ ಹೇಳಿ, ಇಡೀ ಸಮಾಜಕ್ಕೆ ಕಾಯಕ–ದಾಸೋಹ ಸಂದೇಶ ನೀಡಿದರು. ಆದರೆ, ಲಿಂಗಾಯತ ಧರ್ಮಕ್ಕೆ ಮೊದಲಿನಿಂದಲೂ ಸಮುದಾಯದ ಒಳಗೇ ವಿಪರೀತ ಶತ್ರುಗಳಿದ್ದಾರೆ. ಹೀಗಾಗಿ ಬಸವಾದಿ ಶರಣರು ಮತ್ತು ಲಿಂಗಾಯತ ಧರ್ಮಗಳ ಸೀಮೋಲ್ಲಂಘನೆ ಆಗದೆ, ಕರ್ನಾಟಕದಲ್ಲೇ ಸೀಮಿತವಾಗಿ ಉಳಿದುಕೊಂಡವು ಎಂದು ಹೇಳಿದ್ದಾರೆ.



ಸಿಎಂ ಡಿ ಕೆ ಶಿವಕುಮಾರ್ ಅವರು ಕಲ್ಬುರ್ಗಿ ಸರಕಾರಿ ಅತಿಥಿ ಗೃಹದಲ್ಲಿ ಮಂಗಳವಾರ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ಕಲ್ಬುರ್ಗಿ ಮೇಯರ್ ವರ್ಷ ರಾಜ್ವಿ ಜಾನೇ ಸಹ ಮಹಾನಗರ ಪಾಲಿಕೆ ಪರವಾಗಿ ಮನವಿ ಸಲ್ಲಿಸಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಕಲ್ಬುರ್ಗಿಯ ಹಜರತ್ ಖಾಜಾ ಬಂದೇನವಾಜ್ ದರ್ಗಾಕ್ಕೆ ಮಂಗಳವಾರ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು. ಡಿಸಿಎಂ ಜಿ ಪರಮೇಶ್ವರ, ಸಚಿವರಾದ ಶರಣ್ ಪ್ರಕಾಶ್ ಪಾಟೀಲ್, ಯು ಟಿ ಖಾದರ್, ಪ್ರಿಯಾಂಕ್ ಖರ್ಗೆ, ಶಾಸಕ ಅಜೇಯ್ ಸಿಂಗ್ ಮತ್ತಿತರರು ಉಪಸ್ಥಿತರಿದ್ದರು.



ಬೆಂಗಳೂರಿನಲ್ಲಿ ನಡೆದ ಪ್ರದೇಶ ಕಾಂಗ್ರೆಸ್ ಸಮಿತಿಯ ಸರ್ವ ಸದಸ್ಯರ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗವಹಿಸಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ರಾಜ್ಯ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್, ಎಐಸಿಸಿ ಕಾರ್ಯದರ್ಶಿಗಳಾದ ಗೋಪಿನಾಥನ್ ಪಾಲ್ಗೊಂಡಿದ್ದರು.



ಕಲ್ಬುರ್ಗಿಯ ಶರಣ ಬಸವೇಶ್ವರ ಸಂಸ್ಥಾನದ ಹಿಂದಿನ ಪೀಠಾಧಿಪತಿ ಶ್ರೀ ಶರಣ ಬಸವೇಶ್ವರ ಅಪ್ಪ ಗದ್ದುಗೆಗೆ ಸಿಎಂ ಡಿ ಕೆ ಶಿವಕುಮಾರ್ ಅವರು ಮಂಗಳವಾರ ನಮಿಸಿದರು. ಈಗಿನ ಪೀಠಾಧಿಪತಿ ಚಿರಂಜೀವಿ ದೊಡ್ಡಪ್ಪ ಅಪ್ಪ, ಡಿಸಿಎಂ ಜಿ ಪರಮೇಶ್ವರ, ಸಚಿವರಾದ ಶರಣ್ ಪ್ರಕಾಶ್ ಪಾಟೀಲ್, ಯು ಟಿ ಖಾದರ್, ಪ್ರಿಯಾಂಕ್ ಖರ್ಗೆ ಮತ್ತಿತರರು ಉಪಸ್ಥಿತರಿದ್ದರು.

# ಬರದ ವಿರುದ್ಧ ಸಮರ

## ರಾಜ್ಯದ ಎಲ್ಲಾ ಭಾಗಗಳ ಪರಿಸ್ಥಿತಿ ಪರಿಶೀಲಿಸಿದ ಬಳಿಕ ಘೋಷಣೆ: ಮುಖ್ಯಮಂತ್ರಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಕಾನೂನು ಚೌಕಟ್ಟಿದೆ. ರಾಜ್ಯದ ಎಲ್ಲಾ ಭಾಗಗಳ ಪರಿಸ್ಥಿತಿ ಪರಿಶೀಲಿಸಿದ ಬಳಿಕ ಘೋಷಣೆ ಮಾಡಲಾಗುವುದು ಎಂದು ಸಿಎಂ ಡಿ ಕೆ ಶಿವಕುಮಾರ್ ತಿಳಿಸಿದ್ದಾರೆ. ಕಲಬುರಗಿ ಸರ್ಕಾರಿ ಅತಿಥಿ ಗೃಹದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಉತ್ತರಿಸಿದ್ದಾರೆ.

**ಸರ್ಕಾರದ ಕೊಡುಗೆ?:** ಬರಗಾಲಕ್ಕೆ ಸಿಲುಕಿರುವ ಕಲ್ಯಾಣ ಕರ್ನಾಟಕದ ಭಾಗಕ್ಕೆ ಸರಕಾರದ ಕೊಡುಗೆ ಎಂಬ ಪ್ರಶ್ನೆಗೆ ನಾನು ಬರಗಾಲ ಪರಿಸ್ಥಿತಿ ಅವಲೋಕಿಸಲು ಕಲ್ಯಾಣ ಕರ್ನಾಟಕ ಭಾಗಕ್ಕೆ ಬಂದಿದ್ದೇನೆ. ಇಲ್ಲಿನ ಜನರು ಮತ್ತು ಜನಪ್ರತಿನಿಧಿಗಳನ್ನು ಭೇಟಿ ಮಾಡಿದ್ದೇನೆ. ಇಲ್ಲಿನ ಪರಿಸ್ಥಿತಿಯ ಅವಲೋಕನಕ್ಕೆ ಸಭೆ ನಡೆಸುತ್ತಿದ್ದೇನೆ. ಅದೇ ರೀತಿ ಎರಡು ಮೂರು ದಿನ ಬಿಟ್ಟು ಬೆಳಗಾವಿಗೂ ಭೇಟಿ ನೀಡುತ್ತಿದ್ದೇನೆ' ಎಂದು ಹೇಳಿದ್ದಾರೆ.

**ನ್ಯಾಯ ಒದಗಿಸುವ ಕಾರ್ಯ:** 'ಸಮಸ್ಯೆ ಬಗೆಹರಿಸಬೇಕು ಎಂದು ಜನರು ಬೇಡಿಕೆಗಳನ್ನು ಮಂಡಿಸಿದ್ದಾರೆ. ಅವರ ಸಮಸ್ಯೆ ಆಲಿಸಲು ಹೊಸದಾಗಿ ಪ್ರಜಾಸೇವಾ ಇಲಾಖೆ ಸ್ಥಾಪಿಸಿ, ಸಚಿವರನ್ನು ನೇಮಕ ಮಾಡಿ, ಜನರ ಅರ್ಜಿಗಳನ್ನು ಪರಿಶೀಲಿಸಿ ಅವರಿಗೆ ಸಾಧ್ಯವಾದಷ್ಟು ನ್ಯಾಯ ಒದಗಿಸುವ ಕೆಲಸವನ್ನು ಸರ್ಕಾರ ಮಾಡುತ್ತದೆ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ್ದಾರೆ.



ಅಂತರರಾಜ್ಯ ನೀರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ತೆಲಂಗಾಣ, ಆಂಧ್ರ ಪ್ರದೇಶದ ಮುಖ್ಯಮಂತ್ರಿ, ಕೇಂದ್ರ ಸಚಿವರ ಜತೆ ಐತಿಹಾಸಿಕ ಮಟ್ಟದ ಚರ್ಚೆ ನಡೆಸಿದ್ದೇವೆ. ಕೃಷ್ಣ, ಕಾವೇರಿ ಮತ್ತು ಗೋದಾವರಿ ನದಿಗಳ ಜೋಡಣೆ ಯೋಜನೆಯನ್ನು ಒಂದು ಲಕ್ಷ ಕೋಟಿ ರೂ. ವೆಚ್ಚದಲ್ಲಿ ಮುಂದುವರಿಸುವ ಪ್ರಸ್ತಾವನೆಗೆ ಕೇಂದ್ರ ಸಕಾರಾತ್ಮಕ ಸ್ಪಂದನೆ ನೀಡಿದೆ.

–ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿ

### ಸಮಾನತೆ ತತ್ವ ನಂಬಿದವ

ಬೀದರ್, ಕಲ್ಬುರ್ಗಿ ಜಿಲ್ಲೆಯ ಜನರ ಬೆಂಬಲ, ಪ್ರೀತಿ ಮತ್ತು ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದ ಸಿಎಂ, ನಾನು ಬಸವಾದಿ ಶರಣರ ಸಮಾನತೆಯ ತತ್ವವನ್ನು ನಂಬಿದವ. ಆದ್ದರಿಂದಲೇ ನನ್ನ ಮೊದಲ ಉತ್ತರ ಕರ್ನಾಟಕ ಪ್ರವಾಸವನ್ನು ಬಸವಕಲ್ಯಾಣದಿಂದ ಆರಂಭಿಸಿದ್ದೇನೆ. ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿ ಒಂದೇ ವೇಗದಲ್ಲಿ ಸಾಗಬೇಕು ಎಂದಿದ್ದಾರೆ.

### ಅಧಿಕಾರಿಗಳೇ ಎಚ್ಚರ..!

ರಾಜ್ಯವನ್ನು ಕಾಡುತ್ತಿರುವ ಬರಗಾಲ ಪರಿಸ್ಥಿತಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಡಿ ಕೆ ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ. ಕಲ್ಬುರ್ಗಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಸಿಎಂ ಅವರು, ಜನಪರ ಕೆಲಸ ಮಾಡದ ಅಧಿಕಾರಿಗಳನ್ನು ಸಹಿಸಿಕೊಳ್ಳುವುದಿಲ್ಲ ಎಂದು ಪುನರುಚ್ಚರಿಸಿದ್ದಾರೆ.

## ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಲೋಕಾಯುಕ್ತ ಬಲೆಗೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿ.ಎಸ್.ಟಿ ವರ್ಗಾವಣೆ ಕೆಲಸ ಮಾಡಿಕೊಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಬಳ್ಳಾರಿಯ ವಾಣಿಜ್ಯ ತೆರಿಗೆ ಇಲಾಖೆಯ ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಮಲ್ಲಿಕಾರ್ಜುನ ಕುಬಸದ ಅವರು ಮಂಗಳವಾರ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಆರೋಪಿತ ಅಧಿಕಾರಿಯು ಕಚೇರಿಯ ಒಳಗೆ ಫಿರ್ಯಾದಿದಾರರಿಂದ ಲಂಚದ ಹಣ ಪಡೆಯುತ್ತಿದ್ದಾಗ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು ಅವರನ್ನು ರೆಡ್–ಹ್ಯಾಂಡ್ ಆಗಿ ದಸ್ತಗಿರಿ ಮಾಡಿದ್ದಾರೆ.

**ಪ್ರಕರಣದ ಹಿನ್ನೆಲೆ:** ಸಿರುಗುಪ್ಪದ 12ನೇ ವಾರ್ಡ್, ವಿಜಯ ವಿಠಲ ನಗರದ ನಿವಾಸಿಯಾದ ಕೆ.ಶ್ರೀನಿವಾಸರಾವ್ ಅವರು ತೆರಿಗೆ ಸಲಹೆಗಾರರು ಮತ್ತು ಅಕೌಂಟೆ–ಂಟ್ ಆಗಿ ಕೆಲಸ ಮಾಡುತ್ತಿದ್ದಾರೆ. ಸಿರುಗುಪ್ಪದ ಶ್ರೀ ಮಹಾಲಕ್ಷ್ಮಿ ಎಂಟರ್‌ಪ್ರೈಸಸ್ ಮಾಲೀಕರಾದ ಕೆ.ಮಲ್ಲಿಕಾರ್ಜುನ ಅವರಿಗೆ ಸಂಬಂಧಿಸಿದ ಹಳೆಯ ಜಿ.ಎಸ್.ಟಿ ಸಂಖ್ಯೆ (29ಬಿಜಿಸಿಪಿಎಂ8288ಡಿ1ಜೆಡ್0) ತಾಂತ್ರಿಕ ದೋಷದಿಂದ ಮೈಗ್ರೇಟ್ ಆಗಿರಲಿಲ್ಲ. ಈ ಹಳೆಯ ಜಿ.ಎಸ್.ಟಿ ಖಾತೆಯಲ್ಲಿದ್ದ ಇನ್‌ಪುಟ್ ಟ್ಯಾಕ್ಸ್ ಅನ್ನು ಹೊಸ ಜಿ.ಎಸ್.ಟಿ ಸಂಖ್ಯೆಗೆ (29ಬಿಜಿಸಿಪಿಎಂ8288ಡಿ2ಜೆಡ್‌ಜೆಡ್) ಸೇರಿಸಿಕೊಡುವಂತೆ ಶ್ರೀನಿವಾಸರಾವ್ ಅವರು ವಾಣಿಜ್ಯ ತೆರಿಗೆ ಇಲಾಖೆಗೆ ಅರ್ಜಿ ಸಲ್ಲಿಸಿದ್ದರು.

ಈ ಸರ್ಕಾರಿ ಕೆಲಸವನ್ನು ಮಾಡಿಕೊಡಲು ಬಳ್ಳಾ–ರಿಯ ಎಲ್.ಜಿ.ಎಸ್.ಟಿ.ಓ 495ರ ಸಹಾಯಕ ವಾಣಿಜ್ಯ ತೆರಿಗೆ ಆಯುಕ್ತ ಮಲ್ಲಿಕಾರ್ಜುನ ಕುಬಸದ ಅವರು ರೂ.90,000 ರೂಪಾಯಿಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಲಂಚ ನೀಡಲು ಇಚ್ಛಿಸದ ಶ್ರೀನಿವಾಸರಾವ್ ಅವರು ಈ ಕುರಿತು ಬಳ್ಳಾರಿ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರಿನ ಅನ್ವಯ ಅಪರಾಧ ಸಂಖ್ಯೆ: 08/2026, ಕಲಂ 7(ಎ) ಪಿಸಿ ಆಕ್ಟ್ 1988 (ತಿದ್ದಪಡಿ ಕಾಯ್ದೆ–2018) ರ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು.

**ಲೋಕಾಯುಕ್ತ ಯಶಸ್ವಿ ಕಾರ್ಯಾಚರಣೆ:** ಮಂಗಳವಾರ ಮಧ್ಯಾಹ್ನ ಸುಮಾರು 1.40 ಗಂಟೆಗೆ ಬಳ್ಳಾರಿ ನಗರದ ರಾಘವೇಂದ್ರ ಕಾಲೋನಿಯಲ್ಲಿರುವ ವಾಣಿಜ್ಯ ತೆರಿಗೆ ಇಲಾಖೆಯ ಕಚೇರಿಯ ಒಳಗಡೆ ಆರೋಪಿತ ಅಧಿಕಾರಿ ಮಲ್ಲಿಕಾರ್ಜುನ ಕುಬಸದ ಅವರು ಪಿರ್ಯಾದಿದಾರರಿಂದ 90,000 ರೂ.ಗಳ ಲಂಚದ ಹಣವನ್ನು ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಲಂಚದ ಹಣವನ್ನು ಜಪ್ತಿ ಮಾಡಿಕೊಳ್ಳಲಾಗಿದ್ದು, ಅಧಿಕಾರಿಯನ್ನು ಕಚೇರಿಯಲ್ಲಿಯೇ ದಸ್ತಗಿರಿ ಮಾಡಲಾಗಿದೆ.

## ಹಿಂದುತ್ವ ರಾಜಕಾರಣ ಬ್ರೇಕ್‌ಗೆ ಕೈ ನಿರ್ಣಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬಿಜೆಪಿಯ ಹಿಂದುತ್ವ ರಾಜಕಾರಣಕ್ಕೆ ಬ್ರೇಕ್ ಹಾಕಲು ಕಾಂಗ್ರೆಸ್ ಕಾರ್ಯಕರ್ತರಿಗೆ ತರಬೇತಿ ನೀಡಲು ಕಾಂಗ್ರೆಸ್ ಸರ್ವ ಸದಸ್ಯರ ಸಾಮಾನ್ಯ ಸಭೆಯಲ್ಲಿ ನಿರ್ಧಾರ ಮಾಡಲಾಗಿದೆ. ಬೆಂಗಳೂರಿನಲ್ಲಿ ನಡೆದ ಸಭೆಯಲ್ಲಿ ಒಟ್ಟು 8 ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಈ ನಿರ್ಣಯಗಳನ್ನು ಓದಲಾಯಿತು.

ಸಭೆಯಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ, ಸಚಿವ ಸತೀಶ್ ಜಾರಕಿಹೊಳಿ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸೇರಿದಂತೆ ಶಾಸಕರು, ಸಚಿವರು ಹಾಗೂ ಕೆಪಿಸಿಸಿ ಸದಸ್ಯರು ಭಾಗಿಯಾಗಿದ್ದರು. ಪಕ್ಷ ಸಂಘಟನೆ, ಮುಂದಿನ ಕಾರ್ಯಯೋಜನೆಯ ಬಗ್ಗೆ ಈ ಸಭೆಯಲ್ಲಿ ಮಹತ್ವದ ಚರ್ಚೆಗಳು ನಡೆದವು.



### ಪ್ರಮುಖ ನಿರ್ಣಯಗಳ ಆಶಯವೇನು?

- ಶ್ರೀರಾಮ ಚಂದ್ರ ಟ್ರಸ್ಟ್ ನಲ್ಲಿ ಕೋಟ್ಯಾಂತರ ಹಣ ದೇಣಿಗೆ ಲೂಟಿ ಮಾಡಲಾಗಿದೆ. ಕೋಟ್ಯಾಂತರ ಭಕ್ತರ ನಂಬಿಕೆಗೆ ಧಕ್ಕೆ ತರಲಾಗಿದೆ. ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾ, ಯೋಗಿ ರಾಜೀನಾಮೆಗೆ ಆಗ್ರಹ
- ಮಳೆ ಕೊರತೆ, ಬರಗಾಲದಿಂದ ಜನಜಾನುವಾರಿಗೆ ಸಮಸ್ಯೆ ಆಗಿದೆ. ಈ ಪರಿಸ್ಥಿತಿ ಸಮರೋಪಾದಿಯಲ್ಲಿ ಪರಿಹರಿಸಲು ಕೇಂದ್ರ ಸರ್ಕಾರದ ಸಹಕಾರ ಅಗತ್ಯ. ಇದಕ್ಕಾಗಿ 10 ಸಾವಿರ ಕೋಟಿ ಕೇಂದ್ರ ಸಹಾಯಧನ ನೀಡಲು ಒತ್ತಾಯ.
- ನೀಟ್ ಪರೀಕ್ಷೆಯಿಂದ ವಿದ್ಯಾರ್ಥಿಗಳಿಗೆ ಸಮಸ್ಯೆ ಆಗಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಕ್ಷಣ ರಾಜೀನಾಮೆ ನೀಡಬೇಕು. ಧರ್ಮೇಂದ್ರ ಪ್ರಧಾನ್ ವಜಾ ಮಾಡಬೇಕು ಎಂದು ಆಗ್ರಹಿಸಲಾಯಿತು.

## ಮುಖ್ಯ ಚುನಾವಣಾ ಆಯುಕ್ತರಿಗೆ ಮೈತ್ರಿ ದೂರು

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಕರ್ನಾಟಕದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರವು ಎಸ್‌ಐಆರ್ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ದುರುಪಯೋಗ ಮಾಡಿಕೊಂಡು ಮತದಾರರ ಪಟ್ಟಿಯನ್ನು ತಿರುಚುತ್ತಿರುವುದರ ವಿರುದ್ಧ ಜೆಡಿಎಸ್ ಮತ್ತು ಬಿಜೆಪಿ ನೇತೃತ್ವದ ಎನ್.ಡಿ.ಎ ನಿಯೋಗ ರಾಷ್ಟದ ಮುಖ್ಯ ಚುನಾವಣಾ ಆಯುಕ್ತರಿಗೆ ದೂರು ಸಲ್ಲಿಸಿತು.

ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಮತ್ತು ಪ್ರಲ್ಹಾದ ಜೋಶಿ ಅವರ ನೇತೃತ್ವದ ನಿಯೋಗವು ನವದೆಹಲಿಯಲ್ಲಿ ಮಂಗಳವಾರ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರಿಗೆ ರಾಜ್ಯ ಸರಕಾರ ಹಾಗೂ ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆ ಹಳಿತಪ್ಪಿರುವ ಬಗ್ಗೆ ವಿಸ್ತೃತವಾಗಿ ದಾಖಲೆಗಳ ಸಮೇತ ದೂರು ಸಲ್ಲಿಸಿದೆ.



### ಕೆಲ ಡಿ.ಸಿ.ಗಳ ಆಡಳಿತ ದುರುಪಯೋಗ..!

ರಾಜ್ಯದ ಆಡಳಿತ ಯಂತ್ರವನ್ನು, ಅದರಲ್ಲಿಯೂ ಮುಖ್ಯವಾಗಿ ಕೆಲ ಜಿಲ್ಲಾಧಿಕಾರಿಗಳನ್ನು ದುರುಪಯೋಗ ಮಾಡಿಕೊಂಡು ಸರ್ಕಾರ ಮತದಾರರ ಪಟ್ಟಿಯನ್ನು ಮನಸೋ ಇಚ್ಛೆ ತಿರುಚಿ ಅಕ್ರಮ ಮತಗಳು ಉಳಿದುಕೊಳ್ಳುವ ರೀತಿಯಲ್ಲಿ ಹುನ್ನಾರ ನಡೆಸುತ್ತಿದೆ ಎಂದು ಹಿರಿಯ ಸಚಿವರಿಬ್ಬರೂ ಮುಖ್ಯ ಚುನಾವಣಾ ಆಯುಕ್ತರಲ್ಲಿ ದೂರಿದ್ದಾರೆ.

ನಮ್ಮ ದೂರಿನ ಬಗ್ಗೆ ಮುಖ್ಯ ಆಯುಕ್ತರು ಕೂಲಂಕಷವಾಗಿ ಪರಿಶೀಲನೆ ಮಾಡುವ ಭರವಸೆ ನೀಡಿದ್ದಾರೆ. ಈಗಾಗಲೇ ಇಬ್ಬರು ವೀಕ್ಷರನ್ನು ರಾಜ್ಯಕ್ಕೆ ನೇಮಿಸಲಾಗಿದೆ. ಗ್ಯಾರಂಟಿ ಕಡಿತಗೊಳ್ಳುವ ಭಯ ಹುಟ್ಟಿಸಲಾಗುತ್ತಿದೆ. ಹೀಗಾಗಿ ರಾಜ್ಯದಲ್ಲಿ ನ್ಯಾಯಯುತವಾಗಿ ಎಸ್‌ಐಆರ್ ನಡೆಯಬೇಕು ಎಂದು ಒತ್ತಾಯಿಸಿದ್ದೇವೆ.

–ಎಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಚಿವ

## ಸಚಿವ ಸಂಪುಟ ವಿಸ್ತರಣೆ ನಮ್ಮ ಕೈಯಲ್ಲಿಲ್ಲ: ಸಚಿವ ಸತೀಶ್ ಜಾರಕಿಹೊಳಿ

## ಸಂಚಾರ ನಿಯಮ ಪಾಲಿಸಿ ನಿಮ್ಮ ಜೀವವನ್ನು ನೀವೇ ಕಾಪಾಡಿಕೊಳ್ಳಿ

ರಸ್ತೆ ಸುರಕ್ಷತೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಸಂಚಾರ ನಿಯಮಗಳನ್ನು ಪಾಲಿಸುವುದು ಕೇವಲ ಕಾನೂನು ಪಾಲನೆಯಲ್ಲ, ಅದು ನಮ್ಮ ಜೀವ ಹಾಗೂ ಇತರರ ಸುರಕ್ಷತೆಯನ್ನು ಕಾಪಾಡುವ ಮಹತ್ವದ ಕರ್ತವ್ಯವಾಗಿದೆ. ಅತಿವೇಗ, ನಿರ್ಲಕ್ಷ್ಯ ಚಾಲನೆ, ಮೊಬೈಲ್ ಬಳಕೆ, ಮದ್ಯಪಾನ ಮಾಡಿ ವಾಹನ ಚಲಾಯಿಸುವುದು ಮತ್ತು ಹೆಲ್ಮೆಟ್ ಅಥವಾ ಸೀಟ್‌ಬೆಲ್ಟ್ ಧರಿಸದಿರುವುದು ಅಪಘಾತಗಳಿಗೆ ಪ್ರಮುಖ ಕಾರಣಗಳಾಗಿವೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ವಾಹನ ಸವಾರರು ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ದ್ವಿಚಕ್ರ ವಾಹನ ಸವಾರರು ಹೆಲ್ಮೆಟ್ ಧರಿಸಬೇಕು, ನಾಲ್ಕು ಚಕ್ರ ವಾಹನಗಳಲ್ಲಿ ಸೀಟ್‌ಬೆಲ್ಟ್ ಕಡ್ಡಾಯವಾಗಿ ಬಳಸಬೇಕು. ಸಂಚಾರ ಸಂಕೇತಗಳನ್ನು ಗೌರವಿಸಿ, ನಿಗದಿತ ವೇಗದಲ್ಲೇ ವಾಹನ ಚಲಾಯಿಸಿದರೆ ಅನೇಕ ಅಪಘಾತಗಳನ್ನು ತಡೆಯಬಹುದು.

"ಸಂಚಾರ ನಿಯಮ ಪಾಲಿಸಿ– ತಮ್ಮ ರಕ್ಷಣೆ ಮಾಡಿಕೊಳ್ಳಿ" ಎಂಬ ಸಂದೇಶ ಪ್ರತಿಯೊಬ್ಬರ ಜೀವನದ ಧ್ಯೇಯವಾಗಬೇಕು. ಸುರಕ್ಷಿತ ಸಂಚಾರದಿಂದಲೇ ಸುರಕ್ಷಿತ ಸಮಾಜ ನಿರ್ಮಾಣ ಸಾಧ್ಯ.

## ಶಿಕ್ಷಣ ಎಂದರೆ ಏಕಾಗ್ರತೆ, ಅದರಿಂದ ಏನನ್ನಾದರೂ ಸಾಧಿಸಲು ಸಾಧ್ಯ



**ಹಗರಿಬೊಮ್ಮನಹಳ್ಳಿ:** ಶಿಕ್ಷಣ ಎಂದರೆ ಸ್ವಾಮಿ ವಿವೇಕಾನಂದರವರು ಹೇಳುವಂತೆ ಏಕಾಗ್ರತೆ, ಏಕಾಗ್ರತೆಯಿಂದ ಮಾತ್ರ ನಾವು ಬದುಕಿನಲ್ಲಿ ಏನನ್ನಾದರೂ ಸಾಧಿಸಲು ಸಾಧ್ಯವಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಸಚೇತಕ ಎನ್. ರವಿಕುಮಾರ್ ಅಭಿಪ್ರಾಯ ಪಟ್ಟರು.

ಅವರು ಪಟ್ಟಣದ ಶ್ರೀ ಕೃಷ್ಣ ಚಿತ್ರಮಂದಿರದಲ್ಲಿ ಗಂಗಾಮತ ಸಮುದಾಯದಿಂದ ಏರ್ಪಡಿಸಿದ್ದ ಸಾಧಕರಿಗೆ ಸನ್ಮಾನ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಹಾಗೂ ಅಂಬಿಗರ ಚೌಡಯ್ಯ ವೃತ್ತ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡುತ್ತಿದ್ದರು.

ವಿದ್ಯಾರ್ಥಿಗಳು ನಿರಂತರ ಪರಿಶ್ರಮವಹಿಸಿ ಅಧ್ಯಯನ ಮಾಡಬೇಕು, ಅದರ ಜೊತೆಗೆ ದೈಹಿಕ ವ್ಯಾಯಾಮ ಕೂಡ ಅತ್ಯಗತ್ಯವಾಗಿದೆ, ಮಾನಸಿಕ ಹಾಗೂ ದೈಹಿಕ ಸಮತೋಲನವನ್ನು ಕಾಯ್ದುಕೊಂಡಾಗ ಮಾತ್ರ ಮನುಷ್ಯರು ಯಶಸ್ಸನ್ನು ಸಾಧಿಸಲು ಸಾಧ್ಯ ಎಂದರು. ಗಂಗಾಮತ ವಿದ್ಯಾರ್ಥಿಗಳಲ್ಲಿ ಅತಿ ಹೆಚ್ಚು ಅಂಕ ಪಡೆದವರನ್ನು ಅವರು ಶ್ಲಾಘಿಸಿ, ಇನ್ನೂ ಹೆಚ್ಚೆಚ್ಚು ಮೆರಿಟನ್ನು ಹೊಂದುವುದರ ಮೂಲಕ ನಿಮ್ಮ ಜೀವನವನ್ನು ಸ್ವಾವಲಂಬಿಯಾಗಿ ಮಾಡಿಕೊಳ್ಳಿ ಎಂದು ಹಿತವಚನ ನೀಡಿದರು.

ಜನಪ್ರಿಯ ಶಾಸಕರಾದ ಕೆ. ನೇಮಿರಾಜ್ ನಾಯ್ಕ್ ಮಾತನಾಡಿ, ಪ್ರತಿಭೆಗಳು ಇರುವುದು ಗ್ರಾಮೀಣ ಪ್ರದೇಶಗಳಲ್ಲಿ, ಈ ದೇಶದ ಹೆಚ್ಚೆಚ್ಚು ಬುದ್ಧಿವಂತ ಜನರು ಬಂದಿರುವುದು ಗ್ರಾಮೀಣ ಪ್ರದೇಶಗಳಿಂದ. ಈ ಸ್ಪರ್ಧಾತ್ಮಕ ಯುಗದಲ್ಲಿ ನಾವೆಷ್ಟೇ ಕಷ್ಟಪಟ್ಟು ಓದಿದರು ಬದುಕು ತುಂಬಾ ಅಸಹನೀಯವಾಗಿದೆ. ಆದ್ದರಿಂದ ಬದುಕಿನ ಜೊತೆಗೆ ಸಂಸ್ಕಾರವಂತ ಮನುಷ್ಯರು ನಾವಾಗಬೇಕು ಎಂದು ಹೇಳಿದರು.

ಸಮಾಜದ ಜಿಲ್ಲಾಧ್ಯಕ್ಷ ಅಂಬಾಡಿ ನಾಗರಾಜ ಮಾತನಾಡಿ, ಜಿಲ್ಲೆಯಲ್ಲಿ ಅಂಬಿಗ ಸಮುದಾಯವು ಬಲಿಷ್ಠವಾಗಿದ್ದು ನಾವು ಯಾರ ತಂಟೆಗೂ ಹೋಗುವುದಿಲ್ಲ, ನಮ್ಮ ತಂಟೆಗೆ ಬಂದವರನ್ನು ಬಿಡುವುದಿಲ್ಲ ಎಂದು ಹೇಳಿದರಲ್ಲದೆ ನಮ್ಮ ಸಮುದಾಯಕ್ಕೂ ಕೂಡ ರಾಜಕೀಯ ಪ್ರಾತಿನಿಧ್ಯ ಬೇಕೇ ಬೇಕು ಎಂದು ತಿಳಿಸಿದರು.

ಇದಕ್ಕೂ ಮುನ್ನ ಪಟ್ಟಣದ ಬಂಡಿಹಳ್ಳಿ ಕ್ರಾಸ್ ನಲ್ಲಿರುವ ರಸ್ತೆಯಲ್ಲಿ ಸ್ವಾಮೀಜಿಗಳು, ಗಣ್ಯರು ಹಾಗೂ ಸಮಾಜದ ಪ್ರಮುಖರನ್ನೊಳಗೊಂಡು ಅಂಬಿಗರ ಚೌಡಯ್ಯನವರ ವೃತ್ತದ ನಾಮಫಲಕವನ್ನು ಅನಾವರಣಗೊಳಿಸಿದರು. ಸಮಾರಂಭದಲ್ಲಿ ಗಾಳೆಪ್ಪ ಗಾದಿಗನೂರು ಅವರಿಗೆ ಮಹರ್ಷಿ ವೇದವ್ಯಾಸ ಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಹಾಗೆಯೇ ವೆಂಕಟೇಶ್ ಬಾರ್ಕೆರ, ಭೀಮಣ್ಣ ಗಜಾಪುರ, ಡಾಕ್ಟರ್ ಬಿ ಹೊಸೂರಪ್ಪ, ಡಾಕ್ಟರ್ ಸೋಮಶೇಖರ ಕಬ್ಬೇರ ಇವರನ್ನು ಕೂಡ ಪ್ರಶಸ್ತಿಗೆ ಭಾಜನರನ್ನಾಗಿ ಮಾಡಲಾಯಿತು. ಅಲ್ಲದೆ, ಬೆಸ್ತ ಗಂಗಾಮತ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಕೊಟ್ಟು ಸನ್ಮಾನ ಮಾಡಲಾಯಿತು.

ಹಾಗೆಯೇ ಅಂಬಿಗರ ಚೌಡಯ್ಯ ವೃತ್ತದಿಂದ ಶ್ರೀ ಕೃಷ್ಣ ಚಿತ್ರಮಂದಿರದ ವರೆಗೆ ಸಮಾಜದ ಮಹಿಳೆಯರು ಕುಂಭ ಮೆರವಣಿಗೆ ಹಾಗೂ ವಿವಿಧ ವಾದ್ಯಗಳೊಂದಿಗೆ ಮೆರವಣಿಗೆಯನ್ನು ಮಾಡಲಾಯಿತು.

ಸಮಾರಂಭದಲ್ಲಿ ನಂದಿಪುರ ಡಾ. ಮಹೇಶ್ವರ ಶ್ರೀಗಳು ಕಡಲಬಾಳು ಶಾಖಾ ಗವಿಮಠದ ಪ್ರಶಾಂತ ಶ್ರೀಗಳು, ಹಾಲು ಸಿದ್ದೇಶ್ವರ ಶ್ರೀಗಳು, ಹಂಪಸಾಗರ ನವಲಿ ಮಠದ ರುದ್ರಮುನಿ ಶಿವಾಚಾರ್ಯ ಶ್ರೀಗಳು ಸಾನಿಧ್ಯ ವಹಿಸಿದ್ದರು. ಸಮಾಜದ ತಾಲೂಕ ಅಧ್ಯಕ್ಷ ಅಂಬಾಡಿ ಮಹೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರ್ದಾರ್ ಯಮನೂರ್, ಮುಖಂಡರಾದ ಶಿವಕುಮಾರ್ ನಾಟೀಕರ್, ಕ್ಷೇತ್ರ ಜೆಡಿಎಸ್ ಅಧ್ಯಕ್ಷ ವೈ ಮಲ್ಲಿಕಾರ್ಜುನ್, ತಾಲೂಕು ವಿಶ್ವಕರ್ಮ ಸಂಘದ ಅಧ್ಯಕ್ಷ ಸಿಎಚ್ ಸಿದ್ದರಾಜು, ಪುರಸಭೆ ಸದಸ್ಯ ನಾಗರಾಜ್ ಜನ್ನು, ಜಿ.ಕೆ. ಮಂಜುನಾಥ್ ಹಾಗೂ ಮತ್ತಿತರ ಮುಖಂಡರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಿಕ್ಷಕ ಕೆಎಂ ಶಿವಶಂಕರಯ್ಯ ನಿರೂಪಿಸಿದರು. ಪ್ರಾರ್ಥನೆಯನ್ನು ಶಾರದಾ ಮಂಜುನಾಥ್ ಹಾಗೂ ಅವರ ತಂಡ ನೆರವೇರಿಸಿದರು.

# ಅನುಭವ ಮಂಟಪದಲ್ಲಿ ಇಷ್ಟಲಿಂಗ ಧ್ಯಾನ ಮಾಡಿದ ಸಿಎಂ





• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಬಸವಕಲ್ಯಾಣದಲ್ಲಿ ನಿರ್ಮಾಣ ಹಂತದಲ್ಲಿರುವ ಐತಿಹಾಸಿಕ ಅನುಭವ ಮಂಟಪಕ್ಕೆ ಸೋಮವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ ನೀಡಿ ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿದರು. ಇದೇ ವೇಳೆ ಬಸವಾದಿ ಶರಣರು ಪ್ರತಿಪಾದಿಸಿದ ಇಷ್ಟಲಿಂಗವನ್ನು ತಮ್ಮ ಹಸ್ತದಲ್ಲಿಟ್ಟುಕೊಂಡು ಸುಮಾರು ಎರಡು ನಿಮಿಷಗಳ ಕಾಲ ಧ್ಯಾನ ಮಾಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಗಜ್ಯೋತಿ ಬಸವೇಶ್ವರರ ತತ್ವ, ಆದರ್ಶ ಮತ್ತು ಸಂದೇಶಗಳು ವಿಶ್ವದಾದ್ಯಂತ ಪ್ರಚಾರವಾಗುತ್ತಿವೆ ನಮ್ಮ ಸರಕಾರವು ಬಸವಣ್ಣ ಅವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರಾಗಿ ರಾಜ್ಯ ಸರ್ಕಾರ ಘೋಷಿಸಿದೆ. ಅವರ ವಿಚಾರಧಾರೆಗಳು ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿದ್ದು, ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಮಾನವೀಯ ಮೌಲ್ಯಗಳನ್ನು ಬಲಪಡಿಸುತ್ತಿವೆ ಎಂದು ಹೇಳಿದರು.

ಸುಮಾರು ರೂ.740 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ನೂತನ ಅನುಭವ ಮಂಟಪದ ಕಾಮಗಾರಿ ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲೇ ಪೂರ್ಣಗೊಳಿಸಿ ರಾಜ್ಯದ ಜನತೆಗೆ ಸಮರ್ಪಿಸಲಾಗುವುದು ಎಂದು ತಿಳಿಸಿದರು.

12ನೇ ಶತಮಾನದಲ್ಲಿ ವಿಶ್ವಗುರು ಬಸವಣ್ಣ ಅವರು ಸಮಾಜದ ಎಲ್ಲ ವರ್ಗದ ಶ್ರಮಜೀವಿಗಳನ್ನು ಒಗ್ಗೂಡಿಸಿ ಪ್ರಜಾಪ್ರಭುತ್ವದ ಪರಿಕಲ್ಪನೆಗೆ ನಾಂದಿ ಹಾಡಿದರು. ಸುಮಾರು 770 ಶರಣರನ್ನು ಒಳಗೊಂಡ ಅನುಭವ ಮಂಟಪದಲ್ಲಿ ಸಮಾಜದ ಅಂಕುಡೊಂಕುಗಳನ್ನು ಚರ್ಚಿಸಿ, ಮೂಢನಂಬಿಕೆಗಳನ್ನು ತೊಡೆದುಹಾಕುವ ಕಾರ್ಯ ನಡೆಸಿದರು. ಕಾಯಕವೇ ಕೈಲಾಸ ಎಂಬ ತತ್ವವನ್ನು ಸಾರಿದ ಬಸವಣ್ಣ, ಇಷ್ಟಲಿಂಗ ಶಿವಯೋಗ ಸಾಧನೆಯ ಮೂಲಕ ಮನುಷ್ಯನು ದೈವತ್ವವನ್ನು ಹೊಂದಬಹುದೆಂಬ ಸಂದೇಶವನ್ನು ಸಮಾಜಕ್ಕೆ ನೀಡಿದರು.

ಮನಸ್ಸಿಗೆ ನೆಮ್ಮದಿ, ವ್ಯಕ್ತಿತ್ವ ವಿಕಾಸ ಹಾಗೂ ಪರಮಾತ್ಮನ ಅನುಭೂತಿಗೆ ಬಸವಾದಿ ಶರಣರು ನೀಡಿರುವ ಇಷ್ಟಲಿಂಗ ಶಿವಯೋಗ ಸಾಧನೆಯು ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಚಿವರಾದ ಈಶ್ವರ್ ಖಂಡ್ರೆ ಹಾಗೂ ಶರಣಪ್ರಕಾಶ ಪಾಟೀಲ, ಸಂಸದ ಸಾಗರ ಖಂಡ್ರೆ, ಶಾಸಕರಾದ ರಹೀಂ ಖಾನ್, ಶರಣು ಸಲಗಾರ, ಡಾ.ಸಿದ್ದು ಪಾಟೀಲ್, ಡಾ. ಶೈಲೇಂದ್ರ ಬೆಲ್ದಾಳೆ, ವಿಧಾನಪರಿಷತ್ ಸದಸ್ಯ ಬಸನಗೌಡ ಮಾಜಿ ಎಂಎಲ್ಸಿ ವಿಜಯ್ ಸಿಂಗ್, ಹಿರಿಯ ಐಎಎಸ್ ಅಧಿಕಾರಿಗಳಾದ ಎಲ್.ಕೆ. ಅತೀಕ್, ಶಾಲಿನಿ ರಜನೀಶ್, ಗೌರವ್ ಗುಪ್ತ, , ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ:ಗಿರೀಶ್ ಬಡೋಲೆ, ಮಾಲಾ ಬಿ. ನಾರಾಯಣ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಮುಖಂಡರು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## ರಂಗಮಂದಿರ ಮರು ನಿರ್ಮಾಣಕ್ಕೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಕರ್ನಾಟಕ ವಿದ್ಯಾರ್ಥಿ ಸಂಘಟನೆ (ಕೆ.ವಿ.ಎಸ್) ವತಿಯಿಂದ ಗಂಗಾವತಿಯ ಸರ್ಕಾರಿ ಜೂನಿಯರ್ ಕಾಲೇಜು ಆವರಣದಲ್ಲಿರುವ ಬಯಲು ರಂಗಮಂದಿರವನ್ನು ಮರು ನಿರ್ಮಾಣ ಮಾಡಬೇಕು ಹಾಗೂ ಶಾಲೆ–ಕಾಲೇಜಿನ ಮುಂಭಾಗದಲ್ಲಿರುವ ಮೈದಾನವನ್ನು ವಿದ್ಯಾರ್ಥಿಗಳ ಬಳಕೆಗೆ ಮಾತ್ರ ಶಾಶ್ವತವಾಗಿ ಮೀಸಲಿಡಬೇಕು ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು, ಪೋಷಕರು, ಹಳೆಯ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿದ್ಯಾರ್ಥಿಗಳ ನ್ಯಾಯಸಮ್ಮತ ಬೇಡಿಕೆಗಳಿಗೆ ಬೆಂಬಲ ವ್ಯಕ್ತಪಡಿಸಿದರು. ಬಳಿಕ ನಗರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿ, ಬಯಲು ರಂಗಮಂದಿರದ ಸ್ಥಳದಲ್ಲಿ ಯಾವುದೇ ರೀತಿಯ ಫುಡ್ ಕೋರ್ಟ್ ಅಥವಾ ವಾಣಿಜ್ಯ ಚಟುವಟಿಕೆಗಳಿಗೆ ಅವಕಾಶ ನೀಡಬಾರದು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ



ವಿದ್ಯಾರ್ಥಿ ಸಂಘಟನೆ (ಕೆ.ವಿ.ಎಸ್) ಮುಖಂಡ ದುರ್ಗೇಶ್, "ಈ ಪ್ರದೇಶದಲ್ಲಿ ಸರ್ಕಾರಿ ಜೂನಿಯರ್ ಕಾಲೇಜು, ಎಂಎನ್‌ಎಂ ಬಾಲಕಿಯರ ಕಾಲೇಜು ಸೇರಿದಂತೆ ಹಲವು ಶಾಲೆ–ಕಾಲೇಜುಗಳಿದ್ದು, ಸುಮಾರು 3,000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ಆದ್ದರಿಂದ ಈ ಸ್ಥಳವು ವಿದ್ಯಾರ್ಥಿಗಳ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳಿಗೆ ಅತ್ಯಂತ ಅಗತ್ಯವಾಗಿದೆ. ಬಯಲು ರಂಗಮಂದಿರವನ್ನು ಪುನರ್‌ನಿರ್ಮಾಣ ಮಾಡಬೇಕೇ ಹೊರತು, ಅದರ ಜಾಗದಲ್ಲಿ ಫುಡ್ ಕೋರ್ಟ್ ಅಥವಾ ಇತರೆ ವಾಣಿಜ್ಯ ಚಟುವಟಿಕೆಗಳಿಗೆ ಅವಕಾಶ ನೀಡಬಾರದು" ಎಂದು ಒತ್ತಾಯಿಸಿದರು.

## ಇ–ಪೌತಿ: ಕಾಲಮಿತಿಯೊಳಗೆ ಇತ್ಯರ್ಥಗೊಳಿಸಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಕಲಬುರಗಿ ಕಂದಾಯ ವಿಭಾಗದಲ್ಲಿ ಬಾಕಿ ಉಳಿದಿರುವ 2,23,190 ಇ–ಪೌತಿ ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥಗೊಳಿಸುವಂತೆ ಉಪ ಮುಖ್ಯಮಂತ್ರಿಗಳು ಮತ್ತು ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ ಅವರು ಸೂಚಿಸಿದರು.

ಒಟ್ಟು 3,57,024 ಪ್ರಕರಣಗಳನ್ನು ಇ–ಪೌತಿ ಖಾತೆ ಮಾಡಲು ಗುರುತಿಸಲಾಗಿತ್ತು. ಅದರಲ್ಲಿ 1,33,834 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ವಿವಿಧ ಕಾರಣಗಳಿಂದ ಬಾಕಿ ಉಳಿದಿರುವ 2,23,190 ಇ–ಪೌತಿ ಪ್ರಕರಣಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥಗೊಳಿಸಲು ಕ್ರಮ ವಹಿಸಬೇಕು ಎಂದು ತಿಳಿಸಿದರು.

ವಿಜಯನಗರ, ಕಲಬುರಗಿ, ಬೀದರ್ ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಅತಿ ಹೆಚ್ಚಿನ ಇ–ಪೌತಿ ಪ್ರಕರಣಗಳು ಬಾಕಿ ಉಳಿದಿದ್ದು, ಇವುಗಳನ್ನು ಆದ್ಯತೆಯ ಮೇರೆಗೆ 2 ತಿಂಗಳೊಳಗಾಗಿ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ಒಟ್ಟು 17,576 ದರ್ಖಾಸ್ತು ಪ್ರಕರಣಗಳಲ್ಲಿ 10,775 ಪ್ರಕರಣಗಳಿಗೆ ಅನುಬಂಧ 1ಅನ್ನು ಮಂಜೂರಾತಿ ಕ್ರಮಬದ್ಧವಾಗಿರುತ್ತದೆ ಎಂದು ತಹಶೀಲ್ದಾರರು ಅನುಮೋದಿಸಿದ್ದು, ಈ ಪ್ರಕರಣಗಳನ್ನು ಕೂಡಲೇ ಪೋಡಿ ದುರಸ್ತಿ ಮಾಡಿ ಆರ್‌ಟಿಸಿ ನೀಡಲು ಕ್ರಮವಹಿಸಬೇಕು. ಈ ಪೈಕಿ ವಿಜಯನಗರ, ಕೊಪ್ಪಳ, ಕಲಬುರಗಿ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಕರಣಗಳಿದ್ದು, ಸಂಬಂಧಿತ ಜಿಲ್ಲಾಧಿಕಾರಿಗಳು ಆದ್ಯತೆಯ ಮೇರೆಗೆ ಇತ್ಯರ್ಥ ಮಾಡಬೇಕು ಎಂದರು.

ಕಲಬುರಗಿ ವಿಭಾಗದಲ್ಲಿ ಒಟ್ಟು 1,483 ಹೊಸ ಕಂದಾಯ ಗ್ರಾಮ ರಚನೆ ಮಾಡಬೇಕಾಗಿದ್ದು, ಜನಗಣತಿ 2027ರ ಕಾರಣ ಅಂತಿಮ ಅಧಿಸೂಚನೆ ಹೊರಡಿಸಲು ಬಾಕಿಯಿರುವ ಪ್ರಕರಣಗಳಲ್ಲಿ ಜನಗಣತಿ ಕಾರ್ಯಪೂರ್ಣಗೊಂಡ ನಂತರ ಯಾವುದೇ ವಿಳಂಬಕ್ಕೆ ಆಸ್ಪದ ನೀಡದೆ ಕ್ರಮವಹಿಸಬೇಕು ಎಂದು ತಿಳಿಸಿದರು.

ಗುರುತಿಸಿರುವ 1,483 ಗ್ರಾಮಗಳ ಪೈಕಿ 1,048 ಗ್ರಾಮಗಳಿಗೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದು, ಉಳಿದ 435 ಗ್ರಾಮಗಳ ಕುರಿತು ಅಧಿಸೂಚನೆ ಹೊರಡಿಸಬೇಕು. ಈ ಪೈಕಿ ಬೀದರ್ ಜಿಲ್ಲೆಯಲ್ಲೇ 150 ಪ್ರಕರಣಗಳು ಬಾಕಿ ಇರುತ್ತವೆ. ವಿಜಯನಗರ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲೂ ಹೆಚ್ಚು ಪ್ರಕರಣಗಳು ಬಾಕಿ ಇರುತ್ತವೆ. ಈ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕಿದೆ ಎಂದರು.

# ಬಹುಮನಿ ಕೋಟೆ ಅಭಿವೃದ್ಧಿಪಡಿಸಲು ಕರವೇ ಮನವಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ನಗರದ ಹೃದಯ ಭಾಗದಲ್ಲಿರು ಬಹುಮನಿ ಕೋಟೆಯನ್ನು ಅಭಿವೃದ್ದಿಪಡಿಸಿ ಹಾಗೂ ಕೋಟೆಯನ್ನು ಪ್ರವಾಸಿಗರ ತಾಣವಾಗಿ ಮಾಡಬೇಕು ಎಂದು ಕರವೇ(ಪ್ರವೀಣ ಶೆಟ್ಟಿ) ಬಣದ ನಗರ ಅಧ್ಯಕ್ಷ ಶರಣು ಬಿ ದ್ಯಾಮಾ ನೇತೃತ್ವದಲ್ಲಿ ಸಿಎಂ ಡಿ.ಕೆ.ಶಿವಕುಮಾರ ಅವರಿಗೆ ಮನವಿ ಪತ್ರ ಸಲ್ಲಿಸಿದ್ದರು.

ಈ ಕುರಿತು ಸಿಎಂಗೆ ಮನವಿ ಸಲ್ಲಿಸಿದ ಅವರು, ದೇಶದ ಅತಿ ದೊಡ್ಡ ಪ್ರಾಚೀನ ತೋಪನ್ನು ಹೊಂದಿರುವ ಕಲಬುರಗಿಯ ಬಹಮನಿ ಕೋಟೆಯಲ್ಲಿ ಸರಿಯಾದ ನಡಿಗೆ ಪಥ ಇಲ್ಲದಿರುವುದು ರಸ್ತೆಯಲ್ಲಿ ನೀರು ಹರಿಯುತ್ತಿರುವುದು. ಅಲ್ಲದೇ ಬೃಹತ್ ತೋಪು ವೀಕ್ಷಣೆಗೆ ಹೋಗುವ ದಾರಿ ಸಮರ್ಪಕವಾಗಿ ಇರುವುದಿಲ್ಲ. ಕೋಟೆಯಲ್ಲಿ ಗಿಡ–ಗಂಟಿಗಳು ಬೆಳೆದು ಕೋಟೆ ಹಾಳಾಗುತ್ತಿದೆ. ಹಾಗೂ ಕೋಟೆಯಲ್ಲಿ ವಾಸವಾಗಿರುವ ಜನರನ್ನು ಪ್ರತ್ಯೇಕವಾಗಿ ಮನೆ ನೀಡಿ



ಸ್ಥಳಾಂತರಿಸುವದು. ಕೋಟೆಯಲ್ಲಿ ಸಾರ್ಜನಿಕರಿಗೆ ಮುಕ್ತವಾಗಿ ಓಡಾಟ ಮಾಡಲು ಅನುಕೂಲ ಮಾಡಿಕೊಡಬೇಕು. ಮತ್ತು ಕಲಬುರಗಿ ಬಹಮನಿ ಕೋಟೆ ಅಭಿವೃದ್ಧಿ ಪಡಿಸಿ ಪ್ರವಾಸಿಗರ ತಾಣವಾಗಿ ನಿರ್ಮಾಣ ಮಾಡುವುದು, ಸಾರ್ವಜನಿಕರಿಗೆ ತಂಗುದಾಣ, ಲೈಟಿಂಗ್ ವ್ಯವಸ್ಥೆ, ಕುಡಿಯುವ ನೀರು, ಶೌಚಾಲಯ ನಿರ್ಮಾಣ ವ್ಯವಸ್ಥೆ ಸೇರಿದಂತೆ ಇತರೆ ಬೇಡಿಕೆಗಳಿಗೆ ಸ್ಪಂದಿಸಬೇಕು. ಆದಕಾರಣ ತಾವುಗಳು ಸಂಬಂಧಪಟ್ಟ ಪ್ರವಾಸೋದ್ಯಮ ಇಲಾಖೆಯಿಂದ ಕಲಬುರಗಿ ಬಹಮನಿ ಕೋಟೆ ಅಭಿವೃದ್ಧಿ ಪಡಿಸಿ, ಪ್ರವಾಸಿಗರ ತಾಣವಾಗಿ ನಿರ್ಮಾಣ ಮಾಡಿ ಸಾರ್ವಜನಿಕರಿಗೆ ವೀಕ್ಷಣೆ ಮಾಡಲು ಅನುವು ಮಾಡಿಕೊಡಬೇಕೆಂದು ಅವರು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಸಂಘಟನೆಯ ಕಲ್ಯಾಣ ಕರ್ನಾಟಕ ಪ್ರಧಾನ ಕಾರ್ಯದರ್ಶಿ ಗೋಪಾಲ ನಾಟೀಕಾರ, ಜಿಲ್ಲಾಧ್ಯಕ್ಷ ವಿಶ್ವನಾಥ ಪಾಟೀಲ, ಕಲಬುರಗಿ ತಾಲೂಕು ಅಧ್ಯಕ್ಷ ವಿಜಯಕುಮಾರ ಅಂಕಲಗಿ, ಮಂಜುನಾಥ ಮಠಪತಿ, ಮನೋಹರ ಬೀರನೂರ ಸೇರಿದಂತೆ ಇತರರು ಇದ್ದರು.

# ಸ್ವಾಸ್ಥ ಸಂಕಲ್ಪದಿಂದಲೇ ಸದೃಢ ಸಮಾಜ ನಿರ್ಮಾಣ





• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಭಾಲ್ಕಿ: ಆರೋಗ್ಯವಂತ ವ್ಯಕ್ತಿಗಳಿಂದಲೇ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ. ಉತ್ತಮ ಆರೋಗ್ಯ, ಉನ್ನತ ಸಂಸ್ಕಾರ ಹಾಗೂ ಸಕಾರಾತ್ಮಕ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡಾಗ ಮಾತ್ರ ಸದೃಢ ಸಮಾಜ ನಿರ್ಮಾಣವಾಗುತ್ತದೆ ಎಂದು ಖಡಕೇಶ್ವರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಆನಂದ ಕಲ್ಯಾಣೆ ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ. ಟ್ರಸ್ಟ್ ಭಾಲ್ಕಿ ಹಾಗೂ ವಿಶ್ವ ಹಿಂದೂ ಪರಿಷತ್ ಸಂಚಾಲಿತ ಖಡಕೇಶ್ವರ ಪ್ರೌಢಶಾಲೆಯ ಸಂಯುಕ್ತ ಆಶ್ರಯದಲ್ಲಿ ಶಾಲಾ ಆವರಣದಲ್ಲಿ ಆಯೋಜಿಸಿದ್ದ 'ಸ್ವಾಸ್ಥ ಸಂಕಲ್ಪ' ಜನಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಶಿವಲಿಂಗ ಕುಂಬಾರ, ದೈಹಿಕ, ಮಾನಸಿಕ ಹಾಗೂ ನೈತಿಕವಾಗಿ ಸದೃಢ ಯುವ ಸಮುದಾಯವೇ ದೇಶದ ಶಕ್ತಿಯಾಗಿದ್ದು, ಉತ್ತಮ ಸಂಸ್ಕಾರ ಮತ್ತು ಶಿಸ್ತುಬದ್ಧ ಜೀವನವೇ ರಾಷ್ಟ್ರದ ಭದ್ರ ಅಡಿಪಾಯ ಎಂದು ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಸಂತೋಷ್ ನಾಯಕ್ ಮಾತನಾಡಿ, ಸಂಸ್ಥೆ ಜಾರಿಗೊಳಿಸುತ್ತಿರುವ ವಿವಿಧ ಜನಪರ ಯೋಜನೆಗಳ ಕುರಿತು ಮಾಹಿತಿ ನೀಡಿ, ದುಶ್ಚಟ ಮುಕ್ತ ಹಾಗೂ ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಇಂತಹ ಜಾಗೃತಿ ಕಾರ್ಯಕ್ರಮಗಳು ಅತ್ಯಂತ ಪರಿಣಾಮಕಾರಿ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿ ಪರಶುರಾಮ ಕರಣಂ ವಿದ್ಯಾರ್ಥಿಗಳಿಗೆ ಸಕಾರಾತ್ಮಕ ಚಿಂತನೆ, ಉತ್ತಮ ಮೌಲ್ಯಗಳು ಹಾಗೂ ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು. ಮದ್ಯ, ಗುಟ್ಕಾ, ಬೀಡಿ ಹಾಗೂ ಸಿಗರೇಟ್‌ನಂತಹ ದುಶ್ಚಟಗಳಷ್ಟೇ ಅಲ್ಲ, ನಕಾರಾತ್ಮಕ ಚಿಂತನೆಗಳೂ ವ್ಯಕ್ತಿತ್ವ ಮತ್ತು ಆರೋಗ್ಯವನ್ನು ಹಾಳುಮಾಡುತ್ತವೆ. ಆದ್ದರಿಂದ ಉತ್ತಮ ಚಿಂತನೆ ಮತ್ತು ಶಿಸ್ತುಬದ್ಧ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜನಜಾಗೃತಿ ವೇದಿಕೆಯ ಮಾಧ್ಯಮ ಸಲಹೆಗಾರ ಸಂತೋಷ್ ಪಾಟೀಲ ಮಾತನಾಡಿ, ದೇಶದ ನಿಜವಾದ ಆದರ್ಶ ವ್ಯಕ್ತಿಗಳು ಗಡಿಯಲ್ಲಿ ದೇಶವನ್ನು ಕಾಯುವ ಸೈನಿಕರು ಮತ್ತು ಅನ್ನದಾತ ರೈತರು. ಅವರ ಸೇವೆ, ತ್ಯಾಗ ಮತ್ತು ದೇಶಪ್ರೇಮ ಯುವಜನತೆಗೆ ಪ್ರೇರಣೆಯಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಪ್ರಾರ್ಥನಾ ಗೀತೆ ಹಾಡಿದರು. ಶಾಲೆಯ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಶಿವಾನಂದ ಲಕಾಟೆ ಕಾರ್ಯಕ್ರಮ ನಿರೂಪಿಸಿ, ಸೇವಾ ಪ್ರತಿನಿಧಿ ಸುರೇಖಾ ಕಲಶೆಟ್ಟಿ ವಂದಿಸಿದರು.

# ಮಕ್ಕಳ ಬೆಳವಣಿಗೆಯಲ್ಲಿ ತಾಯಿಯ ಪಾತ್ರ ಅತ್ಯಂತ ಮುಖ್ಯ

• ಮಲ್ಲಮ್ಮ ನುಡಿ ವಾರ್ತೆ ಬೀದರ



ಜು.7: ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತದ ಆವರಣದಲ್ಲಿ ಸಹಕಾರಿಯು 25ನೇ ವರ್ಷದ ರಜತ ಮೋಹತ್ಸವದ ಅಂಗವಾಗಿ "ಮಹಿಳಾ ಸ್ವಾವಲಂಬಿ ಸಂಕಲ್ಪ" ಕಾರ್ಯಕ್ರಮವನ್ನು ಉಧ್ಘಾಟಿಸಿ ಸಹಕಾರಿಯ ಅಧ್ಯಕ್ಷರಾದ ಶ್ರೀ ಗುರುನಾಥ ಜಾಂತಿಕರ್‌ರವರು ಮಾತನಾಡುತ್ತಾ ಬೀದರ ಜಿಲ್ಲೆ ಜನತೆಗೆ ಅನೇಕ ಯೋಜನೆಗಳನ್ನು ಹಮ್ಮಿಕೊಳಲಾಗಿದೆ. ಮಕ್ಕಳ ಬೆಳವಣಿಗೆಯಲ್ಲಿ ತಾಯಿಯ ಪಾತ್ರ ಅತ್ಯಂತ ಮುಖ್ಯವಾಗಿರುತ್ತದೆ. ಉತ್ತಮ ಸಾಮಾಜ ನಿರ್ಮಾಣ ಮಾಡುವುದರಲ್ಲಿ ಮಹಿಳೆಯ ಪಾತ್ರ ಮುಖ್ಯವಾಗಿರುತ್ತದೆ. ಜನರ ಆರ್ಥಿಕ ಸಾಮಾಜಿಕ ಹಾಗೂ ಶೈಕ್ಷಣಿಕ ಬೆಳವಣಿಗೆಗಾಗಿ ಹಾಗೂ ಮಹಿಳೆಯರ ತಮ್ಮ ಆರೋಗ್ಯ ಹಾಗೂ ಆರ್ಥಿಕ ಸ್ವಾವಲಂಬನೆಗಾಗಿ ಮಹಿಳೆಯರಿಗಾಗಿ ಜಾಗ್ರತಿ ಮೂಡಿಸುವ ಕೆಲಸ ಆಗಬೇಕಾಗಿದೆ, ಸಹಕಾರಿಯು ಬೀದರ ಜಿಲ್ಲೆಯ ಜನತೆಗೆ ಕಳೆದ 25 ವರ್ಷಗಳಿಂದ ಸದಾ ನಿಮ್ಮೊಂದಿಗೆ ಕಾರ್ಯಮಾಡುತ್ತಿದೆ ಎಂದು ನುಡಿದರು. ಕಾರ್ಯಕ್ರಮದ ಉಧ್ಘಾಟನೆಯಲ್ಲಿ ಭಾಗವಹಿಸಿ ಡಾ. ಎ.ಸಿ ಲಲಿತಮ್ಮಾ ಮಾತನಾಡುತ್ತಾ ಸದಸ್ಯರು ಮತ್ತು ನಿರ್ದೇಶಕರ ಮಂಡಳಿಯವರಲ್ಲಿ ಸಹಕಾರವಿದ್ದಾಗ ಮಾತ್ರ ಸಂಸ್ಥೆಯು ಇಷ್ಟು ಎತ್ತರಕ್ಕೆ ಬೆಳೆಯಲು ಮಾತ್ರ ಸಾದ್ಯ ಎಂದು ನುಡಿದರು. ಮಹಿಳೆಯರಲ್ಲಿರುವ ತಾಳ್ಮೆ ಶಕ್ತಿಯು ಉತ್ತಮ ಸಾಮಾಜ ಹಾಗೂ ಉತ್ತಮ ಕುಟುಂಬ ಬೆಳೆಸಲು ಸಾದ್ಯ ಎಂದು ಹೇಳಿದರು, ಇತ್ತಿಚಿನ ದಿನಗಳಲ್ಲಿ ಚಿಕ್ಕ ಚಿಕ್ಕ ಮಕ್ಕಳು ಮಾದಕ ವ್ಯಸನಕ್ಕೆ ಒಳಗಾಗುತ್ತಿದ್ದಾರೆ ಅದಕ್ಕಾಗಿ ತಾಯಿಂದಿರು ಮಕ್ಕಳ ಕಡೆ ಗಮನವಿಡಬೇಕೆಂದು ನುಡಿದರು ಕಾರ್ಯಕ್ರಮದಲ್ಲಿ ಸನ್ಮಾನವನ್ನು ಸ್ವಿಕರಿಸಿ ಡಾ. ಗುರಮ್ಮಾ ಸಿದ್ದಾರಡ್ಡಿ ಮಾತನಾಡುತ್ತಾ ಹೆಣ್ಣು ಕುಟುಂಬದ ಕಣ್ಣು ಎಂದು ಹೇಳಿದರು ಮೊದಲು ಮನೆಗೆದ್ದು ನಂತರ ಸಾಮಾಜವನ್ನು ಗೆಲ್ಲಬೇಕೆಂದು ಹೇಳಿದರು ಸಂಸಾರ ಚನ್ನಾಗಿದ್ದರೆ ಮಾತ್ರ ಸಾಮಾಜದಲ್ಲಿ ಮಹಿಳೆಯರಿಗೆ ಉತ್ತಮ ಗೌರವ ಸಾದ್ಯ ಎಂದು ಹೇಳಿದರು, ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ ಶ್ರೀಮತಿ ಉಲ್ಲಾಸಿನಿ ಮುದಾಳೆಯವರು ಶಿಕ್ಷಣ-ಕ್ಕೆ ಇರುವ ಮಹತ್ವ ಕುರಿತು ಹೇಳಿದರು ಇತಿಚ್ಚಿಗೆ 15 ವರ್ಷದ ಬಾಲಕಿಯ ಮೇಲೆ ಆದಂತಹ ಅತ್ಯಾಚಾರವನ್ನು ನಮ್ಮ ನಾಗರಿಕ ಸಾಮಾಜವು ಖಂಡಿಸಬೇಕೆಂದು ಹೇಳಿದರು. ಡಾ. ಆರತಿ ರಘು ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ ಭಾರತೀಯ ಕುಟುಂಬ ಯೋಜನೆ ಬಗ್ಗೆ ನಮ್ಮ ಸಂಸ್ಥೆಯಲ್ಲಿ ಸುರಕ್ಷಿತವಾದಂತಹ ಶಸ್ತ್ರ ಚಿಕಿತ್ಸೆ ಮಾಡುತ್ತೆವೆ. ಗರ್ಭಕೋಶದ ಕ್ಯಾನಸರ್ ಬಗ್ಗೆ ತಿಳಿಹೇಳಿದರು ಮತ್ತು ಪ್ರತಿ ಯೋಬ್ಬ ಮಹಿಳೆಯರು ವರ್ಷದಲ್ಲಿ ಒಮ್ಮೆಯಾದರು ಚಿಕಿತ್ಸೆ ತಪಾಸಣೆ ಮಾಡಿಸಬೇಕೆಂದು ಮಾರ್ಮಿಕವಾಗಿ ನುಡಿದರು. ಕಾರ್ಯಕ್ರಮದಲ್ಲಿ ರೇಖಾ ಚಂದಾ ಆರ್ಥಿಕ ಉಳಿತಾಯದ ಬಗ್ಗೆ ಮಾತನಾಡಿದರು, ಕಾರ್ಯಕ್ರಮದಲ್ಲಿ ವಿವಿಧ ಬಡಾವಣೆಯ ಮಹಿಳೆಯರು ಭಾಗವಹಿಸಿದರು ಸಹಕಾರಿಯ ನಿರ್ದೇಶಕ ಮಂಡಳಿಯವರು ಭಾಗವಹಿಸಿದರು ಹಾಗೂ ಕಾರ್ಯಕ್ರಮವನ್ನು ನಿರ್ದೇಶಕರಾದ ಶ್ರೀಮತಿ ಪದ್ಮಜಾ ಜೆ. ಪೋದ್ದಾರ ಸ್ವಾಗತ ಮತ್ತು ಪ್ರಸ್ತಾವಿಕ ನುಡಿದರು, ಕಾರ್ಯಕ್ರಮದ ನಿರೂಪಣೆ ಶ್ರೀಮತಿ. ಜ್ಯೋತಿ ಭಂಡೆ ಮಾಡಿದರು, ಸ್ವಾಗತ ಗೀತೆ ಪ್ರೀಯಾ ದೇವಿಪ್ರಸಾದ ಕಲಾಲ್ ಇವರು ನಡೆಸಿಕೊಟ್ಟರು. ವಂದನಾರ್ಪಣೆ ಸಹಕಾರಿಯ ನಿರ್ದೇಶಕರಾದ ಸಂಜೀವಕುಮಾರ ಸಜ್ಜನ ನಡೆಸಿಕೊಟ್ಟರು.

## ಡಾ. ಬಾಬು ಜಗಜೀವನ ರಾಮ್ ಪುಣ್ಯ ಸ್ಮರಣೆ ಕೊಪ್ಪಳ ಜಿಲ್ಲಾಡಆತದಿಂದ ಗೌರವ ಸಮರ್ಪಣೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಹಸಿರು ಕ್ರಾಂತಿಯ ಹರಿಕಾರರು ಹಾಗೂ ಮಾಜಿ ಉಪಪ್ರಧಾನ ಮಂತ್ರಿಗಳಾದ ದಿ. ಡಾ. ಬಾಬು ಜಗಜೀವನ ರಾಮ್ ರವರ ಪುಣ್ಯ ಸ್ಮರಣೆ ನಿಮಿತ್ತ ಕೊಪ್ಪಳ ಜಿಲ್ಲಾಡಳಿತದಿಂದ ಸೋಮವಾರದಂದು ಗೌರವ ಸಮರ್ಪಣೆ ಮಾಡಲಾಯಿತು.

ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಶಿವಶಾಂತವೀರ ನಗರದ ನಿಜಶರಣ ಅಂಬಿಗರ ಚೌಡಯ್ಯ ಉದ್ಯಾನದಲ್ಲಿರುವ ಮಹನೀಯರ (ಡಾ. ಬಿ.ಆರ್. ಅಂಬೇಡ್ಕರ್, ಬಸವೇಶ್ವರ ಹಾಗೂ ಡಾ. ಬಾಬು ಜಗಜೀವನ ರಾಂ) ಪುತ್ಥಳಿಗೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ರಾಮ್ ಎಲ್. ಅರಸಿದ್ದಿ ಅವರು ಸೇರಿ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ, ಕೊಪ್ಪಳ ತಹಶಿಲ್ದಾರರಾದ ಬಸವರಾಜ ತನ್ನಳ್ಳಿ, ಜಿಲ್ಲಾ ವಾರ್ತಾಧಿಕಾರಿಗಳಾದ ಗವಿಸಿದ್ದಪ್ಪ ಹೊಸಮನಿ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## 10 ರಂದು ವಾಕ್ ಇನ್ ಇಂಟರ್‌ವ್ಯೂವ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್ ಇಂಟರ್‌ವ್ಯೂವನ್ನು ಜುಲೈ 10 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ. ಪಿ.ಯು.ಸಿ ಅಥವಾ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳು ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಬಹುದು. 18 ರಿಂದ 25 ವರ್ಷದ ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 3 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ (ರೆಜ್ಯುಮ್) ಹಾಗೂ ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ. ಉದ್ಯೋಗಾಕಾಂಕ್ಷಿಗಳು https://forms.gle/6yCAARAw8q2TiX8U8 ಮೂಲಕ ರಿಜಿಸ್ಟರ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಚೆ ಇಲಾಖೆ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಅಂಚೆ ಇಲಾಖೆಯ ಮೂಲಕ ಕೇಂದ್ರ ಸರ್ಕಾರ ಸಾಕಷ್ಟು ಯೋಜನೆಗಳನ್ನು ಕಾರ್ಯರೂಪಕ್ಕೆ ತಂದಿದ್ದು, ಅದು ಇನ್ನೂ ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ತಲುಪಿಲ್ಲ. ಅದನ್ನು ತಲುಪಿಸುವ ಕಾರ್ಯ ಅಂಚೆ ಇಲಾಖೆ ಜನಸಂಪರ್ಕ ಕಾರ್ಯಕ್ರಮಗಳ ಮೂಲಕ ಮಾಡುತ್ತಿದೆ ಎಂದು ಬೀದರ್ ಉಪ ವಿಭಾಗದ ಅಂಚೆ ಅಧೀಕ್ಷಕ ವಿ.ಎಲ್. ಚಿತಕೋಟಿ ಹೇಳಿದರು. ತಾಲ್ಲೂಕಿನ ಇಟಗಾ ಗ್ರಾಮದಲ್ಲಿ ಅಂಚೆ ಇಲಾಖೆ ಆಯೋಜಿಸಿದ್ದ ಅಂಚೆ ಜನಸಂಪರ್ಕ ಅಭಿಯಾನ ಹಾಗೂ ಅಪಘಾತ ವಿಮೆಯ 10ಲಕ್ಷ ರೂಪಾಯಿ ಚೆಕ್ ವಿತರಣಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂಚೆ ಇಲಾಖೆಯ ವಿವಿಧ ಜನೋಪಯೋಗಿ ಯೋಜನೆಗಳು, ಉಳಿತಾಯ ಖಾತೆಗಳು, ಅಂಚೆ ಜೀವ ವಿಮೆ ಹಾಗೂ ಆಧಾರ ನೋಂದಣಿ, ತಿದ್ದುಪಡಿಯ ಸೇವೆಗಳ ಕುರಿತು ಸಾರ್ವಜನಿಕರಿಗೆ ಉಪಯೋಗವಾಗುವ ಸಾಕಷ್ಟು ಯೋಜನೆಗಳಿದ್ದು ಸೂಕ್ತ ಮಾರ್ಗದರ್ಶನ ನೀಡುತ್ತೇವೆ ಅದರ ಸದುಪಯೋಗ ಪಡೆದುಕೊಳ್ಳಿ ಎಂದರು. ಐಪಿಪಿಬಿ ಹಿರಿಯ ವ್ಯವಸ್ಥಾಪಕ ವಿಜಯಕುಮಾರ್ ಪೋಲಾ ಮಾತನಾಡಿ, ಅಂಚೆ ಇಲಾಖೆಯಿಂದ ಅಪಘಾತ ವಿಮಾ ಯೋಜನೆ; 550 ರೂ.ಗೆ 10 ಲಕ್ಷ, 750 ರೂ.ಗೆ 15 ಲಕ್ಷ ಅಪಘಾತ ಇನ್ಸುರೆನ್ಸ್ ಸೌಲಭ್ಯ ಅಂಚೆ ಇಲಾಖೆ ಮತ್ತು ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್, ವಿವಿಧ ವಿಮಾ ಕಂಪನಿಗಳ ಸಹಯೋಗದೊಂದಿಗೆ ಅಪಘಾತ ವಿಮೆ ಒದಗಿಸಲು ವಿಶೇಷ ಅಭಿಯಾನ ಆರಂಭಿಸಲಾಗಿದೆ. 18ರಿಂದ 65 ವರ್ಷದೊಳಗಿನವರು ವಾರ್ಷಿಕ 459 ಅಥವಾ 749 ರೂ. ಪ್ರೀಮಿಯಂನೊಂದಿಗೆ ಸಮಗ್ರ ಅಪಘಾತ ವಿಮಾ ಯೋಜನೆಯ ಫಲಾನುಭವಿಗಳಾಗಬಹುದು.

ಮೃತರ ಸಂಬಂಧಿಕರು (ನಾಮ ನಿರ್ದೇಶಿತರಿಗೆ) ಕ್ರಮವಾಗಿ 549 ರೂ. ವಿಮಾ ಯೋಜನೆಗೆ 10 ಲಕ್ಷ ರೂ. ಹಾಗೂ 749 ರೂ. ವಿಮಾ ಯೋಜನೆಗೆ 15 ಲಕ್ಷ ರೂ. ವಿಮೆ ಪಡೆಯುತ್ತಾರೆ. 60 ಸಾವಿರ ರೂ. ಒಳರೋಗಿ ವೆಚ್ಚ ಹಾಗೂ 30 ಸಾವಿರ ರೂ. ಹೊರರೋಗಿ ವೆಚ್ಚವನ್ನು ಈ ಯೋಜನೆ ಒಳಗೊಂಡಿರುತ್ತದೆ. ಸಾರ್ವಜನಿಕರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಹುಮನಾಬಾದ ಪೋಸ್ಟ್ ಮಾಸ್ಟರ್ ವೆಂಕಟ ಚಂದು, ಗ್ರಾಮದ ಪ್ರಮುಖರಾದ ವೀರಶೆಟ್ಟಿ ಮಾಲಿ ಪಾಟೀಲ್, ಧೂಳಯ್ಯಾ ಮಾಸ್ಟರ್, ಸಂಗಪ್ಪ ನಾರಾಯಣಪುರ್, ದಿಲೀಪಕುಮಾರ್, ರೇವಣಸಿದ್ದಪ್ಪ ಮೇತ್ರಿ, ತುಕರಾಮ ಸೇರಿದಂತೆ ಗ್ರಾಮಸ್ಥರು ಇದ್ದರು. ಸ್ವಾಗತ ಗೀತೆಯನ್ನು ದೀಪಿಕಾ, ಅಂಬಿಕಾ ನೆರವೇರಿಸಿಕೊಟ್ಟರು. ಉಮೇಶ ಸ್ವಾಗತಿಸಿದರು, ಘಾಳೆಪ್ಪ ನಿರೂಪಿಸಿದರು. ಅಶೋಕ ಚೌದರಿ ವಂದಿಸಿದರು.



❛ ಅಂಚೆ ಇಲಾಖೆಯಲ್ಲಿ ನನ್ನ ಗಂಡ ವರ್ಷಕ್ಕೆ 550 ರೂಪಾಯಿ ಕಟ್ಟಿ ವಿಮೆ ಮಾಡಿಸಿಕೊಂಡಿದ್ದರು. ಅವರು ಇತ್ತಿಚೆಗೆ ರಸ್ತೆ ಅಪಘಾತದಲ್ಲಿ ನಮ್ಮನ್ನು ಬಿಟ್ಟು ಅಗಲಿದ್ದಾರೆ. ಅವರು ಅಂಚೆ ಕಚೇರಿಯಲ್ಲಿ ವಿಮೆ ಮಾಡಿಸಿಕೊಳಲ್ಲೂ ಹೇಳಿದ ಅಂಚೆ ಇಲಾಖೆ ಅಧಿಕಾರಿಗಳಿಗೆ ಧನ್ಯವಾದಗಳು ಸಲ್ಲಿಸುತ್ತೇನೆ.

**ವಿಮೆ ಫಲಾನುಭವಿ**
**ಜೈಶೀಲಾ ಜೈಭೀಮ ಮೇತ್ರಿ.**

## ಪೂರ್ವಜರ ಜ್ಞಾನ ಭಂಡಾರ ಮುಂದಿನ ಪೀಳಿಗೆಗೆ ಕೊಂಡೊಯ್ಯುವಲ್ಲಿ ತಾಳೆಗರಿಗಳ ಪಾತ್ರ ಅನನ್ಯ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ನಮ್ಮ ಪೂರ್ವಜರು ತಮ್ಮ ಜ್ಞಾನ, ಆಲೋಚನೆಗಳನ್ನು, ಮಹತ್ವದ ದಾಖಲೆಗಳಾಗಬಹುದಾದ ಸಂಗತಿಗಳನ್ನು ತಾಳೆಗರಿಯಲ್ಲಿ ಬರೆದಿಟ್ಟುಕೊಳ್ಳುತ್ತಿದ್ದರು. ಕಾಲಾಂತರದಲ್ಲಿ ಅವರು ಬಿಟ್ಟುಹೋಗಿರುವ ಜ್ಞಾನದ ಭಂಡಾರವನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವಲ್ಲಿ ತಾಳೆಗರಿಗಳ ಪಾತ್ರ ಅನನ್ಯವಾದುದು ಎಂದು ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ.ಇಟ್ನಾಳ ಅವರು ಹೇಳಿದರು.

ಕಿಡದಾಳ ರಸ್ತೆಯ ಕಿಮ್ಸ್ ವೈದ್ಯಕೀಯ ಕಾಲೇಜು ಎದುರುಗಡೆ ಇರುವ ಅಗಸ್ತ್ಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆಯಲ್ಲಿ ಸೋಮವಾರ (ಜು. 06ರಂದು) ಹಮ್ಮಿಕೊಂಡಿದ್ದ ಕೊಪ್ಪಳ ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಪ್ರಾಚೀನ ತಾಳೆಗರಿ ಹಸ್ತಾಂತರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಭಾರತವು ಬಹಳಷ್ಟು ಶ್ರೀಮಂತ, ಐತಿಹಾಸಿಕ, ಸಾಂಸ್ಕೃತಿಕ, ವಿಜ್ಞಾನದ ಗತ ವೈಭವವನ್ನು ಹೊಂದಿದೆ. ಈ ಗತ ವೈಭವವು ಹಸ್ತಪ್ರತಿಗಳಲ್ಲಿದೆ. ಸಂಸ್ಕೃತ, ಕನ್ನಡ, ತೆಲುಗು ಹೀಗೆ ವಿವಿಧ ಭಾಷೆಗಳಲ್ಲಿ ಹಸ್ತಪ್ರತಿಗಳಿವೆ. ಪ್ರಾಚೀನ ತಾಳೆಗರಿಗಳು ಕೇವಲ ಎಲೆಗಳಲ್ಲ, ಅವು ನಮ್ಮ ಸಂಸ್ಕೃತಿ, ಕಲೆ, ಸಾಹಿತ್ಯ, ವಿಜ್ಞಾನ ಮತ್ತು ವೈದ್ಯಕೀಯ ಇತಿಹಾಸದ ಜೀವಂತ ಪುರಾವೆಗಳಾಗಿವೆ. ಇವುಗಳ ಮೂಲಕ ನಮ್ಮ ಸಂಸ್ಕೃತಿ ಮತ್ತು ಇತಿಹಾಸದ ಅನಾವರಣ ಮಾಡುವ ಪ್ರಯತ್ನವಾಗುತ್ತಿದೆ ಎಂದರು.

*ಡಿಜಿಟಲೀಕರಣದ ಅಗತ್ಯತೆ:*

ಕಾಲದ ಹೊಡೆತಕ್ಕೆ ಸಿಲುಕಿ ನಶಿಸಿ ಹೋಗುತ್ತಿರುವ ಇಂತಹ ಅಪೂರ್ವ ಹಸ್ತಪ್ರತಿಗಳನ್ನು ವೈಜ್ಞಾನಿಕವಾಗಿ ಸಂರಕ್ಷಿಸುವುದು ಮತ್ತು ಅವುಗಳನ್ನು ಡಿಜಿಟಲೀಕರಣಗೊಳಿಸಿ ಸಾರ್ವಜನಿಕರ ಹಾಗೂ ಸಂಶೋಧಕರ ಬಳಕೆಗೆ ಮುಕ್ತಗೊಳಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ಸಾರ್ವಜನಿಕರ ಬಳಿ ಅಥವಾ ಖಾಸಗಿ ಸಂಗ್ರಹಗಳಲ್ಲಿ ಇಂತಹ ಅಮೂಲ್ಯವಾದ ತಾಳೆಗರಿಗಳು ಅಥವಾ ಇತರೆ ಪ್ರಾಚೀನ ದಾಖಲೆಗಳಿದ್ದರೆ, ಅವುಗಳನ್ನು ಜಿಲ್ಲಾಡಳಿತ, ಸರ್ಕಾರದ ಪುರಾತತ್ವ ಇಲಾಖೆ ಅಥವಾ ಸಂಬಂಧಪಟ್ಟ ಸಂಸ್ಥೆಗಳಿಗೆ ಹಸ್ತಾಂತರಿಸುವ ಮೂಲಕ ಇತಿಹಾಸ ರಕ್ಷಣೆಗೆ ಕೊಪ್ಪಳ ಜಿಲ್ಲೆಯ ಸಾರ್ವಜನಿಕರು ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕೊಪ್ಪಳ ಜಿಲ್ಲೆಯಲ್ಲಿರುವ ಮಠ ಮಾನ್ಯಗಳಲ್ಲಿ, ರಾಜವಂಶಸ್ಥರಲ್ಲಿ, ಸಾರ್ವಜನಿಕರಲ್ಲಿ, ವೈದ್ಯರಲ್ಲಿ, ಸಾಹಿತಿಗಳಲ್ಲಿ ವಿವಿಧ ಭಾಗಗಳ ಹಸ್ತಪ್ರತಿಗಳಿವೆ. ಈಗಾಗಲೇ ಜಿಲ್ಲಾಡಳಿತದಿಂದ ಎರಡು ಬಾರಿ ಸಭೆ ನಡೆಸಿ, ವಾರ್ತಾ ಇಲಾಖೆಯ ಮೂಲಕ ಜಿಲ್ಲೆಯ ಎಲ್ಲಾ ಮಾಧ್ಯಮಗಳಲ್ಲಿ ಅಗತ್ಯ ಪ್ರಚಾರ ಕೈಗೊಳ್ಳಲಾಗಿದೆ. ಇದರ ಪ್ರತಿಫಲವಾಗಿ ಇಂದು ಈ ಕಾರ್ಯಕ್ರಮ ನಡೆಯುತ್ತಿದೆ. ಆನೆಗೊಂದಿಯ ರಾಜವಂಶಸ್ಥರು, ತಮ್ಮ ಹತ್ತಿರ ಇರುವ ಪುರಾತನ ಹಸ್ತಪ್ರತಿಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ನಮ್ಮ ಇತಿಹಾಸವನ್ನು ನಾವು ಉಳಿಸಿಕೊಂಡರೆ ಮಾತ್ರ ಭವಿಷ್ಯದ ಪೀಳಿಗೆಗೆ ಸೂಕ್ತ ಮಾರ್ಗದರ್ಶನ ನೀಡಲು ಸಾಧ್ಯ. ಈ ನಿಟ್ಟಿನಲ್ಲಿ ಹಸ್ತಾಂತರಗೊಂಡಿರುವ ತಾಳೆಗರಿಗಳ ಸುರಕ್ಷಿತ ರಕ್ಷಣೆ ಹಾಗೂ ಅಧ್ಯಯನಕ್ಕೆ ಜಿಲ್ಲಾಡಳಿತವು ಸಂಪೂರ್ಣ ಸಹಕಾರ ನೀಡಲಿದೆ. ತಾಳೆಗರಿಗಳನ್ನು ಸಂರಕ್ಷಿಸಿ ಸರ್ಕಾರಕ್ಕೆ ಒಪ್ಪಿಸುವಲ್ಲಿ ಶ್ರಮಿಸಿದ ಎಲ್ಲರಿಗೂ ಈ ಕಾರ್ಯಕ್ರಮದ ಮೂಲಕ ಅಭಿನಂದನೆಯನ್ನು ಸಲ್ಲಿಸಲು ಬಯಸುತ್ತೇನೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಾಜಿ ಸಂಸದ ಕರಡಿ ಸಂಗಣ್ಣ ಅವರು ಮಾತನಾಡಿ, ತಾಳೆಗರಿಗಳು ಕೇವಲ ಹಳೆಯ ಎಲೆಗಳಲ್ಲ, ಅವುಗಳಲ್ಲಿ ನಮ್ಮ ಇತಿಹಾಸ, ವಿಜ್ಞಾನ, ಆಯುರ್ವೇದ, ಜ್ಯೋತಿಷ್ಯ ಮತ್ತು ಸಾಹಿತ್ಯದ ಅಪಾರ ಜ್ಞಾನ ಅಡಗಿದೆ. ಖಾಸಗಿ ವ್ಯಕ್ತಿಗಳು ಅಥವಾ ಸಂಸ್ಥೆಗಳ ಬಳಿ ಇರುವ ಇಂತಹ ಅಮೂಲ್ಯ ಹಸ್ತಪ್ರತಿಗಳನ್ನು ಜಿಲ್ಲಾಡಳಿತದ ಮೂಲಕ ಸಂಗ್ರಹಿಸಿ, ಸರ್ಕಾರಿ ದಾಖಲೆಗಳಾಗಿ ಸಂರಕ್ಷಿಸುತ್ತಿರುವುದು ಅತ್ಯಂತ ಶ್ಲಾಘನೀಯ ಕೆಲಸವಾಗಿದೆ. ಈ ತಾಳೆಗರಿಗಳು ಕಾಲಕ್ರಮೇಣ ನಾಶವಾಗದಂತೆ ತಡೆಯಲು ಆಧುನಿಕ ತಂತ್ರಜ್ಞಾನವನ್ನು ಬಳಸಿ ಇವುಗಳನ್ನು ಡಿಜಿಟಲೀಕರಣ ಮಾಡಬೇಕು. ಇದರಿಂದ ಸಂಶೋಧಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ ಎಂದು ಅವರು ಸಲಹೆ ನೀಡಿದರು.

ಜಿಲ್ಲೆಯ ಸಾರ್ವಜನಿಕರು ಅಥವಾ ಮಠ-ಮಾನ್ಯಗಳು ತಮ್ಮ ಬಳಿ ಇರುವ ಇಂತಹ ಪ್ರಾಚೀನ ಹಸ್ತಪ್ರತಿಗಳನ್ನು ಬಚ್ಚಿಟ್ಟುಕೊಳ್ಳದೆ, ಅವುಗಳ ಸುದೀರ್ಘ ಆಯಸ್ಸಿಗಾಗಿ ಸರ್ಕಾರಕ್ಕೆ ಒಪ್ಪಿಸಲು ಮುಂದೆ ಬರಬೇಕು ಎಂದು ಕರಡಿ ಸಂಗಣ್ಣ ಅವರು ಇದೇ ಸಂದರ್ಭದಲ್ಲಿ ಕರೆ ನೀಡಿದರು.

ಹೊಸಪೇಟೆ (ಕಮಲಾಪುರ-ಹಂಪಿ) ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಉಪ ನಿರ್ದೇಶಕರಾದ ಡಾ. ಆರ್.ಶೇಜೇಶ್ವರ ಅವರು ಮಾತನಾಡಿ, ಕರ್ನಾಟಕದ ಶ್ರೀಮಂತ ಇತಿಹಾಸ, ಸಂಸ್ಕೃತಿ ಮತ್ತು ಪ್ರಾಚೀನ ಪರಂಪರೆಯನ್ನು ಮುಂದಿನ ಪೀಳಿಗೆಗೆ ದಾಟಿಸುವಲ್ಲಿ ಪುರಾತತ್ವ ಇಲಾಖೆಯ ಶೋಧನೆಗಳು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತವೆ. ಇತಿಹಾಸ ಕೇವಲ ರಾಜ-ಮಹಾರಾಜರಿಗೆ ಸೀಮಿತವಾಗಿಲ್ಲ, ಸಾಮಾನ್ಯ ಜನರ ಕೊಡುಗೆಗಳೂ ಇದರಲ್ಲಿ ಅಡಗಿವೆ. ಇಂತಹ ಅಮೂಲ್ಯ ಐತಿಹಾಸಿಕ ಪುರಾವೆಗಳನ್ನು ಸಾರ್ವಜನಿಕರು ಮತ್ತು ಸ್ಥಳೀಯರು ರಕ್ಷಿಸಬೇಕು. ಈ ಹಿನ್ನೆಲೆಯಲ್ಲಿ ಪ್ರಾಚೀನ ತಾಳೆಗರಿ ಹಾಗೂ ಇತರೆ ಹಸ್ತಪ್ರತಿಗಳ ಸಂಗ್ರಹಣೆಯ ಕಾರ್ಯಕವು ಮಹತ್ವದ್ದಾಗಿದೆ ಎಂದು ಹೇಳಿದರು.

ಕೊಪ್ಪಳದ ಅಗಸ್ತ್ಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಸಂಸ್ಥೆಯ ಅಧ್ಯಕ್ಷರಾದ ಡಾ. ಸಂಗಮೇಶ ಹಿರೇಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಭಾರತೀಯ ಜ್ಞಾನ ಪರಂಪರೆಯು ವಿಶ್ವದ ಅತ್ಯಂತ ಪ್ರಾಚೀನ ಹಾಗೂ ಸಮೃದ್ಧ ಪರಂಪರೆಗಳಲ್ಲಿ ಒಂದಾಗಿದ್ದು, ಅದರ ಪ್ರಮುಖ ಆಧಾರಗಳಲ್ಲಿ ಪ್ರಾಚೀನ ಹಸ್ತಪ್ರತಿಗಳು ಪ್ರಮುಖ ಸ್ಥಾನವನ್ನು ಹೊಂದಿವೆ. ಶತಮಾನಗಳಿಂದ ಗುರು-ಶಿಷ್ಯ ಪರಂಪರೆಯಲ್ಲಿ ಸಂರಕ್ಷಿಸಲ್ಪಟ್ಟಿರುವ ಈ ಹಸ್ತಪ್ರತಿಗಳು ವೈದ್ಯಕೀಯ, ತತ್ವಶಾಸ್ತ್ರ, ಸಂಸ್ಕೃತಿ, ಧರ್ಮ ಹಾಗೂ ವಿಜ್ಞಾನ ಕ್ಷೇತ್ರಗಳ ಅಮೂಲ್ಯ ಜ್ಞಾನ ಸಂಪತ್ತನ್ನು ಒಳಗೊಂಡಿವೆ. ಇಂತಹ ಅಪರೂಪದ ಹಾಗೂ ಐತಿಹಾಸಿಕ ಮಹತ್ವವುಳ್ಳ ಆಯುರ್ವೇದ ಹಸ್ತಪ್ರತಿಗಳನ್ನು ಸಂರಕ್ಷಿಸುವ ಉದ್ದೇಶದಿಂದ ಕೊಪ್ಪಳ ನಗರದ ಅಗಸ್ತ್ಯ ಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯು ಸಂಗ್ರಹಿಸಿ ಸಂರಕ್ಷಿಸಿದ್ದ ಹಸ್ತಪ್ರತಿಗಳನ್ನು ಜಿಲ್ಲಾಡಳಿತದ ಮೂಲಕ ಸಂಬಂಧಿತ ಪುರಾತತ್ವ ಇಲಾಖೆ, ಪ್ರಾಧಿಕಾರಕ್ಕೆ ಸ್ವಯಂಪ್ರೇರಿತವಾಗಿ ಹಸ್ತಾಂತರಿಸುವ ಮಹತ್ವದ ಕಾರ್ಯವನ್ನು ಕೈಗೊಂಡಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಡಾ. ರಾಮ್ ಎಲ್. ಅರಸಿದ್ದಿ, ಆಯುರ್ವೇದ ವೈದ್ಯ ವಿಜ್ಞಾನಿ ಡಾ. ಚಲಪತಿ, ಕೊಪ್ಪಳದ ಅಗಸ್ತ್ಯ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಸಂಸ್ಥೆಯ ಡಾ. ಲೋಕೇಶ ಟೇಕಲ್, ಡಾ. ಮಹಾಂತಗೌಡ ಬಿರಾದಾರ ಹಾಗೂ ಕನ್ನಡ ಉಪನ್ಯಾಸಕರಾದ ಡಾ. ಸಿದ್ದಲಿಂಗಪ್ಪ ಕೊಟ್ನೆಕಲ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಉಪನ್ಯಾಸಕರಾದ ಶಿವನಗೌಡ ಪೊಲೀಸಪಾಟೀಲ್ ಅವರು ಕಾರ್ಯಕ್ರಮ ನಿರೂಪಿಸಿದರು. ಡಾ. ಪ್ರಜ್ವಲ್ ಮತ್ತು ಶ್ರೀದೇವಿ ಅವರು ಪ್ರಾರ್ಥನೆ ಗೈದರು.

## ಹಮಾಲರ ಕಾಲೋನಿ ಅಂಗನವಾಡಿ ಕೇಂದ್ರ ಸಂಖ್ಯೆ 3 ರಲ್ಲಿ ಮಕ್ಕಳ ಘಟಿಕೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ನಗರದ ಹಮಾಲರ ಕಾಲೋನಿ ಕೇಂದ್ರ ಸಂಖ್ಯೆ ಮೂರನೇ ಅಂಗನವಾಡಿ ಕೇಂದ್ರದಲ್ಲಿ ಶಾಲಾ ಪೂರ್ವ ಶಿಕ್ಷಣವನ್ನು ಮುಗಿಸಿ ಪ್ರಾಥಮಿಕ ಶಾಲೆಗೆ ಪ್ರವೇಶಿಸಿದ ಮಕ್ಕಳಿಗೆ ಬೀಳ್ಕೊಡುಗೆ ಮತ್ತು ಘಟಿಕೋತ್ಸವ ಕಾರ್ಯಕ್ರಮವನ್ನು ಅತ್ಯಂತ ಸುಂದರವಾಗಿ ಹಮ್ಮಿಕೊಳ್ಳಲಾಯಿತು. ಮಕ್ಕಳು ಅಂಗನವಾಡಿಯಲ್ಲಿ ಮೂರು ವರ್ಷಗಳ ಕಾಲ ಶಾಲಾಪೂರ್ವ ಶಿಕ್ಷಣವನ್ನು ಕಲಿತ ವಿಷಯಗಳ ಕುರಿತು ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಮಕ್ಕಳಿಂದ ಗಣಿತ ಪೂರ್ವ ಚಟುವಟಿಕೆ ಕೇಳಿದಷ್ಟು ಕೊಡು. ಅಂಕಿಗಳು. ಬಣ್ಣಗಳು. ಆಕಾರಗಳು. ಪ್ರಾಣಿಗಳು 10 ಹಲವು ಚಟುವಟಿಕೆ ಹಾಗೂ, ಪರಿಸರ ಕಾಳಜಿಯ ಕುರಿತು ಇನ್ನು ಅನೇಕ ವಿಷಯಗಳ ಕುರಿತು ಏರ್ಪಡಿಸಲಾಗಿದ್ದ ವಸ್ತು ಪ್ರದರ್ಶನದಲ್ಲಿ ಒಂದೊಂದು ವಿಷಯದ ಕುರಿತು ಸ್ವತಃ ಮಕ್ಕಳೇ ಚಿತ್ರ ತೋರಿಸುತ್ತಾ ತನ್ನ ತೊದಲು ನುಡಿಯಲ್ಲಿ ವಿವರಣೆ ಕೊಡುತ್ತಿರುವದು ಅದ್ಭುತವಾಗಿತ್ತು. ಮಕ್ಕಳ ವಿವರಣೆ , ಪ್ರತಿಭೆಯನ್ನು ಕಂಡು ಹಾಜರಿದ್ದ ಅಧಿಕಾರಿಗಳು , ಪೋಷಕರು ತುಂಬಾ ಸಂತೋಷ ಪಟ್ಟರು. ಪ್ರಸ್ತುತ ವರ್ಷದಲ್ಲಿ ಅಂಗನವಾಡಿಗೆ ಬಂದಿರುವ ಮಕ್ಕಳಿಗೆ ಅಕ್ಷರಭ್ಯಾಸ ಅಧಿಕಾರಿಗಳಿಂದ ಮಾಡಿಸಲಾಯಿತು. ನಂತರ ನಡೆದ ಘಟಿಕೋತ್ಸವ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಯಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಶ್ರೀಮತಿ ರೋಹಿಣಿ ಕೊಟಗಾರ್ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಪ್ರಾಥಮಿಕಶಾಲಾ ಶಿಕ್ಷಕಿ ಬಾಲ ವಿಕಾಸ ಕಮಿಟಿ ಅಧ್ಯಕ್ಷರು ಅವರು ಉಪಸ್ಥಿತರಿದ್ದರು. ಮಕ್ಕಳಿಗೆ ವಿಶ್ವವಿದ್ಯಾಲಯದಲ್ಲಿ ನಡೆಯುವ ಘಟಿಕೋತ್ಸವ ಮಾದರಿಯಲ್ಲಿ ಪದವಿ ಪ್ರಧಾನ ಮಾಡಿರುವದು ವಿನೂತನವಾಗಿತ್ತು , ಘಟಿಕೋತ್ಸವದ ಉಡುಗೆಯಲ್ಲಿ ಪ್ರಮಾಣ ಪತ್ರವನ್ನು ಸ್ವೀಕರಿಸಿದ ಮಕ್ಕಳನ್ನು ಕಂಡು ಪೋಷಕರು ತುಂಬಾ ಸಂತೋಷ ಪಟ್ಟರು. ಇಂತಹ ಒಂದು ವಿನೂತನ ಕಾರ್ಯಕ್ರಮ ನಡೆಯಲು ಕಾರಣರಾದ ಕೇಂದ್ರದ ಕಾರ್ಯಕರ್ತರಾದ ಜಯಮ್ಮ. ಮಲ್ಲಮ್ಮ. ಶೈಲಜಾ ಅವರನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಅವರು ಅಭಿನಂದಿಸಿದರು. ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಈ ರೀತಿಯಾಗಿ ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಗಳು ನಿರಂತರವಾಗಿ, ಪರಿಣಾಮಕಾರಿಯಾಗಿ ನಡೆದಲ್ಲಿ ಅಂಗನವಾಡಿಯ ಕಡೆ ಪೋಷಕರು ಮಕ್ಕಳನ್ನು ದಾಖಲಿಸಲು ಮುಂದಾಗುತ್ತಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಿಡಿಪಿಓ ರೋಹಿಣಿ ಕೊಟಗಾರ್. ಮೇಲ್ವಿಚಾರಕಿ ಗಾಯತ್ರಿ ಶಾಲಾ ಮುಖ್ಯಶಿಕ್ಷಕರು, ಜಿಲ್ಲಾ ಸಂಪನ್ಮೂಲ ವ್ಯಕ್ತಿ ಶ್ರೀ ಸಿದ್ದಪ್ಪ ಕುರಿ ,ಮೇಲ್ವಿಚಾರಕರಾದ ಉಷಾ ವಲಯ ಮೇಲ್ವಿಚಾರಕಿ ಅಂಗನವಾಡಿ ಶಿಕ್ಷಕರು , ಸಹಾಯಕಿಯರು ಹಾಗೂ ಪೋಷಕರು ಉಪಸ್ಥಿತರಿದ್ದರು.

## ನೌಕರರ ಸಂಘಕ್ಕೆ ನೇಮಕ




• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಶಾಖೆಗೆ ಗೌರವ ಅಧ್ಯಕ್ಷರಾಗಿ ಉಪ ನ್ಯಾಸಕರದ ನರ್ಸಿಂಗರಡ್ಡಿ ಗದಲೇಗಾಂವ. ಹಾಗೂ ಸೌಂಸ್ಕೃತಿಕ ಕಾರ್ಯದರ್ಶಿ ಅನಿಲ ಕಾಂಬಳೆ ನೇಮಕ ವಾಗಿದ್ದಾರೆ ಎಂದು ತಾಲೂಕ ಸರಕಾರಿ ನೌ ಕರರ ಸಂಘದ ಅಧ್ಯಕ್ಷರಾದ ದಿಲೀಪಕುಮಾರ ಉತ್ತಮ್ ನೇಮಕ ಮಾಡಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :– ಇಲ್ಲಿನ ಭಾರತೀಯ ದಲಿತ ಪ್ಯಾಂಥರ್, ಡಾ.ಬಿ ಆರ್ ಅಂಬೇಡ್ಕರ್ ಅರ್ಬನ್ ಯೂಥ್ ಕ್ಲಬ್ ನ ತಾಲೂಕಾಧ್ಯಕ್ಷರಾದ ರವೀಂದ್ರ ಗಾಯಕವಾಡ್ ಅವರು ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಡಿ ಕೆ ಶಿವಕುಮಾರ ಅವರಿಗೆ ಡಾ ಬಿ ಆರ್ ಅಂಬೇಡ್ಕರ್ ವೃತ್ತದಲ್ಲಿ ತಮ್ಮ ಸಾವಿರಾರು ಕಾರ್ಯಕರ್ತರೊಂದಿಗೆ ಸ್ವಾಗತಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ. ಸಚಿವರಾದ ಈಶ್ವರ ಖಂಡ್ರೆ. ಬೀದರ ಸಂಸದರಾದ ಸಾಗರ ಖಂಡ್ರೆ. ಮಾಜಿ ಮಂತ್ರಿ ರಹಿಂ ಖಾನ. ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರೈತರ ಆರ್ಥಿಕ ಭದ್ರತೆಗೆ ಬೆಳೆ ವಿಮೆ ಅತ್ಯಗತ್ಯ: ಸಿದ್ದಾರ್ಥ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

2026ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರೈತರು ಪ್ರಕೃತಿ ವಿಕೋಪ, ಅತಿವೃಷ್ಟಿ, ಅನಾವೃಷ್ಟಿ ಹಾಗೂ ಇತರೆ ಬೆಳೆಹಾನಿಯಿಂದಾಗುವ ನಷ್ಟದಿಂದ ರಕ್ಷಣೆ ಪಡೆಯಲು ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ವಿವಿಧ ಬೆಳೆಗಳಿಗೆ ವಿಮಾ ನೋಂದಣಿ ಪ್ರಕ್ರಿಯೆ ಆರಂಭಗೊಂಡಿದೆ ಎಂದು ಸಹಾಯಕ ಕೃಷಿ ಅಧಿಕಾರಿ ಸಿದ್ದಾರ್ಥ ಪಾಟೀಲ್ ತಿಳಿಸಿದ್ದಾರೆ.

ತಾಲೂಕಿನ ರೈತ ಸಂಪರ್ಕ ಕೇಂದ್ರ ಹಾಗೂ ಕಚಕನೂರು, ಕಾಮನಟಗಿ, ಬನ್ನಟ್ಟಿ, ಕೆ.ತಳ್ಳಳ್ಳಿ, ಬಾಚಿಮಟ್ಟಿ ಗ್ರಾಮಗಳಲ್ಲಿ ಆಯೋಜಿಸಿದ್ದ ಜಾಗೃತಿ ಮತ್ತು ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉದ್ದು, ಹೆಸರು, ತೆ–ೂಗರಿ, ಸೂರ್ಯಕಾಂತಿ, ಹತ್ತಿ, ಸಜ್ಜೆ ಹಾಗೂ ಭತ್ತ ಸೇರಿದಂತೆ ಪ್ರಮುಖ ಬೆಳೆಗಳಿಗೆ ವಿಮಾ ಮೊತ್ತ ಮತ್ತು ರೈತರ ವಿಮಾ ಕಂತು ನಿಗದಿಪಡಿಸಲಾಗಿದೆ ಎಂದು ತಿಳಿಸಿದರು. ಉದ್ದು ಹಾಗೂ ಹೆಸರು ಬೆಳೆಗಳಿಗೆ ಜುಲೈ 15, 2026ರವರೆಗೆ, ತೊಗರಿ, ಸೂರ್ಯಕಾಂತಿ, ಹತ್ತಿ ಮತ್ತು ಸಜ್ಜೆ ಬೆಳೆಗಳಿಗೆ ಜುಲೈ 31, 2026ರವರೆಗೆ ಹಾಗೂ ಭತ್ತ ಮತ್ತು ಮಧ್ಯಮ ಅವಧಿಯ ತೊಗರಿ ಬೆಳೆಗಳಿಗೆ ಆಗಸ್ಟ್ 14, 2026ರವರೆಗೆ ವಿಮೆ ನೋಂದಣಿ ಮಾಡಿಸಿಕೊಳ್ಳಲು ಅವಕಾಶವಿದೆ ಎಂದು ಮಾಹಿತಿ ನೀಡಿದರು.

ಬೆಳೆ ಸಾಲ ಪಡೆದ ಹಾಗೂ ಪಡೆಯದ ರೈತರಿಗೆ ವಿಮಾ ಮೊತ್ತ ಒಂದೇ ಆಗಿದ್ದು, ನಿಗದಿತ ಕಂತು ಪಾವತಿಸುವ ಮೂಲಕ ಎಲ್ಲ ರೈತರೂ ವಿಮಾ ಸೌಲಭ್ಯ ಪಡೆಯಬಹುದು ಎಂದು ಹೇಳಿದರು. ಬೆಳೆ ವಿಮೆ ಮಾಡಿಸಿಕೊಳ್ಳಲು ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಹಾಗೂ ಪಹಣಿ ದಾಖಲೆಯೊಂದಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಒನ್ ಕೇಂದ್ರ, ಸಿಎಸ್‌ಸಿ ಕೇಂದ್ರ ಅಥವಾ ಸಂಬಂಧಿತ ಬ್ಯಾಂಕ್‌ಗಳಲ್ಲಿ ನೋಂದಣಿ ಮಾಡಿಸಿಕೊಳ್ಳಬಹುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ರೈತಾಪಿ ಜನರು ಹಾಗೂ ಕೃಷಿ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

# ರೈತರಿಗಾಗಿ ಅಧಿವೇಶನದಲ್ಲಿ ಧ್ವನಿ ಎತ್ತುವೆ: ಶಾಸಕ ಕಂದಕೂರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಸನ್ನತಿ ಬ್ರಿಡ್ಜ್ ಕಂ ಬ್ಯಾರೇಜು ನಿರ್ಮಾಣ ಸಂದರ್ಭದಲ್ಲಿ ಗುರುಮಠಕಲ್ ಕ್ಷೇತ್ರದ ಹಲವು ರೈತರು ಭೂಮಿಯನ್ನು ಕ್ಯಾನಲ್ ನಿರ್ಮಾಣಕ್ಕೆ ಬಿಟ್ಟುಕೊಟ್ಟಿದ್ದಾರೆ, ಅವರಲ್ಲಿ ಕೆಲವರು ಇರುವಷ್ಟು ಭೂಮಿಯನ್ನೂ ಕೂಡ ಬಿಟ್ಟುಕೊಟ್ಟಿದ್ದಾರೆ. ಆದರೆ ಅವರಿಗೆ ಸುಮಾರು 10 ವರ್ಷ ಕಳೆದರೂ ಇಲ್ಲಿಯವರೆಗೆ ಭೂ ಪರಿಹಾರ ನೀಡದೇ ಇರುವುದರಿಂದ ರೈತರು ಸಂಕಷ್ಟಕ್ಕೀಡಾಗಿದ್ದು, ಅವರಿಗಾಗಿ ಮುಂಬರುವ ಅಧಿವೇಶನದಲ್ಲಿ ರೈತರ ಪರವಾಗಿ ಧ್ವನಿ ಎತ್ತುತ್ತೇನೆ ಎಂದು ಗುರುಮಠಕಲ್ ಮತಕ್ಷೇತ್ರದ ಶಾಸಕರಾದ ಶರಣಗೌಡ ಕಂದಕೂರ ಹೇಳಿದರು.

ಗುರುಮಠಕಲ್ ಮತಕ್ಷೇತ್ರದ ವಡ್ನಳ್ಳಿ, ಅಲ್ಲಿಪೂರ, ಬಸವಂತಪೂರ ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಗುರುಮಠಕಲ್, ಯಾದಗಿರಿ, ಚಿತ್ತಾಪೂರ ಮತಕ್ಷೇತ್ರಗಳ ನೀರಾವರಿ ಸೌಲಭ್ಯಕ್ಕಾಗಿ ಸರ್ಕಾರದಿಂದ ಸನ್ನತಿ ಬಳಿ ಬ್ರೀಡ್ಜ್ ಕಂ ಬ್ಯಾರೇಜು ನಿರ್ಮಾಣ ಮಾಡಲಾಗಿದೆ, ಒಟ್ಟು 16000 ಹೆಕ್ಟೇರ್ ಭೂಮಿಗೆ ನೀರು ಒದಗಿಸುವ ಅವಕಾಶ ಈ ಬ್ರೀಡ್ಜ್ ಕಂ ಬ್ಯಾರೇಜಿನಿಂದಾಗಲಿದ್ದು, ಸುಮಾರು 2.84 ಟಿಎಂಸಿ ನೀರಿ ಸಂಗ್ರಹ ಸಾಮಾರ್ಥ್ಯವುಳ್ಳ ಈ ಬ್ಯಾರೇಜಿನಿಂದ 1.8 ಟಿಎಂಸಿ ನೀರು ಬಿಡುಗಡೆ ಮಾಡಿದರೂ ಕೂಡ 11000 ಹೆಕ್ಟೇರ್ ನೀರು ರೈತರ ಜಮೀನಿಗೆ ಹರಿಯಲಿದೆ. ಆದರೆ ಸರ್ಕಾರದ ಆದೇಶ ವಿರದಿದ್ದ ಕಾರಣ ಕೆಳ ಹಂತರ ರೈತರ ಜಮೀನಿಗೆ ನೀರು ಒದಗುತ್ತಿಲ್ಲವೆಂದು ಅಸಮಾಧಾನವ್ಯಕ್ತಪಡಿಸಿದರು.

**ಗೆಜೆಟ್ ನೋಟಿಫಿಕೇಶನ್ ಮಾಡಿಲ್ಲ :**

ಸರ್ಕಾರ ರೈತರ ಭೂಮಿಗೆ ನೀರು ಒದಗಿಸಲು ಗೆಜೆಟ್ ನೋಟಿಫಿಕೇಶನ್ ಹೊರಡಿಸಬೇಕು ಮುಂದಿನ ದಿನಗಳಲ್ಲಿ ನನ್ನ ಸದನದಲ್ಲಿನ ಹೋರಾಟ ರೈತರ ಪರವಾಗಿದ್ದು, ಈ ಭಾಗದ ರೈತರ ಜಮೀನಿಗೆ ನೀರೊದಗಿಸಲು ಗೆಜೆಟ್ ನೊಟೋಫಿಕೇಶನ್ ಹೊರಡಿಸುವಂತೆ ಆಗಲಿದೆ. ಗುರುಮಠಕಲ್ ಮತಕ್ಷೇತ್ರದಲ್ಲಿ ಸುಮಾರು 3441 ಹೆಕ್ಟರ್ ರೈತರ ಜಮೀನಿಗೆ ನೀರು ಹರಿಯಬೇಕಾಗಿದೆ. ಆದರೆ ಕೇವಲ 456 ಹೆಕ್ಟರ್ ಭೂಮಿ ಸದ್ಯ ನೀರು ಸಿಗುತ್ತಿದ್ದು, ಈ ಭಾಗದ 2985 ಹೆಕ್ಟೇರ್ ರೈತರ ಕಷ್ಟಕ್ಕಾಗಿ ಸರ್ಕಾರ ಕೂಡಲೇ ಗೆಜೆಟ್ ನೊಟೀಫೀಕೇಶನ್ ಹೊರಡಿಸಬೇಕು ಎಂದು ಒತ್ತಾಯಿಸಿದರು.


**ರೈತರಿಗೆ ಪರಿಹಾರ ನೀಡಿ :**

ವಡ್ನಳ್ಳಿ, ವಡ್ನಳ್ಳಿ ತಾಂಡಾ ರೈತರ ಸನ್ನತಿ ನೀರಾವರಿ ಯೋಜನೆಗಾಗಿ ತೆಗೆದುಕೊಂಡ ಜಮೀನಿಗೆ ಪರಿಹಾರ ನೀಡುವಂತೆ ಸರ್ಕಾರಕ್ಕೆ ಒತ್ತಾಯಿಸಲಾಗುದು, ಅದರ ಜೊತೆಗೆ ಎಲ್ಲಾ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ವಿಸ್ತರಿಸಲು ಯೋಜನೆಯ ಗೆಜೆಟ್ ನೊಟೀಫಿಕೇಶನ್ ಹೊರಡಿಸುವಂತೆ ಸದನದಲ್ಲಿ ಹೋರಾಟ ಮಾಡಲಾಗುವುದು ಎಂದು ಹೇಳಿದರು.

**ಶಾಲು ಹಾರ ತರಬ್ಯಾಡ್ರಿ :** ಬಸವಂತಪುರ ಗ್ರಾಮದಲ್ಲಿ 52.33 ಲಕ್ಷ ಸರ್ಕಾರಿ ಪ್ರೌಢ ಶಾಲೆಗೆ 3 ಕೋಣೆಗಳ ನಿರ್ಮಾಣ ಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ, ಶಿಕ್ಷಕರು ಸರ್ಕಾರಿ ಶಾಲೆಯ ಕಾರ್ಯಕ್ರಮ ಕ್ಕೆ ಚಾಲನೆ ಮಾಡಲು ನಾನು ಬಂದಾಗ ಶಾಲು ಹೂವಿನ ಹಾರ ತರುವ ಬದಲು ಒಂದು ಪುಸ್ತಕ ಕೊಡಿ ಸಾಕು ಅದೇ ನೀವು ನನಗೆ ನೀಡುವ ಗೌರವವಾಗಿದೆ ಎಂದು ಶಾಸಕ ಶರಣಗೌಡ ಕಂದಕೂರ ತಿಳಿಸಿದರು.

**ಅಲ್ಲಿಪೂರ ಗ್ರಾಮ :** 1 ಕೋಟಿ 25ಲಕ್ಷ ರೂ ವೆಚ್ಚದಲ್ಲಿ ರಸ್ತೆ ನಿರ್ಮಾಣ ಬ್ರೀಡ್ಜ್ ಕಾಮಗಾರಿಗೆ ಶಂಕುಸ್ಥಾಪನೆ ಶಾಸಕರು ಶಂಕುಸ್ಥಾಪನೆ ನೆರವೇರಿಸಿ, ಭಾಗ್ಯವಂತಿ ದೇವಸ್ಥಾನಕ್ಕೆ ತೆರಳಿ ದೇವಿಯ ದರ್ಶನ ಪಡೆದು ನಂತರ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿ, ರಸ್ತೆ ಸುಧಾರಣೆಯಿಂದ ಸಾಕಷ್ಟು ಜನರಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಪಂ ಇಒ ಮಹಾದೇವ, ಪಿಡಬ್ಲೂಡಿ ಎಇಇ ಕೈಲಾಶ, ನಿರ್ಮಿತಿ ಕೇಂದ್ರದ ಅಧಿಕಾರಿ ಕಿರಣಕುಮಾರ ಹೂಗಾರ, ಜೆಸ್ಕಾಂ ಎಇಇ ಮಾರ್ಕಂಡೇಯ, ಎಇ ಶಂಕರಗೌಡ, ಆರ್‌ಐ ರಾಜಶೇಖರ ಪಾಟೀಲ, ಎಡಿ ಮಲ್ಲಪ್ಪ, ಪಿಡಿಒ ಮಮ್ತಾಜ್ ಬೇಗಂ, ಶರಣಪ್ಪ, ಜೆಡಿಎಸ್ ಜಿಲ್ಲಾಧ್ಯಕ್ಷರಾದ ಸುಭಾಶ್ಚಂದ್ರ ಕಟಕಟಿ, ದೊಡ್ಡ–ಣಗೌಡ ಅರಕೇರಾ, ಮೈಪಾಲರಡ್ಡಿ ಮಲ್ಹಾರ, ಶರಣಯ್ಯಸ್ವಾಮಿ, ಪಂಪನಗೌಡ, ಅಶೋಕರಡ್ಡಿ ಮಾಲಿಪಾಟೀಲ, ಸಿದ್ದಲಿಂಗರಡ್ಡಿ ಸಾಹು, ಸಿದ್ದರಾಮರಡ್ಡಿ, ಹಣಮಂತ ಉಂಬರಕಿ, ಸಿದ್ದಪ್ಪ ಬಡಿಗೇರ್, ಸಿದ್ದಪ್ಪ ಹೋರುಂಚಾ, ಏಸುಮಿತ್ರ ಖಾನಳ್ಳಿ, ಗೋಪಾಲ ಖಾನಳ್ಳಿ ತಾಂಡಾ, ಮಹೇಶ, ಮಾರ್ಥಂಡ, ಭಾಗಪ್ಪ ಅಚ್ಚೋಲಿ, ವೀರೇಶ ಅರ–ಕೇರಾ, ಬಸವರಾಜಪ್ಪಗೌಡ ಕ್ಯಾಸಪನಳ್ಳಿ, ಶಿವಯೋಗಿ ಯರಗೋಳ, ಅಹ್ಮದ್ ಯರಗೋಳ, ಭೀಮಪ್ಪ ಇದ್ಲಿ, ವಡ್ನಳ್ಳಿ ಗ್ರಾಮದ ಭೀಮರಡ್ಡಿ, ದ್ಯಾವಪ್ಪ, ದತ್ತು ಪಾಟೀಲ, ರಾಘವೇಂದ್ರ ಪೊ.ಪಾ. ಮರತೂರು ಮಲ್ಲಪ್ಪ, ಮುರ್ತೆಪ್ಪ, ಸೋಮು ಮುನ್ನಿತಾಂಡಾ, ಹೀರಾಸಿಂಗ್, ಜಯರಾಂ, ಬಸವರಾಜ ಗೋಣಿ, ಅಲ್ಲಿಪೂರ ಗ್ರಾಮದ ಹಂಪಯ್ಯ, ಸೋಮಯ್ಯ, ಭಾಗನಗೌಡ, ರಾಜುಗೌಡ, ರಾಮಣ್ಣ, ಆನಂದ ಪಾಟೀಲ, ಶರಣಗೌಡ, ದೇವಪ್ಪ, ಸಿದ್ದಪ್ಪ, ಕಾಶಪ್ಪ, ನಿಂಗಪ್ಪ ಪೂಜಾರಿ, ಹಣಮಂತರಡ್ಡಿ, ಬಸವಂತಪೂರ ಗ್ರಾಮದ ಗೋವಿಂದಪ್ಪ ನಾಯಕ, ಸಾಹೇಬರಡ್ಡಿ, ಬೀಮರಾಯ, ಬಂಗಾರೆಪ್ಪ, ವಿಕ್ರಂ ಬಸವಂತಪೂರ ತಾಂಡಾ, ಹೊಸೂರರಾಮ ಸೇರಿದಂತೆ ಇತರರಿದ್ದರು.



### ಗುರಮಠಕಲ್ ಶಾಸಕರ ಭೇಟಿಯ ಸಂದರ್ಭದಲ್ಲಿನ ಪ್ರಮುಖ ಭರವಸೆ

- ವಡ್ನಳ್ಳಿ ಶಾಲೆಗೆ 2ಕೋಣೆ ನಿರ್ಮಾಣಕ್ಕೆ ಭರವಸೆ
- ವಡ್ನಳ್ಳಿ, ವಡ್ನಳ್ಳಿ ತಾಂಡಾ ಸನ್ನತಿ ನೀರಾವರಿ ಪ್ರದೇಶದಿಂದ ಬರಬೇಕಿದ್ದ ಪರಿಹಾರ ಧನ ಹಾಗೂ ಯೋಜನೆಯ ಗೆಜೆಟ್ ನೋಟಿಫೀಕೇಶನ್ ಹೊರಡಿಸಲು ಸದನದಲ್ಲಿ ಧ್ವನಿ ಎತ್ತುವ ಭರವಸೆ.
- ವಿದ್ಯುತ್ ಸಮಸ್ಯೆ ನೀಗಿಸಲು ವಡ್ನಳ್ಳಿ, ವಡ್ನಳ್ಳಿ ತಾಂಡಾ, ಅಲ್ಲಿಪೂರ, ಬಸವಂತಪೂರ ಗ್ರಾಮಗಳಲ್ಲಿ ಲೈನ್ ಸಪರೇಟ್ ಮಾಡಿ ಜನರಿಗೆ ತೊಂದರೆ ಆಗಲಾರದಂಗ ಮಾಡ್ರಿ ವಿದ್ಯುತ್ ಸಮಸ್ಯೆ ನೀಗಿಸುವ ಭರವಸೆ
- ವಡ್ನಳ್ಳಿ ತಾಂಡಾ ಮತ್ತು ಸೀಮಿವರೆಗೆ ರಸ್ತೆ ರಿಪೇರಿ ಡಾಂಬರೀಕರಣ ಹಾಗೂ ಬಸವಂತಪೂರ, ತಾಂಡಾ, ಬಸವಂತಪೂರ ಅಂಗನವಾಡಿ ಕೇಂದ್ರ ಕಟ್ಟಡ ನಿರ್ಮಾಣಕ್ಕೆ ಭರವಸೆ
- ವಡ್ನಳ್ಳಿ ಶಾಲೆಯಲ್ಲಿ ಆರ್ ಪ್ಲಾಂಟ್ ರಿಪೇರಿಗೆ ಸೂಚನೆ
- ಬಸವಂತಪೂರ ಪ್ರೌಢ ಶಾಲೆ ಆವರಣದಲ್ಲಿ ಹೈ ಮಾಸ್ಕ್ ದೀಪ, ಶಾಲೆಗೆ ಉತ್ತಮ ಆಟದ ಮೈದಾನ, ಆಟದ ಪರಿಕರಗಳು, ಶಾಲೆಗೆ ಶುದ್ಧ ಕುಡಿವ ನೀರಿನ ವ್ಯವಸ್ಥೆಯ ಭರವಸೆ
- ಬಸವಂತಪೂರ – ಬೊಮ್ಮಶೆಟ್ಟಹಳ್ಳಿ ಮಾರ್ಗ ರಸ್ತೆ ಸುಧಾರಣೆಗೆ ಶೀಘ್ರವಾಗಿ ಅನುದಾನ ನೀಡಲಾಗುವುದು
- ಠಾಣಗುಂದಿ ಕ್ಯಾಸಪನಳ್ಳಿ ಮಾರ್ಗವಾಗಿ ಬಸ್ ಸೌಲಭ್ಯಕ್ಕೆ ಕೆಎಸ್‌ಆರ್‌ಟಿಸಿ ಅಧಿಕಾರಿಗೆ ಫೋನ್ ಮಾಡಿ ಶೀಘ್ರ ಸಮಸ್ಯೆ ಪರಿಹರಿಸಲು ಸೂಚನೆ
- ನಮ್ಮ ಭಾಗದ ಜನರಿಗೆ ಮಾಹಿತಿ ಇಲ್ಲ ಅವರಿಗೆ ತಿಳಿಹೇಳಿ ಎಸ್‌ಐಆರ್ ಪಾರಂ ತುಂಬಿ ಜನರಿಗೆ ಜಾಗೃತಿ ಮೂಡಿಸಿ ನಮ್ ಜನ ಮುಗ್ದರು ಹಾಗೂ ಅನಕ್ಷರಸ್ಥ ರು ಬಾಳ್ ಇದ್ದಾರೆ ಸ್ವಲ್ಪ ಸಹಕಾರ ಕೊಡಿ
- ಅಲ್ಲಿಪೂರ ಆಸ್ಪತ್ರೆ ಶೀಘ್ರದಲ್ಲಿಯೇ ಉದ್ಘಾಟನೆ ಮಾಡ್ತಿನಿ
- ಅಲ್ಲಿಪುರ ಸಣ್ಣ ತಾಂಡಾ ಅಂಗನವಾಡಿ ಸಹಾಯಕರನ್ನು ನೇಮಕಮಾಡಲು ಸೂಚನೆ

“ವಡ್ನಳ್ಳಿ ಗ್ರಾಮದ ಅಭಿವೃದ್ಧಿಗೆ ಸ್ಥಳಿಯ ಶಾಸಕರಾದ ಶರಣಗೌಡ ಕಂದಕೂರ ಅವರು ಸಾಕಷ್ಟು ಅನುದಾನ ನೀಡಿದ್ದಾರೆ. ಶಾಲೆ, ಆಸ್ಪತ್ರೆ, ಅಂಗನವಾಡಿ ಕೇಂದ್ರ, ರಸ್ತೆ, ಕುಡಿವ ನೀರು ಸೇರಿದಂತೆ ವಿದ್ಯುತ್ ಸಮಸ್ಯೆ ಬಗೆ ಹರಿಸಿದ್ದಾರೆ. ಈಗ 75 ಲಕ್ಷ ವೆಚ್ಚದಲ್ಲಿ ಬ್ರಿಡ್ಜ್ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದ್ದಾರೆ. ಇಲ್ಲಿವರೆಗೆ ಯಾವುದೇ ಜನಪ್ರತಿನಿಧಿಗಳು ನಮ್ಮೂರ ಕಡೆಗೆ ತಿರುಗಿ ನೋಡಿರಲಿಲ್ಲ, ಯಾವಾಗಾದರ ವರ್ಷದಲ್ಲಿ ಒಂದ್ ಬಾರಿ ಕಲಬುರಗಿಯಲ್ಲಿ ಕುಳಿತು 4 ಲಕ್ಷ ಅನುದಾನ ನೀಡಿ ಕೈತೊಳೆದುಕೊಳ್ಳುತ್ತಿದ್ದರು ಶರ–ಣಗೌಡರು ಅವರ ತಂದೆಯವರು ಶಾಸಕರಾಗಿದ್ದಾಗಿನಿಂದ ಸತತವಾಗಿ ನಮ್ಮೂರಿಗೆ ಭೇಟಿಕೊಟ್ಟು ನಮ್ಮ ಸಮಸ್ಯೆಗಳನ್ನು ಕೇಳುತ್ತಾ ಸಾಕಷ್ಟು ಅಭಿವೃದ್ಧಿ ಮಾಡ್ಯಾರ ನಾವು ಯಾವ ಕಾಮಗಾರಿ ಕೇಳಿದರೂ ಇಲ್ಲ ಅಂದಿಲ್ಲ, ಅದಕ್ಕಾಗಿ ಸ್ಥಳಿಯ ಶಾಸಕರು ನಮ್ಮ ಕ್ಷೇತ್ರಕ್ಕೆ ಬೇಕಾಗಿತ್ತು ನಮಗೆ ಸಿಕ್ಕಾರ, ಅವರಿಂದ ನಮ್ಮೂರು ಸಾಕಷ್ಟು ಅಭಿವೃದ್ಧಿ ಆಗ್ಯಾದ.

**– ದೇವಪ್ಪ ವಡ್ನಳ್ಳಿ ಗ್ರಾಮಸ್ಥರು**

### ಆಡಳಿತಾಧಿಕಾರಿಗಳಿಗೆ ಅಧಿಕಾರ ಕೊಡಿ

ಗ್ರಾಮಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ಸರ್ಕಾರ ನೇಮಿಸಿದೆ, ಆದರೆ ಇಲ್ಲಿನ ಜಿಲ್ಲಾ ಪಂಚಾಯತಿ ಅಧಿಕಾರಿಗಳು ಆಡಳಿತಾಧಿಕಾರಿಗಳಿಗೆ ಅಧಿಕಾರವನ್ನೇ ಕೊಟ್ಟಿಲ್ಲ ಹಣ ಖರ್ಚು ಮಾಡಲು ಗ್ರಾಪಂನಲ್ಲಿ ಅಧಿಕಾರಿಗಳಿಗೆ ಅವಕಾಶ ವಿಲ್ಲದಿದ್ದರೆ ಅಭಿವೃದ್ಧಿ ಹೇಗಾಗುತ್ತದೆ. ಚರಂಡಿ ಹೂಳೆತ್ತುವವರಿಲ್ಲ, ಶುದ್ಧ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ಕೂಡಲೇ ಆಡಳಿತಾಧಿಕಾರಿಗಳಿಗೆ ಕೀ(ಡೊಂಗಲ್) ಕೊಟ್ಟು ಅವರಿಗೆ ಅಭಿವೃದ್ಧಿಗೆ ಸ್ಪಂದಿಸುವಂತೆ ತಾಕೀತು ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ಶಾಸಕರು ಸೂಚಿಸಿದರು.

“ಗುರುಮಠಕಲ್ ಕ್ಷೇತ್ರದ ಜನರ ಧ್ವನಿಯಾಗಿ ನಾನು ಕೆಲಸಮಾಡುತ್ತಿದ್ದೇನೆ. ಸರ್ಕಾರಿ ಕಾರ್ಯಕ್ರಮಗಳಲ್ಲಿ ಯಾರೂ ಶಾಲು ಹಾರ ತರಬ್ಯಾಡ್ರಿ, ಅದೇ ಜಾಗದಲ್ಲಿ ನನಗೆ ಪುಸ್ತಕ ಕೊಡ್ರಿ ಓದುವ ವರ್ಗಕ್ಕೆ ನೀಡಲು ಅವಕಾಶ ಸಿಗಲಿದೆ. ಇನ್ನೂ ರೈತರ ಪರವಾಗಿ ಸದನದಲ್ಲಿ ಧನಿ ಎತ್ತುವೆ. ಶೀಘ್ರದಲ್ಲಿ ಜಿಪಂ ಅಧಿಕಾರಿಗಳು ಗ್ರಾಮ ಪಂಚಾಯತ್ ಆಡಳಿತಾಧಿಕಾರಿಗಳಿಗೆ ಹಣ ಖರ್ಚು ಮಾಡಲು ಅವಕಾಶಕೊಟ್ಟು ಗ್ರಾಮಗಳ ಅಭಿವೃದ್ಧಿಗೆ ಸಹಕರಿಸಬೇಕು.

**– ಶರಣಗೌಡ ಕಂದಕೂರ ಶಾಸಕರು ಗುರುಮಠಕಲ್ ಮತಕ್ಷೇತ್ರ**

“ಅಲ್ಲಿಪೂರ ಗ್ರಾಮದಲ್ಲಿ ಬಾಳ್ ದಿನದಿಂದ ನಮ್ಮೂರ ರಸ್ತೆ ಬ್ರೀಡ್ಜ್ ಆಗಿರಲಿಲ್ಲ ಸ್ಥಳಿಯ ಶಾಸಕರಾದ ಶರಣಗೌಡ ಕಂದಕೂರ ಅವರು ನಮ್ಮ ಮನವಿಗೆ ಸ್ಪಂದಿಸಿ 1 ಕೋಟಿ 25 ಲಕ್ಷ ಅನುದಾನದಲ್ಲಿ ಬ್ರಿಡ್ಜ್ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ಮಾಡ್ಯಾರ. ಅದರ ಜೊತೆಗೆ ಗ್ರಾಮದ ಭಾಗ್ಯವಂತಿ ದೇವಿ ದೇವಸ್ಥಾನ ಅಭಿವೃದ್ಧಿಗೆ ಸಹಕಾರ ನೀಡುವುದಾಗಿ ತಿಳಿಸಿದ್ದು, ಶಾಲೆ, ಆಸ್ಪತ್ರೆ, ಅಂಗನವಾಡಿ ಕೇಂದ್ರ, ರಸ್ತೆ, ಕುಡಿವ ನೀರು ಹೀಗೆ ಸಾಕಷ್ಟು ಅಭಿವೃದ್ಧಿ ಮಾಡಿದ್ದಾರೆ. ಇಲ್ಲಿಯವರೆಗೆ ಬಂದಿರುವ ಯಾವುದೇ ಜನಪ್ರತಿನಿಧಿಗಳು ನಮ್ಮೂರಿಗೆ ಇಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿರಲಿಲ್ಲ ಹಾಗಾಗಿ ಶಾಸಕ ಕಂದಕೂರ ಅವರಿಗೆ ವಿಶೇಷ ಧನ್ಯವಾದಗಳು.

**–ಹಂಪಯ್ಯ ಬಡಿಗೇರ ಅಲ್ಲಿಪೂರ ಗ್ರಾಮಸ್ಥರು**

# ಸರ್ವೋದಯ ಪೌಢಶಾಲೆಯಲ್ಲಿ ಪಾಲಕ-ಶಿಕ್ಷಕರ ಸಭೆ ಯಶಸ್ವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ತಾಲೂಕಿನ ಸರ್ವೋದಯ ಪ್ರೌಢಶಾಲೆ, ಯರಗೋಳದಲ್ಲಿ ಪಾಲಕ–ಶಿಕ್ಷಕರ ಸಭೆಯನ್ನು ಯಶಸ್ವಿಯಾಗಿ ನಡೆಸಲಾಯಿತು. ಸಭೆಯ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯಗುರುಗಳಾದ ಶ್ರೀ ಇಫ್ತೆಖಾರ ಅಲಿ ಜೆ. ಇನಾಮದಾರ ವಹಿಸಿ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಶಿಸ್ತು, ಹಾಜರಾತಿ, ಪರೀಕ್ಷಾ ಸಿದ್ಧತೆ ಹಾಗೂ ಉತ್ತಮ ಫಲಿತಾಂಶಕ್ಕಾಗಿ ಪಾಲಕರು ಮತ್ತು ಶಿಕ್ಷಕರು ಒಟ್ಟಾಗಿ ಕಾರ್ಯನಿರ್ವಹಿಸುವ ಅಗತ್ಯವನ್ನು ವಿವರಿಸಿದರು. ಸಭೆಯಲ್ಲಿ ವರ್ಗ ಶಿಕ್ಷಕಿ ಕುಮಾರಿ ವಿಜಯಲಕ್ಷ್ಮಿ ವಿದ್ಯಾರ್ಥಿಗಳ ಕಲಿಕಾ ಮಟ್ಟ, ದೈನಂದಿನ ಅಭ್ಯಾಸ, ಮನೆಪಾಠ, ಸಮಯ ಪಾಲನೆ ಹಾಗೂ ಮೊಬೈಲ್ ಬಳಸದಂತೆ ಕುರಿತು ಪಾಲಕರಿಗೆ ಅಗತ್ಯ ಮಾರ್ಗದರ್ಶನ ನೀಡಿದರು. ಶಾಲೆಯ ಹಿರಿಯ ಶಿಕ್ಷಕರಾದ ಶ್ರೀ ಬಸಪ್ಪ ಅವರು ವಿಶೇಷವಾಗಿ ಹತ್ತನೇ ತರಗತಿ ವಿದ್ಯಾರ್ಥಿಗಳ ಪಾಲಕರು ಮಕ್ಕಳ ಅಧ್ಯಯನದ ಮೇಲೆ ಹೆಚ್ಚಿನ ಗಮನ ಹರಿಸಿ, ಮನೆಯಲ್ಲಿ ಸೂಕ್ತ ಅಧ್ಯಯನ ವಾತಾವರಣ ಕಲ್ಪಿಸುವಂತೆ ಮನವಿ ಮಾಡಿದರು. ಪಾಲಕರು ತಮ್ಮ



ಅಭಿಪ್ರಾಯಗಳು ಹಾಗೂ ಸಲಹೆಗಳನ್ನು ಹಂಚಿಕೊಂಡು, ಶಾಲೆಯ ಶೈಕ್ಷಣಿಕ ಚಟುವಟಿಕೆಗಳಿಗೆ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದ ಅತಿಥಿಗಳಾಗಿ ವೇದಿಕೆಯ ಮೇಲೆ ಸಂಸ್ಥೆ ಕಾರ್ಯದರ್ಶಿ ಶಂಕರ್ ಆರ್ ಚವ್ಹಾಣ, ಮಾಜಿ ಕಾರ್ಯದರ್ಶಿ ಶ್ರೀ ಮಹಿಮೂದ ಎಮ್ ಇನಾಮದಾರ, ಪಾಲಕ ಪೋಷಕರ ಪರವಾಗಿ ಪ್ರಕಾಶ, ಉಮಾದೇವಿ, ಸಭಾಷ, ಜೋಹರಬೀ, ಪರಶುರಾಮ್ ಕುಂಬಾರ್, ಗಣೇಶ್, ಮೋಹನ್ ರಾಥೋಡ್, ಮಹಿಮೂದ್ ಮುಸ್ಥಾಜೀರ್ ಇತರರು ಉಪಸ್ಥಿತರಿದ್ದರು. ಪೂಜಾ ಕಾರ್ಯಕ್ರಮ ಪ್ರಾಣೇಶ್ ಸರ್ ನೆರವೇರಿಸಿದರು. ಶಿಕ್ಷಕಿಯಾದ ಶ್ರೀದೇವಿ ಚಿಗರಳ್ಳಿ ನಿರೂಪಿಸಿದರು. ಶರಣಬಸಪ್ಪ ಗುಳೇದ್ ಸ್ವಾಗತಿಸಿದರು ಕುಮಾರಿ ಸೃಜನ್ಯ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆಯನ್ನು ಹಾಡಿದರು. ಸಹ ಶಿಕ್ಷಕಿಯಾದ ಮಂಜುಳಾ ಅವರು ಕೊನೆಯಲ್ಲಿ ಸಭೆಯಲ್ಲಿ ಭಾಗವಹಿಸಿದ ಎಲ್ಲಾ ಪಾಲಕರು ಹಾಗೂ ಶಿಕ್ಷಕರಿಗೆ, ಧನ್ಯವಾದಗಳನ್ನು ಸಲ್ಲಿಸಿ, ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಎಲ್ಲರೂ ಕೈಜೋಡಿಸುವಂತೆ ಕರೆ ನೀಡಿ ವಂದನಾರ್ಪಣೆ ಸಲ್ಲಿಸಿದರು.

## ವಿದ್ಯಾರ್ಥಿಗಳಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರ

ಹೊಸಪೇಟೆ. ಜು,07: ಸಮಾಜ ಕಲ್ಯಾಣ ಇಲಾಖೆಯಡಿ ಬರುವ ಹಂಪಿ ಕನ್ನಡ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳ (SE/ST) ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯದಲ್ಲಿ ದಿನಾಂಕ 6ನೇ ಜುಲೈ 2026ರಂದು ವಿದ್ಯಾರ್ಥಿಗಳಿಗಾಗಿ ಉಚಿತ ರಕ್ತದೊತ್ತಡ (BP), ಮಧುಮೇಹ (Sugar) ಹಾಗೂ ಸಾಮಾನ್ಯ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಶಿಬಿರದಲ್ಲಿ ಕನ್ನಡ ವಿಶ್ವವಿದ್ಯಾಲಯದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ.ಯು. ರಾಜರಾಜೇಶ್ವರಿ ಅವರೊಂದಿಗೆ ಕಮಲಾಪುರದ ಹಳ್ಳಿಕೇರಿಯ ಸರ್ಕಾರಿ ಆಸ್ಪತ್ರೆಯ ಮೋಹನ್‌ಕುಮಾರ್, ಸುಮನಾ ವೇರೋನಿಕಾ ಬಿ, ನಾಗವೇಣಿ, ಧರ್ಮಜಿ, ಸಹಾಯಕರಾಗಿ ವಿಶ್ವವಿದ್ಯಾಲಯದ ಶ್ರೀಮತಿ ಸುನಿತಾಬಾಯಿ ಮತ್ತು ಹನುಮವ್ವ ಇವರುಗಳು ಭಾಗವಹಿಸಿ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆ ನಡೆಸಿದರು. ವಸತಿ ನಿಲಯದ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಿ ತಪಾಸಣಾ ಶಿಬಿರದ ಪ್ರಯೋಜನ ಪಡೆದುಕೊಂಡರು.




## ಮೋಹರಂ ಹಬ್ಬ ಆಚರಣೆ ವೇಳೆ ಅದ್ದೂರಿ ತಾಜಿಯಾ ಮೆರವಣಿಗೆ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಇತ್ತೀಚಿಗೆ ಮೊಹರಂ ಹಬ್ಬದ ಪ್ರಯುಕ್ತ ಅಂಕೋಲಾ ನಗರದಲ್ಲಿ ಮೊಹರಂ ಆಚರಣೆ–ಯ ಸಂಭ್ರಮ ಜರುಗಿತು. ಈ ವೇಳೆ ಎರಡು ತಾಜಿಯಾಗಳು ಮೆರವಣಿಗೆಯಲ್ಲಿ ಹೊರಟವು. ಅದರಲ್ಲಿ ಬೊಬ್ರುವಾಡದ ಗೇರುಕೊಪ್ಪದಿಂದು ಒಂದು ತಾಜಿಯಾ, ಅಂಕೋಲಾ ರೆಹಮಾನ್ ಮಸೀದಿಯ ಹತ್ತಿರದಿಂದ ಒಂದು ತಾಜಿಯಾ ಪ್ರತಿವರ್ಷ ಮೆರವಣಿಗೆಯಲ್ಲಿ ಹೊರಡುವುದು ವಾಡಿಕೆ. ಈ ಮೆರವಣಿಗೆಯಲ್ಲಿ ಭಕ್ತಾಧಿಗಳು ಹುಲಿವೇಷ ಧರಿಸಿ ಕುಣಿಯುತ್ತ ಬಂದಿದ್ದು ವಿಶೇಷವಾಗಿತ್ತು. ಹಿಂದೂ ಧರ್ಮದ ಭಕ್ತಾಧಿಗಳು ಉನ್ನತ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇಂಜಿನಿಯರ್ ಹಾಗು ಅವರ ಬಳಗದವರು ಹುಲಿವೇಷ ಕುಣಿತವನ್ನು ಪ್ರದರ್ಶಿಸಿದರು. ಬೊಬ್ರುವಾಡ ತಾಜಿಯಾದ ಜವಾಬ್ದಾರಿಯನ್ನು ತಾಜಿಯಾದ ಉಸ್ತುವಾರಿ ಹೊತ್ತ ಸೈಯದ್ ಅಣ್ಣ ಹಾಗೂ ಅಖ್ತರ ಜಿಲ್ಲಾ ಪತ್ರಿಕಾ ವರದಿಗಾರರು ಈ ತಾಜಿಯಾದ ಮೆರವಣಿಗೆಯಲ್ಲಿ ಉಸ್ತುವಾರಿ ವಹಿಸಿದ್ದರು. ಕಾಕರಮಠದ ಫೈರೋಜ್‌ಖಾನ್ ಅಂಜುಮನ್ ಸಂಸ್ಥೆಯ ನವಾಜ್ ಶೇಖ್, ಪಪ್ಪು ಸೈಯದ್, ಗುಲಾಬ್ ಸೈಯದ್, ಕಾಕರಮಠದ ತಾಜಿಯಾದ ಮುಜಾವರ ಹಾಗೂ ಅವರ ಬಳಗದವರು ನೂರುದ್ದೀನ್ ಶೇಖ್, ಅಬ್ದುಲ್ ಮುತಾಲಿಕ್ ಶೇಖ್ ಇನ್ನಿತರರು ಈ ಮೆರವಣಿಗೆಯಲ್ಲಿ ಹೊರಟು ಅಂಕೋಲಾ ನಗರದತ್ತ ಮೊಹರಂ ಹಬ್ಬದ ಮಹತ್ವ ಹಾಗೂ ನಡೆದು ಬಂದ ರೀತಿಯನ್ನು ಹಾಡಿನ ಮೂಲಕ ವಿವರಿಸಿದ್ದು ವಿಶೇಷವಾಗಿತ್ತು.



# ಗಾಢ ನಿದ್ರೆಗೆ ಜಾರಿದ ಅಬಕಾರಿ ಇಲಾಖೆಯ ಅಧಿಕಾರಿಗಳು





• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

:ಹಗರಿಬೊಮ್ಮನಹಳ್ಳಿತಾಲೂಕಿನಬಾಚಿಗೊಂಡನಹಳ್ಳಿ ಗ್ರಾಮದಲ್ಲಿರುವ ಒಖಖಐ ಸರ್ಕಾರಿ ಒಡೆತನದ ಮದ್ಯ ಮಾರಾಟದ ಮಳಿಗೆಗೆ ಬೆಂಕಿ ತಗುಲಿದ್ದು. ಸರಿಸುಮಾರು ಅಗ್ನಿಅವಾಗಡದಲ್ಲಿ ಸುಮಾರು 4–5 ಲಕ್ಷ ಮೊತ್ತದ ಮದ್ಯವೂ ಸುಟ್ಟು ಹೋಗಿರುತ್ತದೆ.

ಜುಲೈ–07ರಂದು ತಾಲೂಕಿನ ಬಾಚಿಗೊಂಡನಹಳ್ಳಿ ಗ್ರಾಮದಲ್ಲಿರುವ ಒಖಖಐ ನಲ್ಲಿ ಬೆಂಕಿ ಅವಘಡ ಸಂಭವಿಸಿದ್ದು. ಸರಿಸುಮಾರು 4–5 ಲಕ್ಷ ಮೌಲ್ಯದ ಮದ್ಯವು ಬೆಂಕಿಗೆ ಹಾಹುತಿಯಾದೆ ಎಂದು ಸ್ಥಳೀಯ ಒಖಖಐ ನಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳು ತಿಳಿಸಿದ್ದಾರೆ.

ಆದರೆ ಸಾರ್ವಜನಿಕ ವಲಯದಲ್ಲಿ ಕೇಳಿ ಬರುವ ಕೆಲವೊಂದು ಮಾಹಿತಿಗಳ ಪ್ರಕಾರ ಕಳೆದ 2021 ರಲ್ಲಿ ಎರಡು ಬಾರಿ ಕಳ್ಳತನವಾಗಿದೆ. ಆದರೂ ಸಹ ಸಿಬ್ಬಂದಿಗಳು ಮತ್ತು ವಂಡರ್ ಗಳು ಯಾವುದೇ ರೀತಿಯ ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಂಡಿಲ್ಲವೆಂದು ತಿಳಿದು ಬಂದಿದೆ. ಇದಕ್ಕೆ ಸಂಬಂಧಪಟ್ಟಂತೆ ಸಿಸಿಟಿವಿ ಕ್ಯಾಮೆರಾ ಕೂಡ ಯಾವುದೇ ರೀತಿಯ ವಿಡಿಯೋ ಕ್ರೂಢೀಕೃತವು ಸರಿಯಾದ ರೀತಿಯಲ್ಲಿ ನಡೆಯುತ್ತಿಲ್ಲವೆಂದು ಸಿಬ್ಬಂದಿ ಹೇಳಿಕೆ ನೀಡಿದ್ದಾರೆ. ಸಿಬ್ಬಂದಿಗಳು ತಡರಾತ್ರಿ 9–45 ಗಂಟೆಗಳ ತನಕ ಕಾರ್ಯನಿರ್ವಹಿಸಿ ಯಾತರೀತಿ ಮನೆಗೆ ತೆರಳುತ್ತಾರೆ.

ಬೆಳಗಿನ ಜಾವ ಸರಿ ಸುಮಾರು 6 ಗಂಟೆಗೆ ಸ್ಥಳೀಯರು ನೋಡಿದ ಮೇಲೆ ಕಟ್ಟಡದ ಸುತ್ತ ಹೊಗೆ ತುಂಬಿದ್ದರಿಂದ 112 ಗೆ ಕರೆ ಮಾಡಿ ತಕ್ಷಣ ಮಾಹಿತಿ ತಿಳಿಸಿದ್ದಾರೆ. ತದನಂತರ ಅಗ್ನಿಶಾಮಕ ಸಿಬ್ಬಂದಿಗಳು ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಂದಿಸುವ ಕೆಲಸವನ್ನು ಮಾಡಿರುತ್ತಾರೆ.

ಪೋಲಿಸ್ ಸಬ್ – ಇನ್ಸ್ಪೆಕ್ಟರ್ ಉಮಾಪತಿ ರವರು ಸ್ಥಳ ವೀಕ್ಷಣೆ ಮಾಡಿ ಸುಟ್ಟು ಹಾಳಾಗಿದ್ದಂತಹ ಮದ್ಯದ ಬಾಟಲಿಗಳ ದಾಖಲೆಗಳನ್ನು ಸಿಬ್ಬಂದಿಗಳಿಂದ ಮಾಹಿತಿ ಪಡೆದುಕೊಂಡು ಇದರ ಬಗ್ಗೆ ದಾಖಲೆಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

ಅಲ್ಲಿನ ವಾಸ್ತವ ಸ್ಥಿತಿ ಗಮನಿಸಿದಾಗ ಸಾರ್ವಜನಿಕರು ಹೇಳಿರುವ ಪ್ರಕಾರ 2021 ರಲ್ಲಿ ಎರಡು ಬಾರಿ ಕಳ್ಳತನವಾದರೂ ಸಹ ಸಿಬ್ಬಂದಿಗಳು ಯಾವುದರಿಂದ ಕ್ರಮಗಳನ್ನು ತೆಗೆದುಕೊಂಡಿಲ್ಲ. ಮತ್ತು ಹೆಚ್ಚಿನ ಪ್ರಮಾಣದಲ್ಲಿ ಇಲಿಗಳ ಹಾವಳಿ ಇದ್ದು ಮಧ್ಯದ ಬಾಟಲಿಗಳನ್ನು ಸಹ ಹಾಳು ಮಾಡಿರುವ ಕೆಲವೊಂದು ದೃಶ್ಯಾವಳಿಗಳು ದೊರೆತ ಕಾರಣ ಮೇಲ್ನೋಟಕ್ಕೆ ಅಧಿಕಾರಿಗಳ ನಿರ್ವಹಣೆಯು ಕಳಪೆ ಗುಣಮಟ್ಟದ ಕಂಡು ಬರುತ್ತದೆ. ಬೆಂಕಿ ಅವಘಡವೂ ಸಂಭವಿಸಿದೆ ಎಲ್ಲಾ ವಸ್ತುಗಳು ಸುಟ್ಟು ಹೋಗಿರಬೇಕು. ಅಲ್ಲಿ ಮಾತ್ರ ವಿದ್ಯುತ್ ಅವಘಡವು ಸಂಭವಿಸಿಲ್ಲವೆಂದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಯಾರು ಕಿಡಿಗೇಡಿಗಳು ಹಿಂಬದಿಯಿಂದ ಬೆಂಕಿ ಅಥವಾ ದ್ರವರೂಪದ ಅಪಾಯಕಾರಿ ವಸ್ತುಗಳನ್ನು ಎರಾಚಿರುವುದಾಗಿ ಸಂದೇಹ ಮೂಡಿ ಬರುತ್ತದೆ.ಹಿಂದುಗಡೆ ಅಧಿಕ ಪ್ರಮಾಣದಲ್ಲಿ ಹೊತ್ತಿ ಉರಿದಿರುತ್ತದೆ ಎಂದು ಸಾರ್ವಜನಿಕರು ಹೇಳುತ್ತಿದ್ದಾರೆ. ಅದರ ಜೊತೆಯಲ್ಲಿ ಅಬಕಾರಿ ಇಲಾಖೆಗೆ ಕರೆ ಮಾಡಿ ತಿಳಿಸಿದರು ಸಹ ಯಾವುದೇ ರೀತಿಯ ಸ್ಥಳ ವೀಕ್ಷಣೆಗೆ ಅಧಿಕಾರಿಗಳು ಭಾವಿಸಿರುವುದಿಲ್ಲ ಮೇಲ್ನೋಟಕ್ಕೆ ಅಧಿಕಾರಿಗಳ ಲೋಪವು ಎದ್ದು ಕಾಣುತ್ತದೆ. ಸರ್ಕಾರಿ ಹೊಡೆತನದ ಒಖಖಐ ನಲ್ಲಿ ಅಗ್ನಿ ಅವಘಡವ ಸಂಭವಿಸಿದರು ಸಹ ಅಬಕಾರಿ ಇಲಾಖೆಯ ತುರ್ತು ಪರಿಸ್ಥಿತಿ ಕೂಡ ಒಮ್ಮೆಯೂ ಸಹ ಗಮನಹರಿಸಿರುವುದಿಲ್ಲ.

ಇದಕ್ಕೆ ಸಂಬಂಧಪಟ್ಟಂತೆ ಉನ್ನತ ಹಂತದ ಅಧಿಕಾರಿಗಳು ಯಾವ ರೀತಿ ಕ್ರಮ ತೆಗೆದುಕೊಳ್ಳುತ್ತಾರೆ ಎಂಬುದನ್ನು ಕಾದು ನೋಡಬೇಕಾಗಿದೆ.

# ಅಪಘಾತದಲ್ಲಿ ಗಾಯಗೊಂಡ ಶ್ವಾನದ ರಕ್ಷಣೆ



• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ಇಲ್ಲಿನ ಕೆನರಾ ಬ್ಯಾಂಕ್ ಹತ್ತಿರ ಅಪರಿಚಿತ ವಾಹನ ಬಡಿದು ತಲೆಗೆ ತೀವ್ರವಾಗಿ ಪೆಟ್ಟು ಬಿದ್ದು ರಸ್ತೆಯಲ್ಲಿ ಒದ್ದಾಡುತ್ತಿದ್ದ ಶ್ವಾನಕ್ಕೆ ಚಿಕಿತ್ಸೆ ನೀಡಿ ರಕ್ಷಣೆ ಮಾಡಿದ ವಿದ್ಯಮಾನ ನಡೆದಿದೆ. ಸ್ಥಳೀಯರಾದ ರವಿ ಹೊಸಕಟ್ಟ ಅವರು ಪ್ರಾಣಿ ರಕ್ಷಕ ಹಾಗೂ ಗೋಕರ್ಣ ಗ್ರಾಮ ಪಂಚಾಯತ್ ನಿಕಟಪೂರ್ವ ಸದಸ್ಯ ಸುಜಯ ಶೆಟ್ಟಿ ಗೋಕರ್ಣ ಅವರಿಗೆ ವಿಷಯ ತಿಳಿಸಿದರು.

ಕೂಡಲೇ ಸುಜಯ ಶೆಟ್ಟಿ ಅವರು ಸ್ಥಳಕ್ಕೆ ಪಶು ವೈದ್ಯ ಡಾ.ವಿ.ಎಂ.ನಾಯ್ಕ ಅವರನ್ನು ಕರೆಸಿ ಗಾಯಗೊಂಡ ಶ್ವಾನಕ್ಕೆ ಚಿಕಿತ್ಸೆ ನೀಡಿ ಮಾನವೀಯತೆ ಮೆರೆದಿದ್ದಾರೆ. ಇದರಿಂದ ಶ್ವಾನ ಚೇತರಿಸಿಕೊಂಡಿದೆ. ಸುಜಯ ಶೆಟ್ಟಿ ಗೋಕರ್ಣ ಅವರು ಯಾವುದೇ ಪ್ರಾಣಿಪಕ್ಷಿಗಳಿಗೆ ತೊಂದರೆ ಉಂಟಾದರೂ ಅವರು ತಕ್ಷಣ ಸ್ಪಂದಿಸಿ ತಮ್ಮಿಂದಾದ ಸಹಾಯ ಮಾಡುವ ಮೂಲಕ ಜನರ ಪ್ರೀತಿಗೆ ಪಾತ್ರರಾಗಿದ್ದಾರೆ.

# ಮಟ್ಟೂರಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಸಭೆ




• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಎದುರಿಸಲು ಕಾಂಗ್ರೆಸ್ ಪಕ್ಷದ ಎಲ್ಲಾ ಕಾರ್ಯಕರ್ತರು ನಿಷ್ಠೆ ಮತ್ತು ಒಗ್ಗಟ್ಟಿನಿಂದ ಸಜ್ಜಾಗಬೇಕೆಂದು ಕೊಪ್ಪಳ ಸಂಸದ ರಾಜಶೇಖರ ಹಿಟ್ನಾಳ ಸೋಮುವಾರ ಕರೆ ನೀಡಿದರು. ಮುದಗಲ್ ಪಟ್ಟಣ ಸಮೀಪದ ಮಟ್ಟೂರು ಗ್ರಾಮದಲ್ಲಿ ಮಸ್ಕಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ಈಗಾಗಲೇ ರಾಜ್ಯಾದ್ಯಂತ ಎಸ್.ಐ.ಆರ್ ಪ್ರಕ್ರಿಯೆ ಚಾಲ್ತಿಯಲ್ಲಿದ್ದು ನಮ್ಮ ಕಾರ್ಯಕರ್ತರು ಕೂಡ ಚುನಾವಣೆ ಆಯೋಗದ ನಿರ್ದೇಶನದಂತೆ ಭರ್ತಿ ಮಾಡಿದ ಅರ್ಜಿಗಳನ್ನು ನೀಡಿ ಸಹಕರಿಸುವಂತೆ ಮನವಿ ಮಾಡಿದರು. ಮಸ್ಕಿ ಶಾಸಕ ಬಸನಗೌಡ ತುರುವಿಹಾಳ ಮಾತನಾಡಿ, ನಮ್ಮ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಈಗಾಗಲೇ ಸಾಕಷ್ಟು ಅನುದಾನ ಸರ್ಕಾರದಿಂದ ಪೂರೈಸಿದ್ದು ಗ್ರಾಮೀಣ ಭಾಗಗಳ ಅಭಿವೃದ್ಧಿಯೇ ನನ್ನ ಗುರಿ ಎಂಧರು. ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳಿಗೆ ಕಾರ್ಯರ್ತರು ಒಟ್ಟಾಗಿ ದುಡಿದು ಮತ್ತೆ ಕಾಂಗ್ರೆಸ ಪಕ್ಷವನ್ನು ಬಲಪಡಿಸಲು ಕೈಜೋಡಿಸಿ ಎಂಧರು. ಮಸ್ಕಿ ಗ್ಯಾರಂಟಿ ಯೋಜನಾ ಅನುಷ್ಠಾನ ಅಧ್ಯಕ್ಷ ಮೈಬೂಸಾಬ್ ಮುದ್ದಾಪೂರ, ಮಸ್ಕಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾಜುನಗೌಡ ಯದ್ದಲದಿನ್ನಿ, ಜಿಲ್ಲಾ ಉಪಾಧ್ಯಕ್ಷ ಆದನಗೌಡ ಸಂತೆಕೆಲ್ಲೂರು, ಪ್ರಮುಖರಾದ ಛತ್ರಯ್ಯ ಗುತೆ–ೀದಾರ, ಬಸವಂತಪ್ಪ ಹಸಮಕಲ್, ಮಲ್ಲನಗೌಡ ಅಳ್ಳಿ, ನಿರುಪಾದೆಪ್ಪ ವಕೀಲರು, ವೆಂಕಟರೆಡ್ಡಿ, ಮಲ್ಲರೆಡ್ಡೆಪ ಜಕ್ಕರಮುಡು ಹಾಗೂ ಇತರರಿದ್ದರು.

# ಎಸ್‌ಐಆರ್ ಪ್ರಕ್ರಿಯಲ್ಲಿ ಶೇ.೮೩.೬೮ರಷ್ಟು ಪ್ರಗತಿ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜು 07 : ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಭಾಗವಾಗಿ ಜುಲೈ 06ರ ಸೋಮವಾರ ಸಂಜೆ ವೇಳೆಗೆ ಜಿಲ್ಲಾದ್ಯಂತ ಇವರೆಗೆ 14,34,723 ಲಕ್ಷ ಮತದಾರರ ಗಣತಿ ನಮೂನೆಯನ್ನು ವಿತರಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 17,14,559 ಮತದಾರರ ಪೈಕಿ ಈವರೆಗೆ ಶೇ.83.68ರಷ್ಟು ಪ್ರಗತಿ ಸಾಧಿಸಲಾಗಿದೆ.

ಜಿಲ್ಲೆಯಲ್ಲಿ ಈವರೆಗೆ ವಿತರಿಸಲಾದ ಗಣತಿ ನಮೂನೆಗಳ ಪೈಕಿ 18.08 ಲಕ್ಷ ಮತದಾರರ ನಮೂನೆಗಳನ್ನು ಡಿಜಿಟಲೀಕರಿಸಲು ಸಾಧ್ಯವಾಗಿದೆ. 1,180 ಮತದಾರರು ಈವರೆಗೆ ಆನ್‌ಲೈನ್ ಮೂಲಕ ಗಣತಿ ನಮೂನೆಗಳನ್ನು ಭರ್ತಿ ಮಾಡಿದ್ದಾರೆ. ಸ್ಥಳದಲ್ಲಿ ಇಲ್ಲದ, ಬೇರೆ ವಿಳಾಸಕ್ಕೆ ಸ್ಥಳಾಂತರವಾದ, ಮೃತಪಟ್ಟ ಮತ್ತು ಎರಡು ಕಡೆ ನೋಂದಣಿಯಾದ ಒಟ್ಟು 3,898 ಮತದಾರರ ವಿವರ ಲಭ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಕ್ಯಾಳ ಸರ್ಕಾರಿ ಶಾಲೆಯಲ್ಲಿ ಹ್ಯೂಮಾನಿಟಿ ಟ್ರಸ್ಟ್‌ನಿಂದ ಉಚಿತ ನೋಟ್‌ಬುಕ್, ಪೆನ್ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಸಣ್ಣಹೆಜ್ಜೆಗಳು, ದೊಡ್ಡಕನಸುಗಳು ಎಂಬ ಧ್ಯೇಯದೊಂದಿಗೆ ನಿರಂತರ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿರುವ ಹ್ಯೂಮಾನಿಟಿ ಟ್ರಸ್ಟ್‌ವತಿಯಿಂದ ಸೋಮವಾರ ತಾಲೂಕಿನ ಹಕ್ಯಾಳ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್‌ಗಳು ಹಾಗೂ ಪೆನ್ನುಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ನಿಕಟ ಪೂರ್ವ ಪ್ರಾಚಾರ್ಯ ಶಿವಾಜಿ ಆರ್. ಎಚ್ ಅವರು ಮಾತನಾಡಿ, "ನಾನು ಸಹ ಸರ್ಕಾರಿ ಶಾಲೆಯಲ್ಲೇ ವಿದ್ಯಾಭ್ಯಾಸ ಮಾಡಿದ್ದು, ಜೀವನದಲ್ಲಿ ಅಳವಡಿಸಿಕೊಂಡ ಶಿಕ್ಷಣ ಮತ್ತು ಶಿಸ್ತು ನನ್ನನ್ನು ಈ ಮಟ್ಟಕ್ಕೆ ತಂದು ನಿಲ್ಲಿಸಿದೆ" ಎಂದು ತಮ್ಮ ಜೀವನಾನುಭವವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡು ಪ್ರೇರೇಪಿಸಿದರು. ಟ್ರಸ್ಟ್‌ನ ಸದಸ್ಯರು ಮಾತನಾಡಿ, ಶಿಸ್ತು ಮತ್ತು ಏಕಾಗ್ರತೆಯೇ ಯಶಸ್ವಿ ಜೀವನದ ಭದ್ರ ಅಡಿಪಾಯ ಎಂದರು.

ಈ ಸಂದರ್ಭದಲ್ಲಿ ಹ್ಯೂಮಾನಿಟಿ ಟ್ರಸ್ಟ್ ಅಧ್ಯಕ್ಷರಾದ ಆನಂದ್ ಮಶೇಟ್ಟೆ, ಪ್ರಮುಖ ಸದಸ್ಯರಾದ ಸತೀಶ್ ಪಾಟೀಲ್, ಶಿವಕುಮಾರ್ ಮಿರ್ಚೆ, ಅಮರ ಬಿಲಗುಂದೆ ಹಾಗೂ ಶಾಲಾ ಸಿಬ್ಬಂದಿಗಳಾದ ಮನೋಹರ್ ಪಾಂಚಾಳ್, ಗಣೇಶ್ ಚಿಕ್ಮುರ್ಗೆ, ರವಿಕುಮಾರ್ ಸರ್, ಮಹೇಶ್ವರಿ ಮೇಡಂ ಮತ್ತು ಶಾಲೆಯ ಮುದ್ದು ಮಕ್ಕಳು ಉಪಸ್ಥಿತರಿದ್ದರು.

# ಗವಿಶ್ರೀಗಳು ಕೊಪ್ಪಳದ ತೋಂಟದ ಶ್ರೀಗಳಾಗಲಿ ಎರಡು ದಶಕದ ಕೃಷಿ ನಷ್ಟವನ್ನು ಸರ್ಕಾರವೇ ಭರಿಸಲಿ: ರವಿಕೃಷ್ಣಾ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಪಕ್ಕದ ಗದಗ ಜಿಲ್ಲೆಗೆ ನೆಲೆಯೂರಲು ಬಂದಿದ್ದ ಕೋರಿಯಾ ಮೂಲದ ದೈತ್ಯ ಪೋಸ್ಕೋ ಕಂಪನಿಯ ಉಕ್ಕು ಘಟಕವನ್ನು ಓಡಿಸಿದ ತೋಂಟದ ಶ್ರೀಗಳು ನಮಗೆ ಆದರ್ಶ. ಎರಡು ದಶಕಗಳಿಂದ ಇಲ್ಲಿನ ಮಾಲಿನ್ಯಕಾರಕ ಕಾರ್ಖಾನೆಗಳು 22 ಹಳ್ಳಿಗಳ ಕೃಷಿ ಬದುಕು ನಾಶಗೊಳಿಸಿವೆ. ಅದರ ನಷ್ಟವನ್ನು ಸರ್ಕಾರ ತತ್ ಕ್ಷಣದಿಂದಲೇ ತುಂಬಿಕೊಡಬೇಕು ಎಂದು ಕೆ.ಆರ್. ಎಸ್. ಪಕ್ಷದ ಗೌರವಾಧ್ಯಕ್ಷ ರವಿಕೃಷ್ಣಾ ರೆಡ್ಡಿ 250ನೇ ದಿನದ ಬಲ್ಡೋಟ ತೊಲಗಿಸಿ ಹೋರಾಟ ಬೆಂಬಲಿಸಿ ಮಾತನಾಡಿದರು.

ಕಾರ್ಖಾನೆಗಳ ಮಾಲಿನ್ಯದಿಂದ ಕೃಷಿ ಸತತವಾಗಿ ಎರಡು ದಶಕಗಳಿಂದ ನಷ್ಟವಾಗುತ್ತಿದೆ. ಈ ನಷ್ಟದ ಕುರಿತು ಕೃಷಿ ಇಲಾಖೆ ಏನು ವರದಿ ಮಾಡಿದೆ, ಮಾಲಿನ್ಯ ನಿಯಂತ್ರಣ ಮಾಡದಿದ್ದರೆ ಕೃಷಿ ಉಳಿಯುತ್ತದೆಯೇ ಎಂದು ಪ್ರಶ್ನೆ ಮಾಡಲು ರೈತ ಸಂಪರ್ಕ ಕೇಂದ್ರದ ವರೆಗೆ ಕೊಪ್ಪಳ ಸಪ್ಪಳ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ರವಿಕೃಷ್ಣಾ ರೆಡ್ಡಿಯವರು ಮಾತನಾಡುತ್ತಾ ನಾಡು ಕಾಯಲು ಹೋರಾಟಗಾರರಿಗೆ ಎಷ್ಟು ಜವಾಬ್ದಾರಿ ಇದೆಯೋ ಅದಕ್ಕಿಂತ ಹೆಚ್ಚಿನ ಜವಾಬ್ದಾರಿಯ ಬಾಧ್ಯತೆ ಧರ್ಮ ಗುರುಗಳಿಗಿದೆ. ನಾಡಿಗೆ, ನೆಲಕ್ಕೆ ಕುತ್ತು ಬಂದಾಗ ಏನು ಮಾಡಬೇಕು ಎಂದು ಗದುಗಿನ ತೋಂಟದ ಶ್ರೀ ಸಿದ್ದಲಿಂಗ ಸ್ವಾಮಿಗಳು ಪೋಸ್ಕೋ ಕಂಪನಿ ಭೂ ಅತಿಕ್ರಮಣ ಮಾಡಲು ಮುಂದಾದಾಗ, ಕಪ್ಪತ್ತಗುಡ್ಡ ಗಣಿಗಾರಿಕೆ ಮಾಡಲು ಮುಂದಾದ ಎಂ.ಎಸ್.ಪಿ.ಎಲ್ ಓಡಿಸಿದ ಹೋರಾಟ ನಮಗೆ ಆದರ್ಶ.

ಇಲ್ಲಿನ ಗವಿಶ್ರೀಗಳು ತಮ್ಮ ಪರಿಸರ ಬೆಳೆಸುವ, ಮಾನವತಾವಾದಿ ಚಿಂತನೆಯಿಂದ ಮಹಾಜಾತ್ರೆ ನಡೆಸಿ ವಿಶೇಷ ಪ್ರಖ್ಯಾತಿ ಪಡೆದಿದ್ದಾರೆ. ಅವರು ಬಲ್ಡೋಟ ವಿರುದ್ಧ ಹೋರಾಡಲು ಮುಂದಾದ ಸಂದರ್ಭ ರಾಜ್ಯದ ಜನತೆ ಗಮನಿಸಿದ್ದಾರೆ. ಇಷ್ಟೊಂದು ದೀರ್ಘ ಕಾಲಕ್ಕೆ ಹೋರಾಟ ಮುಂದುವರಿಯಬಾರದಿತ್ತು. ಸ್ವಾಮಿಗಳು ಹೀಗೆ ಮುಂದುವರೆಯಲು ಬಿಡಬಾರದು.

ಜನರಿಲ್ಲದ ಧರ್ಮ, ಜನರಿಲ್ಲದ ಧರ್ಮ ಪೀಠ ಇರಲು ಸಾಧ್ಯವಿಲ್ಲ. ಶತಮಾನಗಳಿಂದ ಭಕ್ತರು ಕಟ್ಟಿದ ಶ್ರೀಗವಿಮಠವು ಭಕ್ತರನ್ನು ಕಾಪಾಡಲು ಎಂತಹ ತಪಸ್ಸಿಗೂ ಸಿದ್ಧವಾಗಲಿ ಎಂದರು.

ಮುಂದುವರೆದು ಎರಡು ದಶಕಗಳ ಕಾಲ ಇಲ್ಲಿನ ಕೃಷಿಯನ್ನು ನಾಶಪಡಿಸಿರುವ ಕಾರ್ಖಾನೆಗಳನ್ನು ಮುಚ್ಚಿ, ಹಿಂದಿನ ನಷ್ಟ ಕುರಿತು ಸಮೀಕ್ಷೆ ಮಾಡಿ ನಷ್ಟ ಭರ್ತಿಯನ್ನು ಸರ್ಕಾರ ತುಂಬಿ ಕೊಡಬೇಕು ಎಂದು ಆಗ್ರಹಿಸಿದರು.

ಕೆ.ಆರ್.ಎಸ್. ಪಕ್ಷದ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಆಶಾ ವೀರೇಶ ಮಾತನಾಡಿ ಇಲ್ಲಿನ ಕಂಪನಿಗಳ ಭ್ರಷ್ಟಾಚಾರದಲ್ಲಿ ರಾಜಕಾರಣಿಗಳು ಪಾಲುದಾರರಾಗಿದ್ದು ಇದನ್ನು ಜನರು ಅರಿತುಕೊಂಡು ಜಾಗೃತರಾಗಿ ಭ್ರಷ್ಟಾಚಾರರಹಿತ ರಾಜಕೀಯ ಮಾಡಲು ಮುಂದಾಗಬೇಕು ಎಂದರು.

ಧರಣಿ ಸ್ಥಳದ ಬಹಿರಂಗಸಭೆ ಮುಗಿಸಿದ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ನೇತೃತ್ವದಲ್ಲಿ ಹಲವು ವಾದ್ಯ ಪರಿಕರಗಳನ್ನು, ಖಾಲಿತಟ್ಟೆ ಬಾರಿಸಿ, ಅನ್ನ ಕಸಿದುಕೊಳ್ಳಬೇಡಿ ಎನ್ನುವ ಸಂದೇಶ ಸಾರಲು ಕೊಪ್ಪಳ ಸಪ್ಪಳ ಮಾಡಿ ಕಿವುಡಾದ ಇಲಾಖೆಗಳ, ರಾಜಕಾರಣಿಗಳ ಕಿವಿ ತೆರೆಸಲು ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ಅಶೋಕ ವೃತ್ತದಲ್ಲಿ ಮಾನವ ಸರಪಳಿ ಮಾಡಿ ಸಪ್ಪಳ ಜತೆಗೆ ಬಲ್ಡೋಟ ತೊಲಗಲಿ, ಕೊಪ್ಪಳ ಉಳಿಯಲಿ, ಕೃಷಿ ಉಳಿಸಿ, ಜೀವ ಉಳಿಸಿ, ಬಸಾಪುರ ಕೆರೆ ಮುಕ್ತಗೊಳಿಸಿ, ತುಂಗಭದ್ರಾ ಉಳಿಸಿ ಎಂದು ಘೋಷಣೆ ಕೂಗಲಾಯಿತು.

ರೈತ ಸಂಪರ್ಕ ಕೇಂದ್ರದ ಮುಂದೆ ನಡೆದ ಸಪ್ಪಳ ಪ್ರತಿಭಟನೆಯಲ್ಲಿ ಸಹಾಯಕ ಕೃಷಿ ನಿರ್ದೇಶಕ ಜೀವನಸಾಬ್, ಹೆಡ್ ಕ್ವಾರ್ಟರ್ ಎ.ಡಿ.ಎ ಅವರನ್ನು ತರಾಟೆಗೆ ತೆಗೆದುಕೊಂಡ ರೈತರು ನಷ್ಟ ಪರಿಹಾರ ಸರ್ಕಾರಷಭರಿಸಿ ಕೊಡಬೇಕೆಂದು ಒತ್ತಾಯ ಮಾಡಿದರು.

ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು ಅವರು ಸಮಾವೇಶಕ್ಕೆ ಬಂದ ಹೋರಾಟದ ಕೆ.ಆರ್.ಎಸ್.ಪಕ್ಷದ ಕಾರ್ಯಕರ್ತರನ್ನು ಸ್ವಾಗತ ಮಾಡಿದರು. ಸಂಚಾಲಕ ಮಲ್ಲಿಕಾರ್ಜುನ ಬಿ.ಗೋನಾಳ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜು ಬಾಕಳೆ ಮಾತನಾಡಿದರು. ಇನ್ನೊಬ್ಬ ಸಂಚಾಲಕ ಮಂಜುನಾಥ ಜಿ.ಗೊಂಡಬಾಳ ಕಾರ್ಯಕ್ರಮ ನಿರೂಪಣೆ ಮಾಡಿ ವಂದಿಸಿದರು.

ಪ್ರತಿಭಟನೆಯಲ್ಲಿ ಕೆ.ಆರ್.ಎಸ್. ಪಕ್ಷದ ಜಂಟಿ ಕಾರ್ಯದರ್ಶಿ ಎಲ್. ಜೀವನ್, ರಾಜ್ಯ ಎಸ್ಸಿ, ಎಸ್ಟಿ ಘಟಕ ಅಧ್ಯಕ್ಷ ಪ.ಯ.ಗಣೇಶ, ಜಿಲ್ಲಾ ಅಧ್ಯಕ್ಷ ಗಣೇಶ ಅಮೃತ್, ಆಪ್ ಜಿಲ್ಲಾಧ್ಯಕ್ಷ ಕನಕಪ್ಪ ಮಳಗಾವಿ, ಜಿಲ್ಲಾ ಕಾರ್ಯದರ್ಶಿ ಮಹೆಬೂಬ ಜಮಕಾನದಾರ, ಹಿರಿಯ ಸಾಹಿತಿ ಎಚ್.ಎಸ್.ಪಾಟೀಲ್, ಸರೋಜಾ ಬಾಕಳೆ, ಮಾಲಾ ಬಡಿಗೇರ, ವಿದ್ಯಾ ನಾಲವಾಡ, ಶಂಭುಲಿಂಗಪ್ಪ ಹರಗೇರಿ, ಡಾ. ಬಸವರಾಜ ಪೂಜಾರ, ಡಿ. ಎಂ.ಬಡಿಗೇರ, ಮಂಜುನಾಥ ಸೊರಟೂರ, ಭೀಮಸೇನ ಕಲಕೇರಿ, ಮೂಕಪ್ಪ ಮೇಸ್ತ್ರಿ, ಚೆನ್ನವೀರಯ್ಯ ಹಿರೇಮಠ, ಮಹೇಶ ವದ್ನಾಳ, ಶಿವಪ್ಪ ದೇವರಮನಿ, ಗವಿಸಿದ್ದಪ್ಪ ಪುಟಗಿ, ಗವಿಸಿದ್ದರೆಡ್ಡಿ ರಡ್ಡೇರ, ಮಂಜುನಾಥ ಕೆಂಚನಗೌಡ್ರ, ರಮೇಶ ಡಂಬ್ರಳ್ಳಿ, ಸುಖಮುನಿ ಬಡಿಗೇರ, ಮಹಾದೇವಪ್ಪ ಮಾವಿನಮಡು, ಮಲ್ಲಪ್ಪ ಮಾದಿನೂರು, ಶರಣು ಪಾಟೀಲ, ಬಿ.ಜಿ. ಕರಿಗಾರ, ಡಾ. ವಿ.ಬಿ ರಡ್ಡೇರ, ಸಲೀಮಾ ಜಾನ್, ಶಾಂತಯ್ಯ ಅಂಗಡಿ, ಹನುಮಂತಪ್ಪ ಗೊಂದಿ, ಯಲ್ಲಪ್ಪ ಬಂಡಿ, ಶಿವಾನಂದಯ್ಯ ಬೀಳಗಿಮಠ, ಯಮನೂರಪ್ಪ ಹಾಲಳ್ಳಿ, ಹನುಮಂತಪ್ಪ ಚಿಂಚಲಿ, ಸಣ್ಣ ಹನುಮಂತ ಬೊಮ್ಮಸಾಗರ, ಲಂಬಾಣಿ ಸಂಪ್ರದಾಯ ಉಡುಗೆಯುಟ್ಟ ಮಹಿಳೆಯರು ಹಾಗೂ ನೂರಾರು ಹಳ್ಳಿ ಬಾಧಿತ ರೈತರು ಪಾಲ್ಗೊಂಡರು.

# ದಿ. ನಾಗೇಶ್ವರ್ ನಾಥ್ ಸ್ಮರಣಾರ್ಥ ಮುಳ್ಳೂರು ಕ್ಯಾಂಪ್ ಸರ್ಕಾರಿ ಶಾಲೆ ದತ್ತು ಪಡೆದ ವಿಶ್ವನಾಥ್ ಚೌಧರಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜು 07.ದಿವಂಗತ ನಾಗೇಶ್ವರ್ ನಾಥ್ ಚೌಧರಿ ಅವರ ಪುಣ್ಯ ಸ್ಮರಣೆಯ ಅಂಗವಾಗಿ, ಗೋಡಿತಿ ನಾಗೇಶ್ವರ್ ನಾಥ್ ಚಾರಿಟೇಬಲ್ ಟ್ರಸ್ಟ್(ರಿ) ವತಿಯಿಂದ ಮುಳ್ಳೂರು ಕ್ಯಾಂಪಿನ ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳನ್ನು ವಿತರಿಸಲಾಯಿತು. ಈ ಶಾಲೆಯನ್ನು ಶ್ರೀ ಜಿ.ಕೆ. ವಿಶ್ವನಾಥ್ ಚೌಧರಿ ಅವರು ದತ್ತು ಪಡೆದು, ಅಭಿವೃದ್ಧಿಗೆ ಶ್ರಮಿಸುತ್ತಿರುವುದು ಶ್ಲಾಘನೀಯವಾಗಿದೆ.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಾಜಿ ಸಂಸದ ಕೆ. ವಿರುಪಾಕ್ಷಪ್ಪ ಮಾತನಾಡಿ, "ಜಿ.ಕೆ. ವಿಶ್ವನಾಥ್ ಚೌಧರಿ ಅವರು ತಮ್ಮ ಪುತ್ರನ ನೆನಪಿಗಾಗಿ ಸರ್ಕಾರಿ ಶಾಲೆಯನ್ನು ದತ್ತು ಪಡೆದು, ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಮೂಲಕ ಮಾದರಿ ಕೆಲಸ ಮಾಡಿದ್ದಾರೆ. ಸಮಾಜದ ಇಂತಹ ಉತ್ತಮ ಕಾರ್ಯಗಳು ಸರ್ಕಾರಿ ಶಾಲೆಗಳ ಬಲವರ್ಧನೆಗೆ ಅತ್ಯಗತ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸರ್ಕಾರದ ನಿರ್ಲಕ್ಷ್ಯ ಮತ್ತು ಪೋಷಕರಲ್ಲಿರುವ ಇಂಗ್ಲಿಷ್ ಭಾಷೆಯ ವ್ಯಾಮೋಹದಿಂದಾಗಿ ಹಲವು ಶಾಲೆಗಳು ಮುಚ್ಚುವ ಹಂತದಲ್ಲಿವೆ. ತಾಲೂಕಿನ ಶೇ. 50ರಷ್ಟು ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿದ್ದು, ಅನೇಕ ಶಾಲೆಗಳು ಒಬ್ಬರೇ ಶಿಕ್ಷಕರಿಂದ ನಡೆಯುತ್ತಿವೆ. ಶಾಲೆಗಳು ಕೇವಲ ಅತಿಥಿ ಶಿಕ್ಷಕರ ಮೇಲೆ ಅವಲಂಬಿತವಾಗಿರುವುದು ಶಿಕ್ಷಣ ವ್ಯವಸ್ಥೆಯ ದೌರ್ಬಲ್ಯವನ್ನು ತೋರಿಸುತ್ತದೆ.

ಸರ್ಕಾರಿ ಶಾಲೆಗಳಲ್ಲಿಯೂ ಖಾಸಗಿ ಶಾಲೆಗಳ ಮಾದರಿಯಲ್ಲಿ ಇಂಗ್ಲಿಷ್ ಕಲಿಕೆಗೆ ಒತ್ತು ನೀಡಬೇಕು. ಇಂಗ್ಲಿಷ್ ಮಾಧ್ಯಮದಲ್ಲಿ ಶಿಕ್ಷಣ ಪಡೆದ ಅರ್ಹ ಶಿಕ್ಷಕರಿಂದಲೇ ಬೋಧನೆ ಮಾಡಿಸಿದರೆ ಬಡ ಕುಟುಂಬಗಳ ಮಕ್ಕಳಿಗೆ ಹೆಚ್ಚಿನ ಅನುಕೂಲವಾಗಲಿದೆ. ಸರ್ಕಾರಿ ಶಾಲೆಗಳು ಉಳಿಯಬೇಕಾದರೆ ಶಿಕ್ಷಕರು, ಶಿಕ್ಷಣ ಇಲಾಖೆಯ ಅಧಿಕಾರಿಗಳು ಮತ್ತು ಶಾಲಾ ಸುಧಾರಣಾ ಸಮಿತಿಗಳು ಒಗ್ಗೂಡಿ ಕೆಲಸ ಮಾಡಬೇಕೆಂದು ಕರೆ ನೀಡಿದರು.ಈ ಸಂದರ್ಭದಲ್ಲಿ ಮುಖಂಡರಾದ ಬಿ. ಹರ್ಷ, ಜಿ.ಕೆ. ವಿಶ್ವನಾಥ್ ಚೌಧರಿ, ದೇವರಾಜ್ ಪಾಟೀಲ, ಸುರೇಶ್ ನೆಕ್ಕಂಟಿ, ವಂಶಿ ಕೃಷ್ಣ, ಬಸವರಾಜ ಸಾಲಗುಂದಾ, ಅಮರೇಗೌಡ ಮಲ್ಲಾಪುರ, ಅಜಯ್ ದಾಸರಿ, ಅಕ್ಷರ ದಾಸೋಹ ಅಧಿಕಾರಿ ನಾಗಪ್ಪ, ಬಿಆರ್‌ಪಿ ಶಣ್ಮುಖ ಗೌಡ, ಸಿಆರ್‌ಪಿ ಶೇಷರಾವ್, ಗ್ರಾ.ಪಂ. ಸದಸ್ಯ ಅಮರೇಶ್ ಗೌಡ, ಶಾಲೆಯ ಮುಖ್ಯ ಗುರುಗಳು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮತದಾರರಿಗೆ ಜಾಗೃತಿ ಮೂಡಿಸಲು ಬೈಕ್ ರ‍್ಯಾಲಿ



• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

:ಈಗಾಗಲೇ ಕೊಟ್ಟೂರು ತಾಲೂಕಿನಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (SIR) ಪ್ರಕ್ರಿಯೆ ಪ್ರಾರಂಭವಾಗಿದ್ದು, ಮತದಾರರ ಮನೆ ಮನೆಗೆ ತೆರಳಿ ಗಣತಿ ಫಾರಂನ್ನು ವಿತರಿಸಲಾಗುತ್ತಿದೆ. ಸದರಿ ಗಣತಿ ಫಾರಂ ಭರ್ತಿ ಮಾಡಿ ಮತದಾರರು ಮಾಹಿತಿಯೊಂದಿಗೆ ಸಂಬಂಧಿಸಿದ ಬಿಎಲ್‌ಒಗಳಿಗೆ ಹಿಂದಿರುಗಿಸಬೇಕಾಗಿರುತ್ತದೆ. ಈ ಬಗ್ಗೆ ಮತದಾರರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ತಾಲೂಕಿನ ಸ್ವೀಪ್ ಸಮಿತಿಯಿಂದ ಇಂದು ಬೈಕ್ ರ‍್ಯಾಲಿಯನ್ನು ಹಮ್ಮಿಕೊಳ್ಳಲಾಗಿತ್ತು.

ರ‍್ಯಾಲಿಗೆ ಚಾಲನೆ ನೀಡಿದ ತಹಶೀಲ್ದಾರರಾದ ಅಮರೇಶ್.ಜಿ.ಕೆ ಇವರು ಮತದಾರರ ಪರಿಷ್ಕರಣೆ ಕಾರ್ಯವು ಮಹತ್ವದ್ದಾಗಿದ್ದು, ಎಲ್ಲಾ ಮತದಾರರು 2002ರ ಮತದಾರರ ಪಟ್ಟಿಯ ಮತದಾರರೊಂದಿಗೆ ಮ್ಯಾಪಿಂಗ್ ಮಾಡುವ ಕಾರ್ಯವನ್ನು ಈಗಾಗಲೇ ಮತಗಟ್ಟೆ ಅಧಿಕಾರಿಗಳು ಮಾಡಿದ್ದು, ಹಾಲೀ ಮತದಾರರು ಗಣತಿ ನಮೂನೆಯಲ್ಲಿ ಅವಶ್ಯ ಮಾಹಿತಿಯನ್ನು ಭರ್ತಿಮಾಡಿ ಸಂಬಂಧಿಸಿದ ಮತಗಟ್ಟೆ ಅಧಿಕಾರಿಗಳಿಗೆ ಒದಗಿಸುವ ಮೂಲಕ ಈ ಕಾರ್ಯಕ್ರಮವು ಯಶಸ್ವಿಯಾಗಲು ಸಹಕರಿಸುವಂತೆ ಹಾಗೂ ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿಯದಂತೆ ನೋಡಿಕೊಳ್ಳುವ ಉದ್ದೇಶದಿಂದ ಮಾಹಿತಿಯನ್ನು ತಪ್ಪದೇ ನೀಡುವಂತೆ ತಿಳಿಸಿದರು.

ತಾಲೂಕು ಸ್ವೀಪ್ ಸಮಿತಿಯ ಅಧ್ಯಕ್ಷರಾದ ಡಾ.ಆನಂದ್ ಕುಮಾರ್ ಇವರು ಮತದಾರರ ಪಟ್ಟಿಯ ಪರಿಷ್ಕರಣೆ ಬಗ್ಗೆ ಸಾಕಷ್ಟು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ರಂಗೋಲಿ ಸ್ಪರ್ಧೆ, ಪ್ರಭಂಧ ಸ್ಪರ್ಧೆ ಏರ್ಪಡಿಸುವ ಮೂಲಕ ಇನ್ನಷ್ಟು ಜಾಗೃತಿ ಮೂಡಿಸಲು ಕ್ರಮವಹಿಸಲಾಗುವುದು. ಇಂದು ಕೊಟ್ಟೂರು ಪಟ್ಟಣದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಬೈಕ್ ರ‍್ಯಾಲಿಯ ಮೂಲಕ ಪಟ್ಟಣದಲ್ಲಿ ಸಂಚರಿಸಿ ಜಾಗೃತಿಯನ್ನು ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕ್ಷೇತ್ರಶಿಕ್ಷಣಾಧಿಕಾರಿ ಮೈಲೇಶ್ ಬೇವೂರು, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಸರುಲ್ಲಾ, ಜೆಸ್ಕಾಂ ಎಇಇ ನಾಗರಾಜ, ಸಮುದಾಯ ಆರೋಗ್ಯ ಕೇಂದ್ರದ ವೈಧ್ಯರಾದ ಡಾ.ಮಂಜುನಾಥ, ಮುಖ್ಯ ಪಶುವೈಧ್ಯಾಧಿಕಾರಿ ಡಾ.ಚಂದ್ರನಾಯ್ಕ, ಎಪಿಎಂಸಿ ಕಾರ್ಯದರ್ಶಿ ಎ ಕೆ ಈರಣ್ಣ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಯೋಗೀಶ್ವರ ದಿನ್ನೆ, ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆಯ ಇಸಿಓ ನಿಂಗಪ್ಪ, ಸಿಆರ್‌ಪಿಗಳು, ವಿವಿಧ ಇಲಾಖೆಯ ಸಿಬ್ಬಂದಿಯವರು ಅಲ್ಲದೇ ಅನೇಕ ಸಾರ್ವಜನಿಕರು ಸಹಾ ಬೈಕ್ ರ‍್ಯಾಲಿಯಲ್ಲಿ ಭಾಗವಹಿಸಿದ್ದರು. ಸಿ ಮ ಗುರುಬಸವರಾಜ ಸ್ವಾಗತಿಸಿದರು. ಈ ರ‍್ಯಾಲಿಯು ತಾಲೂಕು ಪಂಚಾಯಿತಿಯಿಂದ ಪ್ರಾರಂಭವಾಗಿ ಎಪಿಎಂಸಿ ರಸ್ತೆಯ ಮೂಲಕ ಬಸ್ನಿಲ್ದಾಣದ ರಸ್ತೆ, ಗಾಂಧಿ ಸರ್ಕಲ್, ಉಜ್ಜಿನಿ ರಸ್ತೆ, ಬೆಂಗಳೂರು ರಸ್ತೆ ಮೂಲಕ ಸಾಗಿ ಮತದಾರರಲ್ಲಿ ಜಾಗೃತಿಯನ್ನು ಮೂಡಿಸಲಾಯಿತು.

## 18ರಂದು ಕಲ್ಯಾಣ ಕರ್ನಾಟಕ ಮಟ್ಟದ ಬೋವಿಜನೋತ್ಸವ
## 5 ಸಾವಿರಕ್ಕೂ ಹೆಚ್ಚು ಜನರ ಭಾಗವಹಿಸುವಿಕೆ ನಿರೀಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕಲ್ಯಾಣ ಕರ್ನಾಟಕ ಮಟ್ಟದ ಬೋವಿ ಜನೋತ್ಸವ–2026 ಹಾಗೂ ಜಗದ್ಗುರು ಇಮ್ಮಡಿ ಸಿದ್ದರಾಮೇಶ್ವರ ಮಹಾಸ್ವಾಮೀಜಿಗಳ 17ನೇ ಪಟ್ಟಾಭಿಷೇಕ ಮಹೋತ್ಸವ, 28ನೇ ಲಾಂಛನ ದೀಕ್ಷಾ ಮಹೋತ್ಸವ ಮತ್ತು 40ನೇ ಜನ್ಮದಿನೋತ್ಸವ ಇದೇ ತಿಂಗಳ 18ರಂದು ಅದ್ದೂರಿಯಾಗಿ ನಡೆಯಲಿದ್ದು, ಬೋವಿ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಆರ್ಥಿಕ ಸಹಾಯಧನ ವಿತರಿಸಲಾಗುವುದು ಎಂದು ರಾಯಚೂರು ಜಿಲ್ಲಾ ಬೋವಿ ಸಮಾಜದ ಅಧ್ಯಕ್ಷ ಅಶೋಕ್ ಉಮಾನುಡಿ ತಿಳಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೂಜ್ಯ ಜಗದ್ಗುರು ಇಮ್ಮಡಿ ಸಿದ್ದರಾಮೇಶ್ವರ ಮಹಾಸ್ವಾಮೀಜಿಗಳ ಆಶೀರ್ವಾದ ಹಾಗೂ ಆದೇಶದ ಮೇರೆಗೆ ಜನೋತ್ಸವವನ್ನು ಆಯೋಜಿಸಲಾಗುತ್ತಿದೆ. ಸಮುದಾಯದ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಅಭಿವೃದ್ಧಿಗೆ ಉತ್ತೇಜನ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಲಾಗುವುದು ಎಂದು ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಉತ್ತಮ ಅಂಕಗಳನ್ನು ಗಳಿಸಿದ ಬೋವಿ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು. ಜೊತೆಗೆ, ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಆಯ್ಕೆಯಾದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ತಲಾ ?5,000 ಆರ್ಥಿಕ ಸಹಾಯಧನ ವಿತರಿಸಲಾಗುವುದು ಎಂದು ಹೇಳಿದರು. ಕಾರ್ಯಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯ ಅತಿಥಿಯಾಗಿ ಆಹ್ವಾನಿಸಲಾಗಿದ್ದು, ಅವರ ಆಗಮನದ ನಿರೀಕ್ಷೆಯಿದೆ. ಕಲ್ಯಾಣ ಕರ್ನಾಟಕ ಭಾಗದ ವಿವಿಧ ಜಿಲ್ಲೆಗಳು ಹಾಗೂ ಬಳ್ಳಾರಿಯಿಂದ ಸೇರಿದಂತೆ ಸುಮಾರು 5 ಸಾವಿರಕ್ಕೂ ಹೆಚ್ಚು ಜನರು ಜನೋತ್ಸವದಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಕಾರ್ಯಕ್ರಮದ ಯಶಸ್ಸಿಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಿದ್ದು ಬಂಡಿ, ಹನುಮಂತಪ್ಪ, ರಾಮಾಂಜಿನಿ, ತಿಪ್ಪಣ್ಣ ಸೇರಿದಂತೆ ಬೋವಿ ಸಮುದಾಯದ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

## ಬಳ್ಳಾರಿ ಜಿಲ್ಲಾ ಆಸ್ಪತ್ರೆಗೆ ಆರೋಗ್ಯ ಅಧಿಕಾರಿಗಳ ಭೇಟಿ
## ಗರ್ಭಿಣಿಯರು ಹಾಗೂ ನವಜಾತ ಶಿಶುಗಳ ಆರೋಗ್ಯ ರಕ್ಷಣೆಗೆ ಜಾಗೃತಿ ಕರೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲಾ ಆಸ್ಪತ್ರೆಯ ತಾಯಿ ಮತ್ತು ಮಕ್ಕಳ ಆರೋಗ್ಯ ವಿಭಾಗಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಎನ್. ಬಸರೆಡ್ಡಿ, ಬಳ್ಳಾರಿ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಆರ್. ಅಬ್ದುಲ್ಲಾ ಮತ್ತು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ. ಪೂಜಾರ್ ಅವರು ಜಂಟಿಯಾಗಿ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿದ್ದ ತಾಯಂದಿರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು, ಗರ್ಭಿಣಿಯರು, ಬಾಣಂತಿಯರು ಮತ್ತು ನವಜಾತ ಶಿಶುಗಳ ಆರೈಕೆ ಹಾಗೂ ಆರೋಗ್ಯದ ಕುರಿತು ಸವಿಸ್ತಾರವಾದ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು.

*ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯ ಹಾಗೂ ಪೌಷ್ಟಿಕಾಂಶ:*

ಗರ್ಭಾವಸ್ಥೆಯಲ್ಲಿ ಮತ್ತು ಹೆರಿಗೆಯ ನಂತರ ತಾಯಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯವು ಮಗುವಿನ ಮೇಲೆ ನೇರ ಪರಿಣಾಮ ಬೀರುತ್ತದೆ. ಹೀಗಾಗಿ ತಾಯಂದಿರು ಪ್ರೋಟೀನ್, ಕ್ಯಾಲ್ಸಿಯಂ, ಕಬ್ಬಿಣಾಂಶ (ಐರನ್) ಮತ್ತು ಫೋಲಿಕ್ ಆಸಿಡ್ ಸಮೃದ್ಧವಾಗಿರುವ ಹಸಿರು ಎಲೆ ತರಕಾರಿಗಳು, ಹಾಲು, ಮೊಟ್ಟೆ, ಧಾನ್ಯಗಳು ಹಾಗೂ ಹಣ್ಣುಗಳನ್ನು ಹೆಚ್ಚಾಗಿ ಸೇವಿಸಬೇಕು. ಪ್ರತಿದಿನ 2 ರಿಂದ 3 ಲೀಟರ್ ನೀರು ಕುಡಿಯಬೇಕು. ತಾಯಿಗೆ ಕನಿಷ್ಠ 7 ರಿಂದ 9 ಗಂಟೆಗಳ ಉತ್ತಮ ನಿದ್ರೆ ಹಾಗೂ ಮಾನಸಿಕ ಒತ್ತಡವಿಲ್ಲದ ಸಂತೋಷದ ವಾತಾವರಣ ಅತ್ಯಗತ್ಯ. ಮಲಗುವಾಗ ಎಡಬದಿಗೆ ಮಲಗುವುದು ರಕ್ತಸಂಚಾರಕ್ಕೆ ಸಹಕಾರಿಯಾಗಿದೆ. ವೈದ್ಯರ ಸಲಹೆಯಿಲ್ಲದೆ ಯಾವುದೇ ಔಷಧಿಗಳನ್ನು ಸೇವಿಸಬಾರದು ಹಾಗೂ ಧೂಮಪಾನ, ಮದ್ಯಪಾನಗಳಿಂದ ದೂರವಿರಬೇಕು ಎಂದು ಅಧಿಕಾರಿಗಳು ತಿಳಿಸಿದರು.

*ಕಡ್ಡಾಯವಾಗಿ ಮಾಡಿಸಬೇಕಾದ 4 ಆರೋಗ್ಯ ತಪಾಸಣೆಗಳು:*

ಗರ್ಭಿಣಿಯರು ಹೆರಿಗೆಗೆ ಮುನ್ನ ಕಡ್ಡಾಯವಾಗಿ 4 ಬಾರಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಮೊದಲನೇ ತಪಾಸಣೆ (ಮೊದಲ 3 ತಿಂಗಳು) ಗರ್ಭಧಾರಣೆ ಖಚಿತವಾದ ತಕ್ಷಣ (12 ವಾರಗಳ ಒಳಗೆ) ಮೂಲ ವಿವರಗಳ ದಾಖಲಾತಿಗಾಗಿ, ಎರಡನೇ ತಪಾಸಣೆ (4 ರಿಂದ 6 ನೇ ತಿಂಗಳು) 14 ರಿಂದ 26 ನೇ ವಾರದ ಅವಧಿಯಲ್ಲಿ ಮಗುವಿನ ಬೆಳವಣಿಗೆ ಗಮನಿಸಲು, ಮೂರನೇ ತಪಾಸಣೆ (7 ಮತ್ತು 8 ನೇ ತಿಂಗಳು) 28 ರಿಂದ 34 ನೇ ವಾರದಲ್ಲಿ ತಾಯಿಯ ರಕ್ತದೊತ್ತಡ ಅಥವಾ ಮಧುಮೇಹದ ಲಕ್ಷಣಗಳನ್ನು ಪರೀಕ್ಷಿಸಲು, ನಾಲ್ಕನೇ ತಪಾಸಣೆ (9 ನೇ ತಿಂಗಳು) 36 ನೇ ವಾರದಿಂದ ಹೆರಿಗೆಯಾಗುವವರೆಗಿನ ಅವಧಿಯಲ್ಲಿ ಹೆರಿಗೆಯ ಸಿದ್ಧತೆಗಾಗಿ ತಪಾಸಣೆ ಮಾಡಿಸಬೇಕು ಎಂದರು.

*ಸಾಮಾನ್ಯ ಪರೀಕ್ಷೆಗಳು:*

ಪ್ರತಿ ತಪಾಸಣೆಯಲ್ಲೂ ತಾಯಿಯ ತೂಕ (ಗರ್ಭಾವಸ್ಥೆಯಲ್ಲಿ ಸರಾಸರಿ 10–12 ಕೆಜಿ ಹೆಚ್ಚಾಗಬೇಕು), ರಕ್ತದೊತ್ತಡ (ಬಿಪಿ), ಹೊಟ್ಟೆಯ ಗಾತ್ರ ಮತ್ತು ಭ್ರೂಣದ ಹೃದಯ ಬಡಿತವನ್ನು ಕಡ್ಡಾಯವಾಗಿ ಪರಿಶೀಲಿಸಲಾಗುತ್ತದೆ.

*ಪ್ರಯೋಗಾಲಯ ಪರೀಕ್ಷೆಗಳು ಮತ್ತು ಸ್ಕಾ ??ನಿಂಗ್ ಮಹತ್ವ:*

ರಕ್ತಹೀನತೆ ಪತ್ತೆಗೆ ಹಿಮೋಗ್ಲೋಬಿನ್ ಪರೀಕ್ಷೆ, ಬ್ಲಡ್ ಗ್ರೂಪ್ ತಪಾಸಣೆ, ಎಚ್.ಐ.ವಿ, ಹೆಪಟೈಟಿಸ್ ಬಿ, ಸಿಫಿಲಿಸ್ ಹಾಗೂ ಮಧುಮೇಹ ಮತ್ತು ಮೂತ್ರದ ಸೋಂಕು ಪತ್ತೆಹಚ್ಚಲು ಅಗತ್ಯ ಲ್ಯಾಬ್ ಪರೀಕ್ಷೆಗಳನ್ನು ಮಾಡಿಸಲಾಗುತ್ತದೆ. ಇದರೊಂದಿಗೆ ಪ್ರಮುಖವಾಗಿ 3 ಅಲ್ಟ್ರಾಸೌಂಡ್ ಸ್ಕಾ ??ನಿಂಗ್‌ಗಳನ್ನು ಶಿಫಾರಸು ಮಾಡಲಾಗುತ್ತದೆ.

*ಔಷಧಗಳು, ಲಸಿಕೆಗಳು:*

ಧನುರ್ವಾಯು ತಡೆಯಲು 2 ಡೋಸ್ ಟಿ.ಡಿ ಲಸಿಕೆ ನೀಡಲಾಗುತ್ತದೆ. ಗರ್ಭಧಾರಣೆಯ 4 ನೇ ತಿಂಗಳಿನಿಂದ ಹೆರಿಗೆಯ ನಂತರದ 6 ತಿಂಗಳವರೆಗೆ ದಿನಕ್ಕೆ ಒಂದು ಐರನ್ ಮಾತ್ರೆ ಹಾಗೂ ಮಗುವಿನ ಮೂಳೆಗಳ ಬೆಳವಣಿಗೆಗೆ ಕ್ಯಾಲ್ಸಿಯಂ ಮಾತ್ರೆಗಳನ್ನು ನೀಡಲಾಗುತ್ತದೆ. ಕಬ್ಬಿಣಾಂಶ ಮತ್ತು ಕ್ಯಾಲ್ಸಿಯಂ ಮಾತ್ರೆಗಳ ಸೇವನೆಯ ನಡುವೆ ಕನಿಷ್ಠ 2 ಗಂಟೆಗಳ ಅಂತರವಿರಬೇಕು.

ತಾಯಿಗೆ ತೀವ್ರ ಹೊಟ್ಟೆನೋವು, ಯೋನಿಯಿಂದ ರಕ್ತಸ್ರಾವ, ತಲೆಸುತ್ತು, ಮುಖ–ಕೈಕಾಲುಗಳಲ್ಲಿ ಹಠಾತ್ ಊತ, ದೃಷ್ಟಿ ಮಸುಕಾಗುವುದು, ನೀರು ಒಡೆಯುವುದು, ಜ್ವರ ಅಥವಾ ಮಗುವಿನ ಚಲನೆ ಕಡಿಮೆಯಾದಲ್ಲಿ ತಕ್ಷಣವೇ ಆಸ್ಪತ್ರೆಗೆ ಧಾವಿಸಬೇಕು ಎಂದು ಎಚ್ಚರಿಸಿದರು.

*ನವಜಾತ ಶಿಶು ಮತ್ತು ಮಕ್ಕಳ ಆರೋಗ್ಯ ಆರೈಕೆ:*

ಮಗು ಹುಟ್ಟಿದ ಮೊದಲ ಒಂದು ಗಂಟೆಯೊಳಗೆ 'ಕೊಲೆಸ್ಟ್ರಮ್' (ಗಿಣ್ಣು ಹಾಲು) ನೀಡಬೇಕು. ಮೊದಲ 6 ತಿಂಗಳವರೆಗೆ ಮಗುವಿಗೆ ಕೇವಲ ಎದೆಹಾಲು ಮಾತ್ರ ನೀಡಬೇಕು, ನೀರನ್ನೂ ಕೊಡುವ ಅಗತ್ಯವಿರುವುದಿಲ್ಲ. 6 ತಿಂಗಳ ನಂತರ ಎದೆಹಾಲಿನೊಂದಿಗೆ ರಾಗಿ ಸರಿ, ಕಿಚಡಿ, ಹಣ್ಣುಗಳ ಪ್ಯೂರಿಯಂತಹ ಮೃದು ಆಹಾರ ನೀಡಬೇಕು. ಸರ್ಕಾರದ ವೇಳಾಪಟ್ಟಿಯಂತೆ ಕಾಮಾಲೆ, ಪೋಲಿಯೋ, ಬಿಸಿಜಿ, ದಡಾರ ಮುಂತಾದ ಮಾರಕ ಕಾಯಿಲೆಗಳ ವಿರುದ್ಧ ಸಕಾಲದಲ್ಲಿ ಲಸಿಕೆ ಹಾಕಿಸಬೇಕು. ಮಗುವನ್ನು ಮುಟ್ಟುವ ಮುನ್ನ ಕೈಗಳನ್ನು ತೊಳೆದುಕೊಂಡು ಸ್ವಚ್ಛತೆ ಕಾಪಾಡಬೇಕು ಎಂದು ಅಧಿಕಾರಿಗಳು ತಾಯಂದಿರಿಗೆ ಮನವರಿಕೆ ಮಾಡಿಕೊಟ್ಟರು.

## ವಿಬಿ-ಜಿ ರಾಮ್ ಜಿ' ಯೋಜನೆ: ವರ್ಷಕ್ಕೆ 125 ದಿನ ಉದ್ಯೋಗ, ದಿನಕ್ಕೆ 382 ರೂ. ಕೂಲಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕೇಂದ್ರ ಸರ್ಕಾರವು ಎರಡು ದಶಕಗಳಿಂದ ಜಾರಿಯಲ್ಲಿದ್ದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ (ನರೇಗಾ) ಯೋಜನೆಯ ಬದಲಿಗೆ ಹೊಸದಾಗಿ 'ವಿಕಸಿತ ಭಾರತ – ಗ್ಯಾರಂಟಿ ಫಾರ್ ರೋಜಗಾರ್ ಅಜೀವಿಕ ಮಿಷನ್' (ವಿಬಿ–ಜಿ ರಾಮ್–ಜಿ) ಕಾಯ್ದೆಯನ್ನು ಜುಲೈ 1 ರಿಂದ ಜಾರಿಗೆ ತಂದಿದ್ದು, ಈ ಹೊಸ ಯೋಜನೆಯು ಗ್ರಾಮೀಣ ಜನರಿಗೆ ಹಿಂದಿನ ಯೋಜನೆಗಿಂತ ಹೆಚ್ಚು ದಿನಗಳ ಕೆಲಸ ಮತ್ತು ಹೆಚ್ಚಿನ ವೇತನವನ್ನು ಒದಗಿಸಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದ್ದಾರೆ.

ಹಳೆಯ ನರೇಗಾ ಯೋಜನೆಯಡಿ ವರ್ಷಕ್ಕೆ 100 ದಿನಗಳ ಉದ್ಯೋಗ ನೀಡಲಾಗುತ್ತಿತ್ತು. ಆದರೆ ಹೊಸ 'ವಿಬಿ–ಜಿ ರಾಮ್ ಜಿ' ಕಾಯ್ದೆಯಡಿ ಪ್ರತಿ ಗ್ರಾಮೀಣ ಕುಟುಂಬಕ್ಕೆ ವರ್ಷದಲ್ಲಿ 125 ದಿನಗಳ ಕಡ್ಡಾಯ ಉದ್ಯೋಗಾವಕಾಶ ಕಲ್ಪಿಸಲಾಗುವುದು.

ಇನ್ಮುಂದೆ ಗ್ರಾಮೀಣ ಭಾಗದ ಕೌಶಲ್ಯರಹಿತ ಕಾರ್ಮಿಕರಿಗೆ ಒಂದು ಮಾನವ ದಿನಕ್ಕೆ ರೂ. 382 ಕೂಲಿ ಮೊತ್ತವನ್ನು ನಿಗದಿಪಡಿಸಲಾಗಿದೆ. ಕಾರ್ಮಿಕರ ಸಮರ್ಪಕ ಲಭ್ಯತೆಯನ್ನು ಸುಗಮಗೊಳಿಸುವ ನಿಟ್ಟಿನಲ್ಲಿ ಯೋಜನೆಯಡಿ 60 ದಿನಗಳ ಕಾಲ ವಿರಾಮ ನೀಡುವ ವಿಶೇಷ ವ್ಯವಸ್ಥೆಯನ್ನು ಮಾಡಲಾಗಿದೆ.

ಗ್ರಾಮೀಣ ಭಾಗದಲ್ಲಿ ದೀರ್ಘಾವಧಿಯ ಮೂಲಸೌಕರ್ಯಕ್ಕೆ ಸಂಬಂಧಿಸಿದ ಉದ್ಯೋಗ ಸೃಷ್ಟಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಉತ್ಪಾದಕತೆ ಹೆಚ್ಚಿಸುವ ಸ್ವತ್ತುಗಳ ನಿರ್ಮಾಣ, ಹಲವಾರು ಸರ್ಕಾರಿ ಯೋಜನೆಗಳನ್ನು ಒಗ್ಗೂಡಿಸುವುದು ಹಾಗೂ ಉತ್ತಮ ಯೋಜನೆ ಮತ್ತು ನಿರ್ವಹಣೆಗೆ ಈ ಹೊಸ ಕಾಯ್ದೆಯಲ್ಲಿ ಹೆಚ್ಚು ಒತ್ತು ನೀಡಲಾಗಿದೆ.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅನುಷ್ಠಾನ ಇಲಾಖೆ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಗ್ರಾಮೀಣ ಜನರಿಗೆ ವೈಯಕ್ತಿಕ ಕಾಮಗಾರಿಗಳಾದ ದನದ ಕೊಟ್ಟಿಗೆ, ಕುರಿ/ಮೇಕೆ ಶೆಡ್, ಸೋಕ್ ಪಿಟ್, ಬದು ನಿರ್ಮಾಣ, ಕೃಷಿ ಹೊಂಡ ಹಾಗೂ ಪೌಷ್ಠಿಕ ತೋಟ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಜನರಿಗೆ ಉದ್ಯೋಗ ಕಲ್ಪಿಸುವುದರ ಜೊತೆಗೆ ದೀರ್ಘಾವಧಿಯ ಆಸ್ತಿ ಸೃಜನೆಯಂತಹ ಮೂಲಸೌಕರ್ಯ ಅಭಿವೃದ್ಧಿ ಕೆಲಸಗಳನ್ನು ಪರಿಣಾಮಕಾರಿಯಾಗಿ ಕೈಗೆತ್ತಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದ್ದಾರೆ.

ಜಿಲ್ಲಾದ್ಯಂತ ಈ ವಿಬಿ–ಜಿ ರಾಮ್–ಜಿ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಸೂಕ್ತ ರೂಪುರೇಷೆಗಳನ್ನು ಸಿದ್ಧಪಡಿಸಿಕೊಳ್ಳಲಾಗುತ್ತಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಧ್ಯರಾತ್ರಿಯಲ್ಲೂ ಕರುಣೆಯ ಕಣ್ಣು: ಬೆಂಗಳೂರಿನ ವೃದ್ಧೆಗೆ ಆಸರೆಯಾದ ಸಿಂಧನೂರಿನ ಪುನೀತ್ ಪುಣ್ಯಾ ವೃದ್ಧಾಶ್ರಮ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಸಿಂಧನೂರು: ಜು 07.ಮಧ್ಯರಾತ್ರಿಯಲ್ಲೂ ಅತಂತ್ರ ಸ್ಥಿತಿಯಲ್ಲಿದ್ದ ನೊಂದ ಜೀವವೊಂದಕ್ಕೆ ಆಸರೆಯಾಗುವ ಮೂಲಕ ಸಿಂಧನೂರಿನ 'ಪುನೀತ್ ಪುಣ್ಯಾ ವೃದ್ಧಾಶ್ರಮ' ಮತ್ತೊಮ್ಮೆ ತನ್ನ ಮಾನವೀಯತೆಯನ್ನು ಮೆರೆದಿದೆ. ಬೆಂಗಳೂರಿನಿಂದ ಮಧ್ಯರಾತ್ರಿ ಆಶ್ರಯ ಅರಸಿ ಬಂದಿದ್ದ ವೃದ್ಧ ತಾಯಿಯೊಬ್ಬರಿಗೆ ಸ್ಥಳಾವಕಾಶ ಕಲ್ಪಿಸುವ ಮೂಲಕ ಆಶ್ರಮದ ಆಡಳಿತ ಮಂಡಳಿ ಸಮಾಜಕ್ಕೆ ಮಾದರಿಯಾಗಿದೆ.

ಬೆಂಗಳೂರಿನಿಂದ ಸುದೀರ್ಘ ಪ್ರಯಾಣ ಬೆಳೆಸಿ ಬಂದಿದ್ದ ವೃದ್ಧೆಯೊಬ್ಬರು, ತಮ್ಮ ಮೊಮ್ಮಗಳೊಂದಿಗೆ ಸೋಮವಾರ ಮಧ್ಯರಾತ್ರಿ 1:20ರ ಸುಮಾರಿಗೆ ಸಿಂಧನೂರಿನ ಪುನೀತ್ ಪುಣ್ಯಾ ವೃದ್ಧಾಶ್ರಮದ ಬಾಗಿಲು ಬಡಿದರು. ದಣಿದಿದ್ದ ಆ ತಾಯಿ, "ಬೆಂಗಳೂರಿನಲ್ಲಿ ನಮಗೆ ದಿಕ್ಕಿಲ್ಲ, ನಿಮ್ಮ ಆಶ್ರಮದ ಸೇವಾ ಕಾರ್ಯಗಳ ಬಗ್ಗೆ ಕೇಳಿ ಇಲ್ಲಿಗೆ ಬಂದಿದ್ದೇವೆ. ದಯವಿಟ್ಟು ನಮಗೆ ಆಶ್ರಯ ನೀಡಿ" ಎಂದು ಕಣ್ಣೀರು ಹಾಕಿದರು. ಸ್ಥಿತಿಯನ್ನು ಅರಿತ ಆಶ್ರಮದ ಸಂಸ್ಥಾಪಕ ಪಂಪಯ್ಯ ಸ್ವಾಮಿ ಹಿರೇಮಠ ಅವರು, ಯಾವುದೇ ತಡ ಮಾಡದೆ ತಕ್ಷಣವೇ ಸ್ಪಂದಿಸಿದರು. ವೃದ್ಧೆಯ ಸಂಕಷ್ಟ ಮತ್ತು ಅವರ ವಯೋಸಹಜ ಸ್ಥಿತಿಯನ್ನು ಗಮನಿಸಿ, ಮಧ್ಯರಾತ್ರಿಯಾದರೂ ಕರುಣೆ ತೋರಿದ ಅವರು, ಆಶ್ರಮದಲ್ಲಿ ಅವರಿಗೆ ತಕ್ಷಣವೇ ಆಶ್ರಯ ಕಲ್ಪಿಸಿದರು. ಪುನೀತ್ ಪುಣ್ಯಾ ವೃದ್ಧಾಶ್ರಮವು ಕೇವಲ ವೃದ್ಧರಿಗೆ ವಸತಿ ನೀಡುವ ತಾಣವಾಗಿರದೆ, ಅನಾಥರ ಪಾಲಿನ ಆಶಾಕಿರಣವಾಗಿ ಕಾರ್ಯನಿರ್ವಹಿಸುತ್ತಿದೆ. ಆಶ್ರಮಕ್ಕೆ ಬರುವ ಪ್ರತಿಯೊಬ್ಬರಿಗೂ ಇಲ್ಲಿ ಕುಟುಂಬದ ವಾತಾವರಣ ಕಲ್ಪಿಸಲಾಗುತ್ತಿದ್ದು, ಸಂಸ್ಥಾಪಕರ ಈ ಹೃದಯಸ್ಪರ್ಶಿ ಕಾರ್ಯಕ್ಕೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಪ್ರಶಂಸೆ ವ್ಯಕ್ತವಾಗಿದೆ.

## ಡೆಂಗ್ಯು ನಿಯಂತ್ರಣಕ್ಕೆ 50 ಸ್ವಯಂ ಸೇವಕರ ನೇಮಕ: ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಪ್ರಸ್ತಕ ಸಾಲಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ 'ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮ'ದಡಿ ಬಳ್ಳಾರಿ ನಗರ ಪ್ರದೇಶದಲ್ಲಿ ಡೆಂಗ್ಯು ರೋಗ ನಿಯಂತ್ರಣ ಚಟುವಟಿಕೆಯಾದ ಲಾರ್ವಾ ಉತ್ಪತ್ತಿ ತಾಣಗಳ ನಿರ್ಮೂಲನಾ ಕಾರ್ಯ ಹಾಗೂ ಸಮೀಕ್ಷೆಯನ್ನು ನಡೆಸಲು 50 ಸ್ವಯಂ ಸೇವಕರ ಸೇವೆಯ ಅವಶ್ಯಕತೆ ಇದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

*ಅರ್ಹತೆ:*


ಅಭ್ಯರ್ಥಿಗಳು ಕನಿಷ್ಠ ಎಸ್‌ಎಸ್‌ಎಲ್‌ಸಿ ವಿದ್ಯಾಹರ್ತೆಯನ್ನು ಹೊಂದಿರಬೇಕು. ಲಾರ್ವಾ ಸಮೀಕ್ಷೆ ಚಟುವಟಿಕೆಯ ನಮೂನೆಯನ್ನು ಭರ್ತಿ ಮಾಡಲು ಶಕ್ತರಾಗಿರಬೇಕು. ಕ್ರಿಯಾ ಯೋಜನೆಯ ಅನುಸಾರ ವೇಳಾಪಟ್ಟಿಯಂತೆ ತಪ್ಪದೇ ಎಲ್ಲಾ ಚಟುವಟಿಕೆಗಳಿಗೆ ಹಾಜರಾಗಬೇಕು. ಒಂದು ದಿನಕ್ಕೆ ಕನಿಷ್ಠ 60 ರಿಂದ 65 ಆವರಣಗಳನ್ನು (ಮನೆ, ಕಚೇರಿ, ಆಸ್ಪತ್ರೆ, ಶಾಲೆ, ಕಾಲೇಜು ಇತ್ಯಾದಿ) ಸಂದರ್ಶಿಸಿ, ಈಡೀಸ್ ಲಾರ್ವಾ ಉತ್ಪತ್ತಿ ತಾಣ ನಾಶ ಚಟುವಟಿಕೆಯನ್ನು ನಡೆಸಬೇಕು.

ದೈನಂದಿನ ಹಾಜರಿ ಮತ್ತು ಸಮೀಕ್ಷೆಯ ಜಿಯೋಟ್ಯಾಗ್ ಫೋಟೋಗಳೊಂದಿಗೆ ನಿಗದಿತ ವರದಿಯನ್ನು ಕಚೇರಿಗೆ ಸಲ್ಲಿಸುವುದು ಕಡ್ಡಾಯವಾಗಿದೆ. ಪ್ರತಿ ಸ್ವಯಂ ಸೇವಕರಿಗೆ ಸೇವೆಯನ್ನು ಗರಿಷ್ಠ 100 ದಿನಗಳಿಗೆ ನಿಗದಿಪಡಿಸಲಾಗಿರುತ್ತದೆ. ಸ್ವಯಂ ಸೇವಕರಿಗೆ ನಿಗದಿಪಡಿಸಿರುವ ಗೌರವಧನವನ್ನು ಪ್ರತಿ ದಿನ ಒಂದಕ್ಕೆ ರೂ. 400 ಗಳಂತೆ ನಿಯಮಾನುಸಾರ ಪಾವತಿಸಲಾಗುವುದು.

ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂ. 08392294610 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಬಿಡಿಸಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಜಿಟಲ್ ಆರ್ಥಿಕತೆಯಲ್ಲಿ ಡೇಟಾ ಅತ್ಯಮೂಲ್ಯ ಆಸ್ತಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ಇಂದಿನ ಡಿಜಿಟಲ್ ಆರ್ಥಿಕತೆಯಲ್ಲಿ ಡೇಟಾ ಅತ್ಯಂತ ಮೌಲ್ಯಯುತ ಆಸ್ತಿಯಾಗಿ ಪರಿಣಮಿಸಿದ್ದು, ಕಚ್ಚಾ ಡೇಟಾವನ್ನು ಅರ್ಥಪೂರ್ಣ ಮಾಹಿತಿಯನ್ನಾಗಿ ಪರಿವರ್ತಿಸುವ ಸಾಮರ್ಥ್ಯ ಹೊಂದಿರುವ ವೃತ್ತಿಪರರಿಗೆ ಡಿಜಿಟಲ್ ಜಗತ್ತಿನಲ್ಲಿ ಉಜ್ವಲ ಭವಿಷ್ಯವಿದೆ ಎಂದು ರೇವಾ ವಿಶ್ವವಿದ್ಯಾಲಯದ ಡಿಜಿಟಲ್ ಆರ್ಥಿಕತೆಯ ತಜ್ಞೆ ಪ್ರೊ. ಪಿ. ಪ್ರಿಯಾಂಕಾ ಅಭಿಪ್ರಾಯಪಟ್ಟರು. ನಗರದ ಶರಣಬಸವ ವಿಶ್ವವಿದ್ಯಾಲಯದ ಕಂಪ್ಯೂಟರ್ ಅಪ್ಲಿಕೇಶನ್ ನಿಕಾಯದ ಎಂ.ಸಿ.ಎ ವಿಭಾಗದಲ್ಲಿ ಮಂಗಳವಾರ ಆಯೋಜಿಸಿದ್ದ ಐದು ದಿನಗಳ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮ ಹಾಗೂ "ಪವರ್ ಬಿಐ ಫಾರ್ ಡಾಟಾ ವಿಜುವಲೈಜೇಷನ್ ಆಂಡ್ ಬುಸಿನೆಸ್ ಅನಾಲಿಟಿಕ್ಸ್" ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಅವರು, ವಿದ್ಯಾರ್ಥಿಗಳು ವಿಶ್ಲೇಷಣಾತ್ಮಕ ಚಿಂತನೆ ಬೆಳೆಸಿಕೊಳ್ಳುವುದರ ಜೊತೆಗೆ ಪವರ್ ಬಿಐನಂತಹ ಕೈಗಾರಿಕಾ ಗುಣಮಟ್ಟದ ತಂತ್ರಾಂಶಗಳ ಪ್ರಾಯೋಗಿಕ ಅನುಭವವನ್ನು ಪಡೆದುಕೊಳ್ಳಬೇಕು. ವೇಗವಾಗಿ ಬೆಳೆಯುತ್ತಿರುವ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಸ್ಪರ್ಧಾತ್ಮಕವಾಗಿರಲು ತಮ್ಮ ತಾಂತ್ರಿಕ ಕೌಶಲ್ಯಗಳನ್ನು ನಿರಂತರವಾಗಿ ನವೀಕರಿಸಿಕೊಳ್ಳುವುದು ಅಗತ್ಯ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. ಡೇಟಾ ದೃಶ್ಯೀಕರಣ ಹಾಗೂ ವ್ಯವಹಾರ ವಿಶ್ಲೇಷಣೆ ವಿಷಯಗಳಲ್ಲಿ ಪರಿಣತಿ ಹೊಂದುವುದರಿಂದ ವಿವಿಧ ಕೈಗಾರಿಕೆಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಉದ್ಯೋಗಾವಕಾಶಗಳು ದೊರೆಯಲಿವೆ. ಈ ಕಾರ್ಯಾಗಾರದ ತಾಂತ್ರಿಕ ಅಧಿವೇಶನಗಳನ್ನು ರೇವಾ ವಿಶ್ವವಿದ್ಯಾಲಯದ ಪ್ರೊ. ಪಿ. ಪ್ರಿಯಾಂಕಾ ಹಾಗೂ ಪ್ರೊ. ಎ. ಸಹನಾ ನಡೆಸಿಕೊಡುತ್ತಿದ್ದು, ಡೇಟಾ ಪರಿವರ್ತನೆ, ದೃಶ್ಯೀಕರಣ ತಂತ್ರಗಳು, ಸಂವಾದಾತ್ಮಕ ಡ್ಯಾಶ್‌ಬೋರ್ಡ್‌ಗಳು, ವರದಿ ಸಿದ್ಧಪಡಿಸುವಿಕೆ ಹಾಗೂ ವ್ಯವಹಾರ ವಿಶ್ಲೇಷಣೆಯ ಅನ್ವಯಿಕೆಗಳ ಕುರಿತು ಪವರ್ ಬಿಐನಲ್ಲಿ ಭಾಗವಹಿಸುವವರಿಗೆ ಪ್ರಾಯೋಗಿಕ ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದರು.

# ಸರಿಯಾದ ಮಾಹಿತಿ ತುಂಬಿ ಮತದಾನ ಹಕ್ಕು ದೃಢೀಕರಿಸಿ



**ಬಾಗಲಕೋಟೆ:** ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಪ್ರತಿಯೊಬ್ಬ ಅರ್ಹ ಮತದಾರರು ನಿಗದಿತ ನಮೂನೆಯಲ್ಲಿ ಸರಿಯಾದ ಮಾಹಿತಿ ತುಂಬಿ ತಮ್ಮ ಮತದಾನದ ಹಕ್ಕನ್ನು ಖಚಿತಪಡಿಸಿಕೊಳ್ಳಬೇಕು ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ತಾಲ್ಲೂಕಿನ ಶಿರೂರ ಪಟ್ಟಣದಲ್ಲಿ ಬಾಗಲಕೋಟೆ ಮತಕ್ಷೇತ್ರ ಬಿಜೆಪಿ ಘಟಕ ಹಮ್ಮಿಕೊಂಡಿದ್ದ ಎಸ್‌ಐಆರ್ ಜಾಗೃತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಮತದಾರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಮಹತ್ತರ ಪ್ರಕ್ರಿಯೆಯಾಗಿದೆ ಎಂದರು.

ಬಿ.ಎಲ್.ಓ ಗಳು ನೀಡುವ ನಮೂನೆಯನ್ನು ಸರಿಯಾದ ಮಾಹಿತಿಯೊಂದಿಗೆ ತುಂಬಿ ತಮ್ಮ ಹಕ್ಕನ್ನು ದೃಢೀಕರಿಸಿಕೊಳ್ಳಬೇಕು. ಪಕ್ಷದ ಮುಖಂಡರು, ಕಾರ್ಯಕರ್ತರು ಈ ಬಗ್ಗೆ ಮತದಾರರಿಗೆ ಮಾರ್ಗದರ್ಶನ ಮಾಡಿ ಸಹಕರಿಸಬೇಕು ಎಂದು ಚರಂತಿಮಠ ಹೇಳಿದರು. ಗುಳೇದಗುಡ್ಡ ಮಾಜಿ ಶಾಸಕ ರಾಜಶೇಖರ ಶೀಲವಂತ ಮಾತನಾಡಿ, ಪ್ರತಿಯೊಬ್ಬ ಅರ್ಹ ಮತದಾರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಪರಿಪೂರ್ಣ ಮಾಹಿತಿಯೊಂದಿಗೆ ಅರ್ಜಿ ಸಲ್ಲಿಸಬೇಕು ಎಂದರು. ಬಿಎಲ್‌ಓ ಮಲ್ಲು ಮುತ್ತಪ್ಪನವರ, ಶರತ್ ಪಾಟೀಲ, ಸುರೇಶ ದೇಸಾಯಿ, ರಾಮಣ್ಣ ಕೋಟಿಕಲ್, ಎಸ್.ಎಸ್.ಕಲಗುಡಿ, ಶೇಖಪ್ಪ ಮಾಚಾ, ಬಸಪ್ಪ ಮೆಣಸಗಿ, ರವಿ ಗಿರಿಜಾ, ಸುರೇಶ ಕೊಣ್ಣೂರ, ಕಲ್ಲಪ್ಪ ಭಗವತಿ, ಸಿಂಧೂರಪ್ಪ ಬಾರಡ್ಡಿ, ಸಿದ್ಧಲಿಂಗೇಶ ಹಳದೂರ, ತಿಪ್ಪಣ್ಣ ಪಟ್ಟಣಶೆಟ್ಟಿ, ರಾಜಶೇಖರ ಅಂಗಡಿ, ಮಲ್ಲು ಬಿಜಾಪೂರ ಮತ್ತಿತರರು ಇದ್ದರು.

# ಶರಣಪ್ಪ ಸಲಾದಪುರಗೆ ಡಾ. ಜಿ.ಮಾದೇಗೌಡ ರಾಜ್ಯಮಟ್ಟದ ಸಮಾಜ ಸೇವಾ ಪ್ರಶಸ್ತಿ



**ಬೆಂಗಳೂರು:** ಡಾ. ಜಿ.ಮಾದೇಗೌಡ ಪ್ರತಿಷ್ಠಾನದ ವತಿಯಿಂದ ನೀಡಲಾಗುವ 2026ನೇ ಸಾಲಿನ ಡಾ. ಜಿ.ಮಾದೇಗೌಡ ರಾಜ್ಯಮಟ್ಟದ ಸಮಾಜ ಸೇವಾ ಪ್ರಶಸ್ತಿಗೆ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷರಾದ ಶರಣಪ್ಪ ಸಲಾದಪುರ ಅವರನ್ನ ಆಯ್ಕೆ ಮಾಡಲಾಗಿದೆ. ಪ್ರಶಸ್ತಿ ಪ್ರಧಾನ ಸಮಾರಂಭವು, ಮಂಡ್ಯ ನಗರದ ಗಾಂಧಿ ಭವನದಲ್ಲಿ ಜುಲೈ 10, 2026ರಂದು ಮಧ್ಯಾಹ್ನ 3–30 ಗಂಟೆಗೆ ನಡೆಯಲಿದೆ.

**ಶ್ರೀ ಶರಣಪ್ಪ ಸಲಾದಪುರರವರ ಪರಿಚಯ:** ದಿನಾಂಕ: 21–01–1957ರಂದು ಯಾದಗಿರಿ ಜಿಲ್ಲೆಯ ಶಹಾಪುರ ತಾಲ್ಲೂಕಿನ ಸಲಾದಪುರ ಗ್ರಾಮದಲ್ಲಿ ಜನಿಸಿದರು. ತಂದೆ ಶ್ರೀ ಮಲ್ಲಪ್ಪ ಹಾಗೂ ತಾಯಿ ಶ್ರೀಮತಿ ಚಂದ್ರಮ್ಮ. ಕೃಷಿಕ ಕುಟುಂಬದ ಹಿನ್ನೆಲೆಯಿಂದ ಬಂದಿರುವ ಅವರು, ತಮ್ಮ ತಂದೆಯಿಂದ ಬಳುವಳಿಯಾಗಿ ಬಂದ ನಿಷ್ಠೆ, ಪ್ರಾಮಾಣಿಕತೆ, ಶಿಸ್ತು ಮತ್ತು ನೈತಿಕ ಮೌಲ್ಯಗಳನ್ನು ಜೀವನದುದ್ದಕ್ಕೂ ಅಳವಡಿಸಿಕೊಂಡು ಆದರ್ಶವ್ಯಕ್ತಿತ್ವವನ್ನು ರೂಪಿಸಿಕೊಂಡಿದ್ದಾರೆ.

ರೈತ ನಾಯಕರು ಹಾಗೂ ಸಮಾಜ ಸೇವಕರಾಗಿ ಹಲವು ದಶಕಗಳಿಂದ ಜನಪರ ಸೇವೆಯಲ್ಲಿ ತೊಡಗಿಸಿಕೊಂಡಿರುವ ಅವರು, ಮೌಲ್ಯಾಧಾರಿತ ವ್ಯಕ್ತಿತ್ವದಕಾರಣದಿಂದ ಸಗರನಾಡಿನಜನರ ಪ್ರೀತಿಗೆ ಪಾತ್ರರಾಗಿ ಸಗರ ನಾಡಿನಗಾಂಧಿ" ಎಂಬ ಹೆಸರಿನಿಂದ ಜನಮಾನಸದಲ್ಲಿ ಗುರುತಿಸಿಕೊಂಡಿದ್ದಾರೆ.

ಪದವಿ ವಿದ್ಯಾರ್ಥಿಯಾಗಿದ್ದಾಗಲೇ ಲೋಕನಾಯಕ ಪ್ರೊ. ಜಯಪ್ರಕಾಶ್ ನಾರಾಯಣ, ಜಾರ್ಜ್ ಫರ್ನಾಂಡಿಸ್ ಹಾಗೂ ಪ್ರೊ. ಮಧುದಂಡವತೆ ಅವರ ವಿಚಾರಧಾರೆಗಳಿಂದ ಪ್ರೇರಿತರಾಗಿ ಸಮಾಜವಾದಿ ಚಳವಳಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡರು. ನಂತರ ಮಹಾತ್ಮಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಸವಣ್ಣ ಅವರ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಮಾನವೀಯತೆಯ ಚಿಂತನೆಗಳನ್ನು ಜೀವನದ ಆದರ್ಶಗಳಾಗಿ ಅಳವಡಿಸಿಕೊಂಡು ಆರೋಗ್ಯಕರ ಹಾಗೂ ಸಮಾನತೆಯ ಸಮಾಜ ನಿರ್ಮಾಣಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ.

"ಈ ನಾಡಿನ ರೈತಾಪಿ ಸಮುದಾಯದ ಏಳಿಗೆಯೇ ಕರ್ನಾಟಕದ ಸಮೃದ್ಧಿಗೆ ಮೂಲ" ಎಂಬ ಧ್ಯೇಯವಾಕ್ಯವನ್ನು ಜೀವನದಲ್ಲಿ ಅಳವಡಿಸಿಕೊಂಡು ರೈತರ ಹಿತಾಸಕ್ತಿಗಾಗಿ ಅವಿರತವಾಗಿ ಹೋರಾಟ ನಡೆಸುತ್ತಿದ್ದಾರೆ. ಕಳೆದ ಮೂರು ದಶಕಗಳಲ್ಲಿ ನೂರಾರು ರೈತ ಹೋರಾಟಗಳನ್ನು ಸಂಘಟಿಸಿ, ರೈತರ ಸಮಸ್ಯೆಗಳಿಗೆ ಪರಿಹಾರ ದೊರಕಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಜಮೀನ್ದಾರರ ಪಾಳೇಗಾರಿಕೆಯ ಮನೋಭಾವವನ್ನು ದೃಢವಾಗಿ ವಿರೋಧಿಸಿ, ಹೈದರಾಬಾದ್–ಕರ್ನಾಟಕ ಭಾಗದ ರೈತಪರ ನಾಯಕರಾಗಿ ಗುರುತಿಸಿಕೊಂಡಿದ್ದಾರೆ.

ರೈತರ ಅಭಿವೃದ್ಧಿ, ಸಮಾಜಮುಖಿಕಾರ್ಯ, ನೈತಿಕರಾಜ–ಕಾರಣ ಮತ್ತುಜನಪರ ಸೇವೆಯ ಮೂಲಕ ಸಲ್ಲಿಸಿರುವ ಅಮೋಘ ಕೊಡುಗೆಯನ್ನು ಗೌರವಿಸಿ, ಡಾ. ಜಿ. ಮಾದೇಗೌಡ ಪ್ರತಿಷ್ಠಾನ ವತಿಯಿಂದ 2026ನೇ ಸಾಲಿನ ರಾಜ್ಯಮಟ್ಟದ ಸಮಾಜ ಸೇವಾ ಪ್ರಶಸ್ತಿ ಮೊತ್ತ ರೂ 25,000/– (ಇಪ್ಪತ್ತೈದು ಸಾವಿರ) ನಗದು ಬಹುಮಾನ ಹಾಗೂ ಪ್ರಶಸ್ತಿ ಫಲಕವನ್ನು ನೀಡಿ ಶ್ರೀ ಶರಣಪ್ಪ ಸಲಾದಪುರಆವರನ್ನು ಗೌರವಿಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

# ಜನ, ಜಾನುವಾರುಗಳಿಗೆ ಸಮಸ್ಯೆಯಾಗದಂತೆ ಪರಿಸ್ಥಿತಿ ನಿಭಾಯಿಸಲು ಡಾ.ಜಿ.ಪರಮೇಶ್ವರ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸೂಪರ್ ಎಲ್ ನಿನೋ ಪರಿಣಾಮದಿಂದ ಉಂಟಾಗಿರುವ ಪ್ರಕೃತಿ ವಿಕೋಪವನ್ನು ಸಮರ್ಥವಾಗಿ ನಿಭಾಯಿಸಬೇಕು. ಈ ನಿಟ್ಟಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜನರ ಜೀವನೋಪಾಯಕ್ಕೆ ಮತ್ತು ಜಾನುವಾರುಗಳಿಗೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ಪರಿಸ್ಥಿತಿಯನ್ನು ನಿಭಾಯಿಸಬೇಕು ಎಂದು ಉಪ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ್ ಅವರು ಹೇಳಿದರು.

ಇಂದು ಕಲಬುರಗಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಕಲಬುರಗಿ ಕಂದಾಯ ವಿಭಾಗದ ವಿವಿಧ ಇಲಾಖೆಗಳ ಹಾಗೂ ಪ್ರಕೃತಿ ವಿಕೋಪ ನಿರ್ವಹಣೆ ಕುರಿತ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳು ಮತ್ತು ಅಗತ್ಯ ನಿರ್ದೇಶನಗಳನ್ನು ನೀಡಿದರು.

ಬರಗಾಲ ಎದುರಾಗುವ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜನರು ಉದ್ಯೋಗಕ್ಕಾಗಿ ಮಹಾನಗರಗಳಿಗೆ ಗುಳೆ ಹೋಗುವ ಪ್ರಮಾಣ ಹೆಚ್ಚಿದೆ. ನರೇಗಾ ಯೋಜನೆ ಕೂಡ ಬದಲಾಗಿದೆ. ಲಭ್ಯ ಅನುದಾನ ಮತ್ತು ಯೋಜನೆಗಳನ್ನು ಬಳಸಿಕೊಂಡು ಜನರಿಗೆ, ತಮ್ಮ ಊರಿನಲ್ಲೇ ಉದ್ಯೋಗ ನೀಡಲು ಕ್ರಮವಹಿಸಬೇಕು. ಇದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ತಿಳಿಸಿದರು.

ಬರಗಾಲ ಹಿನ್ನೆಲೆಯಲ್ಲಿ ಜನರ ಮೂಲಭೂತ ಅವಶ್ಯಕತೆಗಳಾದ ಕುಡಿಯುವ ನೀರು, ಆಹಾರ, ಜೀವನೋಪಾಯಕ್ಕೆ ಅಗತ್ಯವಿರುವ ಉದ್ಯೋಗ, ಆರೋಗ್ಯ, ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ಕಳೆದ ನಾಲ್ಕೈದು ದಿನಗಳಿಂದ ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಉತ್ತಮ ಮಳೆಯಾಗುತ್ತಿದೆ. ಇದರಿಂದ ನದಿಗಳಿಗೆ ಒಂದಿಷ್ಟು ಪ್ರಮಾಣದಲ್ಲಿ ನೀರು ಹರಿದು ಬರುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ. ಆದರೆ, ಬಯಲು ಸೀಮೆಯ ಜಿಲ್ಲೆಗಳ ಪರಿಸ್ಥಿತಿ ಸುಧಾರಣೆಯಾಗಿಲ್ಲ. ಹಾಗಾಗಿ ಮಳೆಯ ಕೊರತೆಯಿಂದ ಉಂಟಾಗಿರುವ ಸನ್ನಿವೇಶಗಳನ್ನು ಸಮರ್ಥವಾಗಿ ಎದುರಿಸಬೇಕಿದೆ ಎಂದರು.



ಸೂಪರ್ ಎಲ್ ನಿನೋ ಪರಿಣಾಮದಿಂದ ಭಾರತ ಸೇರಿದಂತೆ ಜಗತ್ತಿನ ಅನೇಕ ಕಡೆಗಳಲ್ಲಿ ಬರ, ಅಕಾಲಿಕ ಮಳೆ, ಭೂ ಕುಸಿತದಂತಹ ಸಮಸ್ಯೆಗಳು ಉಂಟಾಗಬಹುದೆಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಅದೇ ರೀತಿಯ ವಾತಾವರಣ ಕಂಡು ಬರುತ್ತಿದೆ. ಈ ನಿಟ್ಟಿನಲ್ಲಿಯೂ ಮುನ್ನೆಚ್ಚರಿಕೆ ವಹಿಸಬೇಕಿದೆ ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿಯೂ ಮಳೆಯಾಗದಿದ್ದರೆ ಪರಿಸ್ಥಿತಿ ಇನ್ನಷ್ಟು ವಿಕೋಪಕ್ಕೆ ಹೋಗಬಹುದು. ಅದರ ಪರಿಣಾಮ ನಮ್ಮಲ್ಲೂ ಕಾಣಿಸಿಕೊಳ್ಳುತ್ತಿದೆ. ಇದನ್ನು ಎದುರಿಸಲು ನಾವು ಸಿದ್ಧತೆ ಮಾಡಿಕೊಳ್ಳಬೇಕಾಗಿದೆ ಎಂದು ಹೇಳಿದರು.

ಕಲಬುರಗಿ ಕಂದಾಯ ವಿಭಾಗದ 26 ತಾಲ್ಲೂಕುಗಳಲ್ಲಿ ಮಳೆ ಕೊರತೆಯಾಗಿದ್ದು, 11 ತಾಲ್ಲೂಕುಗಳಲ್ಲಿ ಅತೀ ಕಡಿಮೆ ಮಳೆಯಾಗಿದೆ. ಒಟ್ಟಾರೆ 37 ತಾಲ್ಲೂಕುಗಳು ಮಳೆ ಕೊರತೆಯಿಂದ ತೊಂದರೆಗೀಡಾಗಿವೆ. ಈವರೆಗೆ ಶೇ.38ರಷ್ಟು ಪ್ರದೇಶದಲ್ಲಿ ಮಾತ್ರ ಬೀಜ ಬಿತ್ತನೆಯಾಗಿದೆ. ಕಳೆದ ವರ್ಷ ಇದೇ ಅವಧಿಗೆ 19.41 ಲಕ್ಷ ಹೆಕ್ಟೇರ್‌ಗಳಷ್ಟು ಬಿತ್ತನೆಯಾಗಿತ್ತು. ಈ ವರ್ಷ 11.76 ಲಕ್ಷ ಹೆಕ್ಟೇರ್‌ಗಳಷ್ಟು ಮಾತ್ರ ಬೀಜ ಬಿತ್ತನೆಯಾಗಿದೆ. ಈ ಕುರಿತು ಗಂಭೀರ ಚಿಂತನೆ ಹಾಗೂ ಯೋಜನೆ ರೂಪಿಸಬೇಕು ಎಂದು ನಿರ್ದೇಶನ ನೀಡಿದರು.

ಅಚಾನಕ್ಕಾಗಿ ಮಳೆ ಬಿದ್ದಾಗ ಏಕಾಏಕಿ ಬಿತ್ತನೆ ಬೀಜ, ಗೊಬ್ಬರಗಳಿಗೆ ಬೇಡಿಕೆ ಹೆಚ್ಚಬಹುದು. ಆ ಸಂದರ್ಭಕ್ಕೆ ಅಗತ್ಯ ಬೀಜ – ಗೊಬ್ಬರ ಲಭ್ಯವಿರುವಂತೆ ನೋಡಿಕೊಳ್ಳಬೇಕು. ಇದನ್ನು ನಿರ್ವಹಿಸಲು ಬೇಕಾದ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಈ ಕುರಿತು ಜಿಲ್ಲಾಧಿಕಾರಿಗಳು ಮತ್ತು ಕೃಷಿ ಇಲಾಖೆಯ ಅಧಿಕಾರಿಗಳು ತುರ್ತು ಗಮನ ಹರಿಸಬೇಕು ಎಂದು ಸೂಚನೆ ನೀಡಿದರು.

ಈ ಕಂದಾಯ ವಿಭಾಗದಲ್ಲಿ 47 ವಾರಗಳಿಗೆ ಸಾಕಾಗುವಷ್ಟು ಮೇವಿನ ಲಭ್ಯತೆ ಇದೆ ಎಂದು ಮಾಹಿತಿ ನೀಡಿದ್ದೀರಿ. ಈ ಕುರಿತು ಹಿರಿಯ ಅಧಿಕಾರಿಗಳು ಸ್ವತಃ ಪರಿಶೀಲಿಸಿ ಖಚಿತಪಡಿಸಿಕೊಳ್ಳಿ. ಭಾಲ್ಕಿ, ಹುಮ್ನಾಬಾದ್, ಚಿಟಗುಪ್ಪ, ಹುಲಸೂರು, ಯಾದಗಿರಿ, ಗುರುಮಿಟಕಲ್ ತಾಲ್ಲೂಕುಗಳಲ್ಲಿ 20 ರಿಂದ 24 ವಾರಗಳಿಗೆ ಆಗುವಷ್ಟು ಮಾತ್ರ ಮೇವಿದೆ. ಸಾಧ್ಯವಾದ ಕಡೆಗಳಲ್ಲಿ ತ್ವರಿತಗತಿಯಲ್ಲಿ ಮೇವು ಬ್ಯಾಂಕ್, ಗೋಶಾಲೆಗಳನ್ನು ತೆರೆಯಲು ಕ್ರಮ ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಳೆ ಮಾಪನ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಣೆಯಲ್ಲಿರುವಂತೆ ನೋಡಿಕೊಳ್ಳಬೇಕು. ಮಳೆ ಕೊರತೆ ಇರುವುದರಿಂದ ರೈತರಿಗೆ ಕಡಿಮೆ ಮಳೆ ನೀರಿನಲ್ಲಿ ಮತ್ತು ಅತ್ಯಂತ ಕಡಿಮೆ ಖರ್ಚಿನಲ್ಲಿ ಬೆಳೆಯಬಹುದಾದ ಬೆಳೆಗಳ ಬಗ್ಗೆ ಪ್ರೋತ್ಸಾಹಿಸಬೇಕು. ಈ ಬಗ್ಗೆ ಕೃಷಿ ಇಲಾಖೆಯು ರೈತಾಪಿವರ್ಗಕ್ಕೆ ಅಗತ್ಯ ತಿಳುವಳಿಕೆ ಮೂಡಿಸಬೇಕು ಎಂದರು.

ರಾಜ್ಯದ ಪ್ರತಿ ತಾಲ್ಲೂಕಿಗೂ ಒಬ್ಬೊಬ್ಬರಂತೆ ಹಿರಿಯ ಕೆಎಎಸ್ ಅಧಿಕಾರಿಗಳನ್ನು ತಾಲ್ಲೂಕು ಉಸ್ತುವಾರಿ ಅಧಿಕಾರಿಗಳೆಂದು ನೇಮಕ ಮಾಡಲಾಗಿದೆ. ಬರ ನಿರ್ವಹಣೆಗೆ ಅವರ ಸೇವೆಯನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಈ ಬಗ್ಗೆ ಮುಖ್ಯ ಕಾರ್ಯದರ್ಶಿಯವರು ಗಮನ ಹರಿಸಬೇಕು ಎಂದು ತಿಳಿಸಿದರು.

# ಭರ್ಜರಿ ಕಾರ್ಯಾಚರಣೆ: 20ಲಕ್ಷ ರೂ. ಮೌಲ್ಯದ ಗಾಂಜಾ ವಶ, ಇಬ್ಬರ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಗಾಂಜಾ ಸಾಗಾಟ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಬಳಗಾನೂರು ಪೊಲೀಸರು ಬಂಧಿಸಿ, ಸುಮಾರು 20 ಲಕ್ಷ ರೂಪಾಯಿ ಮೌಲ್ಯದ 20.74 ಕೆ.ಜಿ ಗಾಂಜಾವನ್ನು ವಶಪಡಿಸಿಕೊಂಡಿರುವ ಘಟನೆ ನಡೆದಿದೆ. ಈ ಕುರಿತು ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷಿ ಗಿರಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ್ದಾರೆ.

ನಗರದ ಶಹರಾ ಪೊಲೀಸ್ ಠಾಣೆಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದವಾರು ಇತ್ತೀಚಿನ ದಿನಗಳಲ್ಲಿ ಗಾಂಜಾ ಸೇವನೆ ಮತ್ತು ಮಾರಾಟ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ, ಇದನ್ನು ತಡೆಗಟ್ಟಲು ಜಿಲ್ಲೆಯಾದ್ಯಂತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಅದರಂತೆ ಬಳಗಾನೂರು ಪೊಲೀಸರು ಕಾರ್ಯಾಚರಣೆಯನ್ನು ತೀವ್ರಗೊಳಿಸಿ ಗಾಂಜಾ ಪೆಡ್ಲರ್‌ಗಳನ್ನು ಸೆರೆಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ತಿಳಿಸಿದರು.



ಜುಲೈ 6, 2026ರಂದು ಖಚಿತ ಮಾಹಿತಿಯ ಮೇರೆಗೆ ಬಳಗಾನೂರು ಪೊಲೀಸರು ನಡೆಸಿದ ದಾಳಿಯಲ್ಲಿ ಗಾಂಜಾ ಸಾಗಾಟ ಮಾಡುತ್ತಿದ್ದ ಇಬ್ಬರನ್ನು ಬಂಧಿಸಲಾಗಿದೆ. ಆರೋಪಿಗಳಿಂದ ಒಟ್ಟು 20.074 ಕೆ.ಜಿ ತೂಕದ ಒಣ ಗಾಂಜಾ ಮತ್ತು ಸಾಗಾಟಕ್ಕೆ ಬಳಸಿದ ಹೋಂಡಾ 'ಥೀಮ್ ಯುಗ್' ಮೋಟಾರ್ ಸೈಕಲ್ (ನೋಂದಣಿ ಸಂಖ್ಯೆ: KA-36/EC-1445) ಅನ್ನು ಜಪ್ತಿ ಮಾಡಲಾಗಿದೆ. ವಶಪಡಿಸಿಕೊಳ್ಳಲಾದ ಗಾಂಜಾದ ಮೌಲ್ಯ ಅಂದಾಜು 20,07,400 ರೂಪಾಯಿ ಎಂದು ಅಂದಾಜಿಸಲಾಗಿದೆ.

ದೀನಬಂಧು ಮಂಡಲ್ (53), ತಂದೆ ಧೀರೇಂದ್ರ ಮಂಡಲ್, ಆರ್.ಹೆಚ್. 3 ನಿವಾಸಿ. ಮತ್ತು ಶಂಭು ಸರ್ದಾರ್ (31), ತಂದೆ ಕೃಷ್ಣ ಸರ್ದಾರ್, ಬಸವರಾಜೇಶ್ವರಿ ಕ್ಯಾಂಪ್ ನಿವಾಸಿ ಎಂಬ ಆರೋಪಿಗಳನ್ನು ವಶಕ್ಕೆ ಪಡೆಯಲಾಗಿದ್ದು, ಈ ಸಂಬಂಧ ಬಳಗಾನೂರು ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ: 111/2026, ಕಲಂ 20(b)(ii)(C) NDPSAct1985ರ ಅಡಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಕ್ಷಿ ಗಿರಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹರೀಶ್ ಜಿ. ಹಾಗೂ ಸಿಂಧನೂರು ಡಿ.ವೈ. ಎಸ್.ಪಿ. ಚಂದ್ರಶೇಖರ ಜಿ. ಮತ್ತು ಸಿಂಧನೂರು ಗ್ರಾಮೀಣ ವೃತ್ತದ ಸಿ.ಪಿ.ಐ. ವಿನಾಯಕ ಅವರ ಮಾರ್ಗದರ್ಶನದಲ್ಲಿ ಈ ಕಾರ್ಯಾಚರಣೆ ನಡೆದಿದೆ. ಬಳಗಾನೂರು ಪಿ.ಎಸ್.ಐ. ಎರಿಯಪ್ಪ ಅವರ ನೇತೃತ್ವದಲ್ಲಿ, ಸಿಂಧನೂರು ಗ್ರಾಮೀಣ ಠಾಣೆ–ಯ ಪಿ.ಎಸ್.ಐ. ಮೌನೇಶ ಯು. ರಾಠೋಡ್, ತುರುವಿಹಾಳ ಪಿ.ಎಸ್.ಐ. ಸುಜಾತಾ ಹಾಗೂ ಸಿಬ್ಬಂದಿಗಳಾದ ಸಿದ್ದಪ್ಪ (ಎ.ಎಸ್.ಐ), ರವಿ (ಹೆಚ್.ಸಿ), ದೇವಪ್ಪ (ಹೆಚ್.ಸಿ), ವೆಂಕಟೇಶ (ಹೆಚ್.ಸಿ), ರೇವಣ ಸಿದ್ದಪ್ಪ (ಹೆಚ್.ಸಿ), ಸಂಗಯ್ಯ (ಹೆಚ್.ಸಿ), ರಮೇಶ (ಪಿಸಿ), ನಾಗರಾಜ (ಪಿಸಿ), ಗೋಪಾಲ (ಪಿಸಿ), ರಾಮಪ್ಪ (ಪಿಸಿ), ಪ್ರಕಾಶ (ಪಿಸಿ) ಮತ್ತು ಮಲ್ಲನಗೌಡ (ಎ.ಪಿ.ಸಿ – ಸಿ.ಡಿ.ಆರ್ ವಿಭಾಗ) ಅವರು ಮಿಂಚಿನ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಇಂದು ಎನಗೆ ಗೋವಿಂದ ಬಯೋಪಿಕ್ ಚಿತ್ರ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬನ್ನಂಜೆ ಗೋವಿಂದಾಚಾರ್ಯ ಜೀವನಾಧಾರಿತ "ಇಂದು ಎನಗೆ ಗೋವಿಂದ" ಬಯೋಪಿಕ್ ಚಿತ್ರ ಆಗಷ್ಟ್ ತಿಂಗಳಲ್ಲಿ ಬಿಡುಗಡೆಯಾಗಲಿದೆ ಎಂದು ವೀಣಾ ಬನ್ನಂಜೆ ತಿಳಿಸಿದರು.

ನಗರದ ಚರಂತಿಮಠ ಶಿವಾನುಭವ ಮಂಟಪದಲ್ಲಿ ಬನ್ನಂಜೆ ಗೋವಿಂದಾಚಾರ್ಯ ಪ್ರತಿಷ್ಠಾನ, ಗೆಳೆಯರ ಬಳಗ ಹಾಗೂ ಚರಂತಿಮಠದ ಶಿವಾನುಭವ ಸಮಿತಿ ಆಶ್ರಯದಲ್ಲಿ ನಡೆದ ಬನ್ನಂಜೆ 90ರ ವಿಶ್ವನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಕ್ತಿ, ಶ್ರದ್ಧೆ ಮತ್ತು ಜ್ಞಾನದ ಹಸಿವು ಸದಾ ಜೀವಂತವಾಗಿರುವ ಉತ್ತರ ಕರ್ನಾಟಕದೊಂದಿಗೆ ಬನ್ನಂಜೆ ಗೋವಿಂದಾಚಾರ್ಯರಿಗೆ ಅವಿನಾಭಾವ ನಂಟಿದೆ ಎಂದರು. ಬನ್ನಂಜೆಯವರ ಜ್ಞಾನ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಸೇತುವೆಯಾಗಿ



ಈ ವಿಶ್ವನಮನ ಕಾರ್ಯಕ್ರಮ ರೂಪುಗೊಂಡಿದ್ದು ಇಲ್ಲಿ 30 ನೆಯ ಕಾರ್ಯಕ್ರಮ ನಡೆಯುತ್ತಿದೆ ಎಂದು ಹೇಳಿದ ವೀಣಾ ಬನ್ನಂಜೆ, ಸಮಾರೋಪ ಸಮಾರಂಭ ಆಗಷ್ಟ್‌ನಲ್ಲಿ ನಡೆಯಲಿದ್ದು, ಬನ್ನಂಜೆ ಕುಟುಂಬವಾಗಿ ಪಾಲ್ಗೊಳ್ಳಿ ಎಂದು ಮನವಿ ಮಾಡಿದರು.

ಬೆಂಗಳೂರಿನ ವಿದ್ವಾಂಸ ವಿಜಯಸಿಂಹ ಆಚಾರ್ಯ ಮಾತನಾಡಿ, ಎಐ ಮತ್ತು ಗೂಗಲ್ ಮೂಲಕ ಮಾಹಿತಿ ಪಡೆಯಬಹುದಾದರೂ, ಅನುಭವದೊಂದಿಗೆ ಬೆರೆತ ಜ್ಞಾನವೇ ಪರಿಪೂರ್ಣವಾಗುತ್ತದೆ. ವಿನಯ ಮತ್ತು ಪ್ರಜ್ಞೆ ಉತ್ತಮ ಜೀವನದ ದಾರಿದೀಪಗಳಾಗಿವೆ ಎಂದರು. ವಿದ್ವಾಂಸ ರಮೇಶ ಬಾಸುದೇವ ರಾವ್ ಮಾತನಾಡಿ, ಪ್ರಾಚೀನ ಗ್ರಂಥಗಳು ಇಂದಿಗೂ ಪ್ರಸ್ತುತವಾಗಿದ್ದು, ಜ್ಞಾನಶಕ್ತಿ, ಕ್ರಿಯಾಶಕ್ತಿ ಮತ್ತು ಇಚ್ಛಾಶಕ್ತಿ ಸಮನ್ವಯವೇ ಯಶಸ್ಸಿನ ಮೂಲ ಎಂದು ಹೇಳಿದರು. ಲೇಖಕ ರೋಹಿತ್ ಚಕ್ರತೀರ್ಥ ಮಾತನಾಡಿ, ಬಸವಣ್ಣ ಹಾಗೂ ಬನ್ನಂಜೆ ಗೋವಿಂದಾಚಾರ್ಯರಿಬ್ಬರೂ ಸಮಾಜಕ್ಕೆ ನಿರ್ಭೀತಿಯಿಂದ ಸತ್ಯವನ್ನು ಸಾರಿದ ಮಹನೀಯರು ಎಂದರು.

ಕಾರ್ಯಕ್ರಮವನ್ನು ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ ಉದ್ಘಾಟಿಸಿದರು. ಸಾನ್ನಿಧ್ಯ ವಹಿಸಿದ್ದ ಬಿಂದುಮಾಧವಾಚಾರ ನಾಗಸಂಪಿಗೆ ಮಾತನಾಡಿ, ಬನ್ನಂಜೆ ಗೋವಿಂದಾಚಾರ್ಯರ ಜ್ಞಾನ ಸಂಪತ್ತನ್ನು ಅನೇಕ ವಿದ್ವಾಂಸರು ಗೌರವದಿಂದ ಅಧ್ಯಯನ ಮಾಡಿದ್ದಾರೆ. ಇಂತಹ ಕಾರ್ಯಕ್ರಮಗಳ ಮೂಲಕ ಅವರ ಸ್ಮರಣೆ ಚಿರಂತನವಾಗಲಿ ಎಂದು ಆಶಿಸಿದರು.

ವಿಶ್ರಾಂತ ಕುಲಪತಿ ಮೀನಾ ಚಂದಾವರಕರ, ಡಾ.ಗಿರೀಶ ಮಾಸೂರಕರ, ಎಸ್.ಆರ್. ಮನಹಳ್ಳಿ, ಪಂಡಿತ ಅರಬ್ಬಿ ಹಾಗೂ ರಾಘವೇಂದ್ರರಾವ್ ಉಪಸ್ಥಿತರಿದ್ದರು. ಕವಿತಾ ಉಡುಪ ಹಾಗೂ ಸುಮಾ ಶಾಸ್ತ್ರೀ ಅವರಿಂದ ಬನ್ನಂಜೆ ಹಾಡುಗಳು ಭಾವಪೂರ್ಣವಾಗಿ ಮೂಡಿ ನೆರೆದ ಜನರ ಮನತಣಿಸಿದವು.

# ಅರ್ಹ ಮತದಾರರ ವಿವರ ನಿಖರವಾಗಿ ದಾಖಲಿಸಿ: ಬಾಲೆ



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಮಂಗಳವಾರ ತಾಲ್ಲೂಕಿನ ಗದ್ದನಕೇರಿ ಗ್ರಾಮ ಹಾಗೂ ವಿದ್ಯಾಗಿರಿಗೆ ಭೇಟಿ ನೀಡಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯದ ಪ್ರಗತಿ ಪರಿಶೀಲಿಸಿದರು.

ಗದ್ದನಕೇರಿ ಗ್ರಾಮದ ವಿವಿಧ ಮನೆಗಳಿಗೆ ಭೇಟಿ ನೀಡಿ ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಮೇಲ್ವಿಚಾರಕರನ್ನೊಳಗೊಂಡ ತಂಡ ಕೈಗೊಂಡಿರುವ ಮನೆ ಮನೆ ಸಮೀಕ್ಷೆ, ಎನ್ಯೂಮಿನೇಷನ್ ಫಾರಂ ವಿತರಣೆ ಹಾಗೂ ಸಂಗ್ರಹಣೆ ಕಾರ್ಯವನ್ನು ಅವಲೋಕಿಸಿದರು.

ಕೆಲ ಮನೆಗಳಿಗೆ ಭೇಟಿ ನೀಡಿ ಸ್ವತಃ ನಮೂನೆಗಳನ್ನು ಸಹ ವಿತರಣೆ ಮಾಡಿದ ಸಿಇಓ, ಮತದಾರರ ವಿವರಗಳನ್ನು ಅತ್ಯಂತ ನಿಖರವಾಗಿ ದಾಖಲಿಸುವಂತೆ ಹಾಗೂ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸಿಬ್ಬಂದಿಗೆ ಸೂಚಿಸಿದರು.

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಜಾಪ್ರಭುತ್ವದ ಮಹತ್ವದ ಪ್ರಕ್ರಿಯೆಯಾಗಿದ್ದು, ಪ್ರತಿಯೊಂದು ಮನೆಗೂ ಭೇಟಿ ನೀಡಿ ಅರ್ಹ ಮತದಾರರ ಮಾಹಿತಿಯನ್ನು ಸಮರ್ಪಕವಾಗಿ ಸಂಗ್ರಹಿಸಬೇಕು. ಸಾರ್ವಜನಿಕರಿಗೆ ಅಗತ್ಯ ಮಾಹಿತಿಯನ್ನು ನೀಡಿ ಅವರ ಸಹಕಾರದೊಂದಿಗೆ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದರು.

ಪರಿಶೀಲನೆ ವೇಳೆ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಸ್ಥಳಾಂತರಕ್ಕೆ ಸಂಬಂಧಿಸಿದ ಅರ್ಜಿಗಳ ಸ್ವೀಕಾರ ಮತ್ತು ದಾಖಲೆಗಳ ಪರಿಶೀಲನೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಈ ಕಾರ್ಯದಲ್ಲಿ ಯಾವುದೇ ಲೋಪ ಉಂಟಾಗದಂತೆ ನೋಡಿಕೊಳ್ಳಲು ತಿಳಿಸಿದರು.

ಭೇಟಿ ಸಂದರ್ಭದಲ್ಲಿ ತಹಶೀಲ್ದಾರ ವಾಸುದೇವ ಸ್ವಾಮಿ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಸೇರಿದಂತೆ ಬೂತ್ ಮಟ್ಟದ ಅಧಿಕಾರಿಗಳು ಹಾಗೂ ಮೇಲ್ವಿಚಾರಕರು ಇದ್ದರು.

# ಹೆಸರು ಬೆಳೆಗೆ ಹಳದಿ ರೋಗ ನಿಯಂತ್ರಣ ಕ್ರಮಕ್ಕೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಬೆಳೆಯಲಾಗಿರುವ ಹೆಸರು ಬೆಳೆಯಲ್ಲಿ ಹಳದಿ ನಂಜು ರೋಗ ಕಂಡುಬರುವ ಸಾಧ್ಯತೆ ಇರುವುದರಿಂದ ರೈತರು ತಮ್ಮ ಬೆಳೆಗಳನ್ನು ನಿಯಮಿತವಾಗಿ ಪರಿಶೀಲಿಸಿ, ಆರಂಭಿಕ ಹಂತದಲ್ಲಿಯೇ ಸೂಕ್ತ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಮನವಿ ಮಾಡಿದ್ದಾರೆ.

ಈ ರೋಗ ಬಿಳಿ ನೊಣದ ಮೂಲಕ ಹರಡುವ ವೈರಸ್ ರೋಗವಾಗಿದ್ದು, ರೋಗಬಾಧಿತ ಸಸ್ಯಗಳಿಂದ ಆರೋಗ್ಯಕರ ಸಸ್ಯಗಳಿಗೆ ವೇಗವಾಗಿ ಹರಡುತ್ತದೆ. ಬೆಳೆಯ ಆರಂಭಿಕ ಹಂತದಲ್ಲಿಯೇ ರೋಗ ಕಾಣಿಸಿಕೊಂಡಲ್ಲಿ ಇಳುವರಿಯಲ್ಲಿ ಶೇ.80 ರಿಂದ 100 ರಷ್ಟು ನಷ್ಟ ಉಂಟಾಗುವ ಸಾಧ್ಯತೆಯಿದೆ ಎಂದಿದ್ದಾರೆ.

ಎಲೆಗಳ ಮೇಲೆ ಸಣ್ಣ ಹಳದಿ ಕಲೆಗಳು ಕಾಣಿಸಿಕೊಳ್ಳುತ್ತವೆ. ಹಸಿರು ಮತ್ತು ಹಳದಿ ಬಣ್ಣದ ನಂಜಾಣು ಮಾದರಿಯ ಚುಕ್ಕೆಗಳು ಸಂಪೂರ್ಣ ಎಲೆಯ ಮೇಲೆ ಹರಡುತ್ತವೆ. ಗಿಡಗಳ ಬೆಳವಣಿಗೆ ಕುಂಠಿತವಾಗುತ್ತದೆ. ಹೂ ಬಿಡುವಿಕೆ ಹಾಗೂ ಕಾಳು ಕಟ್ಟುವಿಕೆ ಕಡಿಮೆಯಾಗುತ್ತದೆ ಎಂದಿರುವ ರುದ್ರೇಶಪ್ಪ ತೀವ್ರಬಾಧೆಯಲ್ಲಿ ಎಲೆಗಳು ಹಳದಿಯಾಗಿ ಒಣಗುತ್ತವೆ ಹಾಗೂ ಇಳುವರಿ ಗಣನೀಯವಾಗಿ ಕುಸಿಯುತ್ತದೆ ಎಂದು ತಿಳಿಸಿದ್ದಾರೆ.

ಈ ರೋಗ ನಿಯಂತ್ರಣಕ್ಕೆ ರೋಗ ನಿರೋಧಕ ಅಥವಾ ಶಿಫಾರಸ್ಸು ಮಾಡಿದ ತಳಿಗಳ ಪ್ರಮಾಣಿತ



ಬಿತ್ತನೆ ಬೀಜಗಳನ್ನು ಬಳಸಬೇಕು. ಆರಂಭಿಕ ಹಂತದಲ್ಲಿಯೇ ರೋಗಬಾಧಿತ ಗಿಡಗಳನ್ನು ಕಿತ್ತು ನಾಶಪಡಿಸಬೇಕು. ಹೊಲದಲ್ಲಿ ಕಳೆ ನಿಯಂತ್ರಿಸಿ ಸ್ವಚ್ಛತೆ ಕಾಪಾಡಬೇಕು. ಏಕೆಂದರೆ ಕಳೆಗಳು ಬಿಳಿ ನೊಣಗಳಿಗೆ ಆಶ್ರಯವಾಗುತ್ತವೆ. ಬಿಳಿ ನೊಣಗಳ ಹಾವಳಿಯನ್ನು ನಿರಂತರವಾಗಿ ಗಮನಿಸಬೇಕು. ಸಮತೋಲಿತ ಗೊಬ್ಬರ ನಿರ್ವಹಣೆ ಹಾಗೂ ಶಿಫಾರಸು ಮಾಡಿದ ಸಾರಜನಕ ಗೊಬ್ಬರವನ್ನು ಬಳಸಬೇಕು. ಹೆಕ್ಟೇರಿಗೆ 10–12 ಹಳದಿ ಅಂಟು ಬಲೆಗಳನ್ನು ಅಳವಡಿಸಿ ಬಿಳಿ ನೊಣಗಳ ಸಂಖ್ಯೆಯನ್ನು ಕಡಿಮೆ ಮಾಡಬೇಕು ಎಂದಿದ್ದಾರೆ.

ಆರಂಭಿಕ ಹಂತದಲ್ಲಿ ಬಿಳಿ ನೊಣಗಳು ಕಂಡುಬಂದಲ್ಲಿ ಶೇಕಡಾ 5 ರಷ್ಟು ಬೇವಿನ ಬೀಜದ ಕಷಾಯ ಸಿಂಪಡಿಸಬಹುದು. ಬಿಳಿ ನೊಣಗಳ ಹಾವಳಿ ಹೆಚ್ಚಾಗಿದ್ದಲ್ಲಿ ಕೀಟನಾಶಕ ಸಿಂಪರಣೆ ಮಾಡಬಹುದಾಗಿದ್ದು, ವಿವರ ಮಾಹಿತಿಗೆ ಸಮೀಪದ ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ರೈತ ಸಂಪರ್ಕ ಕೇಂದ್ರ ಅಥವಾ ಕೃಷಿ ವಿಜ್ಞಾನ ಕೇಂದ್ರವನ್ನು ಸಂಪರ್ಕಿಸಿ ತಾಂತ್ರಿಕ ಸಲಹೆ ಪಡೆದುಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

## ಸರಕಾರದಿಂದ ಜನರಿಗೆ ನ್ಯಾಯ ಒದಗಿಸುವ ಕೆಲಸ




**ಕಲಬುರಗಿ:** "ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಕಾನೂನು ಚೌಕಟ್ಟಿದೆ. ರಾಜ್ಯದ ಎಲ್ಲಾ ಭಾಗಗಳ ಪರಿಸ್ಥಿತಿ ಪರಿಶೀಲಿಸಿ ನಂತರ ಘೋಷಣೆ ಮಾಡಲಾಗುವುದು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಕಲಬುರಗಿ ಸರ್ಕಾರಿ ಅತಿಥಿ ಗೃಹದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಉತ್ತರಿಸಿದರು.

ಬರಗಾಲಕ್ಕೆ ಸಿಲುಕಿರುವ ಕಲ್ಯಾಣ ಕರ್ನಾಟಕದ ಭಾಗಕ್ಕೆ ಸರಕಾರದ ಕೊಡುಗೆ ಏನು ಎಂದು ಕೇಳಿದಾಗ, "ನಾನು ಬರಗಾಲ ಪರಿಸ್ಥಿತಿ ಅವಲೋಕಿಸಲು ಕಲ್ಯಾಣ ಕರ್ನಾಟಕ ಭಾಗಕ್ಕೆ ಬಂದಿದ್ದೇನೆ. ಇಲ್ಲಿನ ಜನರು ಮತ್ತು ಜನಪ್ರತಿನಿಧಿಗಳನ್ನು ಭೇಟಿ ಮಾಡಿದ್ದೇನೆ. ಇಲ್ಲಿನ ಪರಿಸ್ಥಿತಿಯ ಅವಲೋಕನಕ್ಕೆ ಸಭೆ ನಡೆಸುತ್ತಿದ್ದೇನೆ. ಅದೇ ರೀತಿ ಎರಡು ಮೂರು ದಿನ ಬಿಟ್ಟು ಬೆಳಗಾವಿಗೂ ಭೇಟಿ ನೀಡುತ್ತಿದ್ದೇನೆ" ಎಂದರು. "ಸಮಸ್ಯೆ ಬಗೆಹರಿಸಬೇಕು ಎಂದು ಜನರು ಬೇಡಿಕೆಗಳನ್ನು ಮಂಡಿಸಿದ್ದಾರೆ. ಅವರ ಸಮಸ್ಯೆ ಆಲಿಸಲು ಹೊಸದಾಗಿ ಪ್ರಜಾಸೇವಾ ಇಲಾಖೆ ಸ್ಥಾಪಿಸಿ, ಸಚಿವರನ್ನು ನೇಮಕ ಮಾಡಿ, ಜನರ ಅರ್ಜಿಗಳನ್ನು ಪರಿಶೀಲಿಸಿ ಅವರಿಗೆ ಸಾಧ್ಯವಾದಷ್ಟು ನ್ಯಾಯ ಒದಗಿಸುವ ಕೆಲಸವನ್ನು ಸರ್ಕಾರ ಮಾಡುತ್ತದೆ" ಎಂದರು.

ಇದಕ್ಕೂ ಮೊದಲು ಮುಖ್ಯಮಂತ್ರಿಯವರು ಕಲಬುರ್ಗಿ ಸರಕಾರಿ ಅತಿಥಿ ಗೃಹದ ಆವರಣದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ರೈತರು ಕಬ್ಬಿನ ಜಲ್ಲೆ ಜತೆಗೆ ತಮ್ಮ ಅಹವಾಲುಗಳನ್ನು ನೀಡಿದರು. ಮಳೆ ಕೊರತೆ ಉಂಟಾಗಿದೆ, ಬರಗಾಲ ಪೀಡಿತ ಎಂದು ಘೋಷಣೆ ಮಾಡಿ ಎಂದು ರೈತರು ಮನವಿ ಮಾಡಿದರು. "ಈ ಪರಿಸ್ಥಿತಿಯನ್ನು ಕಣ್ಣಾರೆ ನೋಡಲೆಂದೇ ನಾನು ಇಲ್ಲಿಗೆ ಬಂದಿದ್ದೇನೆ. ನಿಮ್ಮ ಪರಿಸ್ಥಿತಿ ನನಗೆ ಅರ್ಥವಾಗುತ್ತದೆ" ಎಂದರು. ರೈತರ ಸಾಲ ಮನ್ನಾ ವಿಚಾರ ಹಾಗೂ ತಮಿಳುನಾಡು, ಮಹಾರಾಷ್ಟ್ರಗಳಲ್ಲಿ ರೈತರ ಸಾಲ ಮನ್ನಾ ಮಾಡಿರುವ ಬಗ್ಗೆ ಕೇಳಿದಾಗ, "ಎಲ್ಲಿಯ ಸಾಲ, ಯಾವ ಸಾಲ ಎಂಬುದನ್ನು ಪರಿಶೀಲನೆ ಮಾಡೋಣ" ಎಂದರು.

## ವಿವಿಧ ಬೇಡಿಕೆಗಳಿಗೆ ಒತ್ತಾಯ



**ಹುಮನಾಬಾದ್:** ನಗರದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಗೆ ಮಂಗಳವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಯು.ಟಿ. ಖಾದರ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಸಚಿವ ಯು. ಟಿ. ಖಾದರ ಅವರಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಹಾಗೂ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ಸನ್ಮಾನಿಸಿ, ಗೌರವಿಸಿದರು. ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿ, ಹುಮನಾಬಾದ ಸಾರ್ವಜನಿಕ ಆಸ್ಪತ್ರೆಗೆ ವಿಶೇಷ ಸೌಲಭ್ಯ ಒದಗಿಸಿಕೊಡಬೇಕು. ಅಲ್ಲದೇ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ಭಾಗದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿ, ಸಿಬ್ಬಂದಿ ಸೇರಿ ಇತರೆ ಸೌಲಭ್ಯಗಳ ಕೊರತೆ ಇದೆ. ಇದರಿಂದಾಗಿ ಚಿಕಿತ್ಸೆಗಾಗಿ ಬರುವ ರೋಗಿಗಳಿಗೆ ತೊಂದರೆ ಆಗುತ್ತಿದೆ. ರೋಗಿಗಳ ಹಿತದೃಷ್ಟಿಯಿಂದ ಅಗತ್ಯ ಕ್ರಮ ಕೈಗೊಂಡು ವಿಶೇಷ ಸೌಲಭ್ಯಗಳನ್ನು ಒದಗಿಸಿ ಕೊಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಕರ್ನಾಟಕ ಮೀನುಗಾರಿಕಾ ಅಭಿವೃದ್ಧಿ ನಿಗಮದ ಆಧ್ಯಕ್ಷೆ ಮಾಲಾ ಬಿ. ನಾರಾಯಣರಾವ, ಜಿಲ್ಲಾ ವೈದ್ಯಾಧಿಕಾರಿ ಡಾ. ಜ್ಞಾನೇಶ್ವರ ನಿರಗೂಡೆ, ತಾಲೂಕು ವೈದ್ಯಾಧಿಕಾರಿ ಡಾ. ಶಿವಕುಮಾರ ಸಿದ್ದೇಶ್ವರ, ಸಾರ್ವಜನಿಕ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಜಾನಿ ಬಾಕರ, ಡಾ. ಮುಸ್ತಾಫಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಫ್ಸರಮಿಯ, ಗ್ರಾಮೀಣ ಕಾಂಗ್ರೆಸ್ ಅಧ್ಯಕ್ಷ ಓಂಕಾರ ತುಂಬಾ, ಉಮೇಶ ಜಮಗಿ, ಶಂಕರನಾಗ ಸಾಹುಕಾರ ಸೇರಿದಂತೆ ಅನೇಕರಿದ್ದರು.



**ಹುಣಸೂರು ನಗರದ ಉಪ ವಿಭಾಗಾಧಿಕಾರಿ ಕಚೇರಿಯಲ್ಲಿ ತಾಲೂಕ ಆಡಳಿತದಿಂದ ಆಗಿಸಲಾಗಿದ್ದು ಡಾ. ಬಾಬಾ ಜಗಜೀವನ ರಾಮ್ ಅವರ 4ನೇ ಪುಣ್ಯ ಸ್ಮರಣೆ ಕಾರ್ಯಕ್ರಮವನ್ನು ಪುಷ್ಪಚನೆಯನ್ನು ಉಪಯುಭಾಗಾಧಿಕಾರಿ ಕಾವ್ಯಾರಾಣಿ ಸಲ್ಲಿಸಿದ್ದರು. ನಂತರ ಕಾರ್ಯಕ್ರಮದಲ್ಲಿ ಮಾತನಾಡಿ ಭಾರತದ ಸಂವಿಧಾನ ಮೂಲಕ ಡಾ ಬಿ ಆರ್ ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಕಾರ್ಮಿಕರ ಶೋಷಿತರೆಯ ರೈತರಿಗೆ ದೊಡ್ಡ ಕೊಡುಗೆ ನೀಡಿರುವ ಹಾಗೂ ಜಗಜೀವನ್ ರಾಮ್ ಅವರ ಅನೇಕ ನಾಯಕರ ಈ ದೇಶದ ಸಮಾನತೆಯನ್ನು ಭವ್ಯವಾಗಿ ದೊಡ್ಡ ನೀಡಿದ್ದಾರೆ ಎಂದರು. ಈ ಸಂದರ್ಭದಲ್ಲಿ ಆದಿ ಜಾಂಬವ ಸಮುದಾಯದ ಹಿರಿಯ ಮುಖಂಡರಾದ ಡಿ ಕುಮಾರ್ ಮಾತನಾಡಿ ಹಾಗೂ ಡಿಎಸ್ಎಸ್ ಸಂಚಾಲಕರು ನಿಂಗರಾಜ ಮಲ್ಲಾಡಿ ತಹಶೀಲ್ದಾರ್ ಮಂಜುನಾಥ್ ಡಿವೈಎಸ್ಪಿ ರವಿ ಹುಡ ಅಧ್ಯಕ್ಷರು ಎಚ್ ಪಿ ಅಮರನಾಥ್, ಜಿಲ್ಲಾ ರೈತ ಸಂಘದ ಅಧ್ಯಕ್ಷರು ಹೊಸೂರ್ ಕುಮಾರ್ ಎಸ್ ಸಿ ಎಸ್ ಟಿ ಹಿತಾರಕ್ಷಣ ಸಮಿತಿಯ ಸದಸ್ಯರಾದ ನೇರಳಕುಪ್ಪೆ ಮಹದೇವ್ ಹಾಗೂ ಇನ್ನಿತರರು ಹಾಜರಿದ್ದರು.**

## ಸಿ.ಎಸ್.ಸಿ ಮತ್ತು ಕರ್ನಾಟಕ ಒನ್‌ಗಳ ಮೇಲೆ ಕಠಿಣ ಕ್ರಮಕ್ಕೆ ದ್ರಾವಿಡ ವಿದ್ಯಾರ್ಥಿ ಪರಿಷತ್ ಆಗ್ರಹ..!

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**

ವಿಜಯಪುರ ಜಿಲ್ಲೆಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಒನ್, ಸಿಎಸ್‌ಸಿ, ಗ್ರಾಮ ಒನ್ ಸೇರಿದಂತೆ ವಿವಿಧ ಸರ್ಕಾರಿ ಸೇವಾ ಕೇಂದ್ರಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚಿನ ಹಣವನ್ನು ಅನಧಿಕೃತವಾಗಿ ವಸೂಲಿ ಮಾಡುತ್ತಿರುವುದು ಹಾಗೂ ಜಾತಿ, ಆದಾಯ, ನಿವಾಸ ಸೇರಿದಂತೆ ಅಗತ್ಯ ದಾಖಲೆಗಳನ್ನು ನಿಗದಿತ ಅವಧಿಯಲ್ಲಿ ವಿತರಿಸದೆ ವಿಳಂಬ ಮಾಡುತ್ತಿರುವುದು ತೀವ್ರ ಖಂಡನೀಯವಾಗಿದೆ ಎಂದು ದ್ರಾವಿಡ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಅಕ್ಷಯ್ ಕುಮಾರ್ ಅಜಮನಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಂದ ಸರ್ಕಾರಿ ಉದ್ಯೋಗಗಳಿಗೆ ಅರ್ಜಿ ಸಲ್ಲಿಸುವುದು, ವಿದ್ಯಾರ್ಥಿವೇತನ ಪಡೆಯುವುದು, ವಿವಿಧ ಪ್ರಮಾಣಪತ್ರಗಳನ್ನು ಪಡೆಯುವುದು ಹಾಗೂ ಇತರೆ ಆನ್‌ಲೈನ್ ಸೇವೆಗಳಿಗಾಗಿ ಸರ್ಕಾರ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚುವರಿಯಾಗಿ ₹200 ರಿಂದ ₹300 ಅಥವಾ ಅದಕ್ಕಿಂತಲೂ ಹೆಚ್ಚಿನ ಹಣವನ್ನು ವಿದ್ಯಾರ್ಥಿಗಳಿಂದ ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿಬರುತ್ತಿವೆ.

ಇದರಿಂದ ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳು ತೀವ್ರ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ ಅದೇ ರೀತಿ, ವಾಜಪೇಯಿ ನಗರ ಸೇವಾ ಕೇಂದ್ರಗಳು ಹಾಗೂ ಸಂಬಂಧಿತ ಕಂದಾಯ ಅಧಿಕಾರಿಗಳು ವಿದ್ಯಾರ್ಥಿಗಳಿಗೆ ಅತ್ಯಗತ್ಯವಾಗಿರುವ ಜಾತಿ, ಆದಾಯ, ನಿವಾಸ ಸೇರಿದಂತೆ ವಿವಿಧ ಪ್ರಮಾಣಪತ್ರಗಳನ್ನು ನಿಗದಿತ ಅವಧಿಯಲ್ಲಿ ವಿತರಿಸದೆ ವಿಳಂಬ ಮಾಡುತ್ತಿರುವುದರಿಂದ



ಸರ್ಕಾರಿ ಉದ್ಯೋಗಗಳಿಗೆ ಅರ್ಜಿ ಸಲ್ಲಿಸಲು, ವಿದ್ಯಾರ್ಥಿವೇತನ ಪಡೆಯಲು ಹಾಗೂ ಶಿಕ್ಷಣಕ್ಕೆ ಸಂಬಂಧಿಸಿದ ಇತರೆ ಸೌಲಭ್ಯಗಳನ್ನು ಪಡೆಯಲು ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತವು ತಕ್ಷಣವೇ ಜಿಲ್ಲೆಯಲ್ಲಿರುವ ಕರ್ನಾಟಕ ಒನ್, ಸಿಎಸ್‌ಸಿ, ಗ್ರಾಮ ಒನ್ ಸೇರಿದಂತೆ ಎಲ್ಲಾ ಸರ್ಕಾರಿ ಸೇವಾ ಕೇಂದ್ರಗಳ ಮೇಲೆ ವಿಶೇಷ ಪರಿಶೀಲನೆ ನಡೆಸಿ ಸರ್ಕಾರ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚುವರಿ ಹಣ ವಸೂಲಿ ಮಾಡುತ್ತಿರುವ ಕೇಂದ್ರಗಳ ವಿರುದ್ಧ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನುಬದ್ಧ ಹಾಗೂ ಶಿಸ್ತು ಕ್ರಮ ಜರುಗಿಸಬೇಕು , ಜೊತೆಗೆ ವಿದ್ಯಾರ್ಥಿಗಳಿಗೆ ಅಗತ್ಯ ದಾಖಲೆಗಳನ್ನು ನಿಗದಿತ ಕಾಲಮಿತಿಯೊಳಗೆ ವಿತರಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಬೇಕು.

ಉದ್ದೇಶಪೂರ್ವಕವಾಗಿ ವಿಳಂಬ ಮಾಡುವ ಅಥವಾ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು.

ಸಾರ್ವಜನಿಕರಿಂದ ದೂರುಗಳನ್ನು ಸ್ವೀಕರಿಸಲು ಪರಿಣಾಮಕಾರಿ ದೂರು ನಿವಾರಣಾ ವ್ಯವಸ್ಥೆಯನ್ನು ರೂಪಿಸಿ, ಅನಧಿಕೃತ ಹಣ ವಸೂಲಿ ತಡೆಯಲು ನಿರಂತರ ನಿಗಾ ವಹಿಸಬೇಕು.

ವಿದ್ಯಾರ್ಥಿಗಳ ಹಿತಾಸಕ್ತಿ ಹಾಗೂ ಸಾರ್ವಜನಿಕ ಸೇವೆಗಳ ಪಾರದರ್ಶಕತೆಯನ್ನು ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತ ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ತಕ್ಷಣ ಅಗತ್ಯ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ದ್ರಾವಿಡ ವಿದ್ಯಾರ್ಥಿ ಪರಿಷತ್ ವತಿಯಿಂದ ವಿದ್ಯಾರ್ಥಿಗಳನ್ನು ಸಂಘಟಿಸಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು.

## ಸೌಲಭ್ಯ ಪಡೆಯಲು ಬೆಳೆ ಸಮೀಕ್ಷೆ ಕಡ್ಡಾಯ

• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ**

ಸಮೀಪದ ಹೆಗ್ಗಣದೊಡ್ಡಿ ಗ್ರಾಮದಲ್ಲಿ ಮೊಬೈಲ್ ಆ್ಯಪ್ ಮೂಲಕ ರೈತರ ಬೆಳೆ ಸಮೀಕ್ಷೆಯನ್ನು ಪ್ರಾಯೋಗಿಕವಾಗಿ ಹಮ್ಮಿಕೊಳ್ಳಲಾಗಿತ್ತು. ಗ್ರಾಮದ ರೈತ ಧರ್ಮರಾಜ ಅವರ ಹೊಲದಲ್ಲಿ ಯುವ ರೈತರಿಗೆ ಬೆಳೆ ಸಮೀಕ್ಷೆ ಆ್ಯಪ್ ಬಳಸುವ ಕುರಿತು ಮಾಹಿತಿ ನೀಡಿ, ಸ್ವತಃ ರೈತರೇ ಆ್ಯಪ್ ಮೂಲಕ ಸಮೀಕ್ಷೆ ಮಾಡುವುದನ್ನು ಪ್ರಾಯೋಗಿಕವಾಗಿ ಕಲಿಸಿಕೊಡಲಾಯಿತು. ರೈತರು ತಾವು ಬೆಳೆದ ಬೆಳೆಯನ್ನು ತಮ್ಮದೇ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಫೋಟೋ ತೆಗೆದು, ಜಿಪಿಎಸ್ ಮೂಲಕ ಅಪ್‌ಲೋಡ್ ಮಾಡಬೇಕಾಗುತ್ತದೆ. ಈ ಮಾಹಿತಿ ನೇರವಾಗಿ ಸರ್ಕಾರದ ಪಹಣಿ ಯಲ್ಲಿ ನಮೂದಾಗುತ್ತದೆ.

ರೈತ ಸಂಪರ್ಕ ಕೇಂದ್ರದ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ವಾದಿರಾಜ ಕುಲಕರ್ಣಿ ಮಾತನಾಡಿ, ಪಹಣಿಯಲ್ಲಿ ರೈತರ ಬೆಳೆ ವಿವರಗಳು ಸರಿಯಾಗಿ



ನೋಂದಣಿಯಾದರೆ ಮಾತ್ರ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳು, ಬೆಳೆ ವಿಮೆ ಹಾಗೂ ಪರಿಹಾರಧನ ರೈತರಿಗೆ ನೇರವಾಗಿ ಸಿಗಲು ಸಾಧ್ಯವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬ ರೈತರೂ ತಮ್ಮ ಬೆಳೆ ಸಮೀಕ್ಷೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.


ಈ ಸಂದರ್ಭದಲ್ಲಿ ಯುವ ರೈತರಾದ ಶಿವು ಸಾಹುಕಾರ್, ಮಲ್ಲನಗೌಡ, ರಮೇಶ ಗರಡಿಮನಿ, ನಾಗರಾಜ ಕುಂಬಾರ, ಪ್ರಕಾಶ ಮಡಿವಾಳ, ಧರ್ಮರಾಜ ಜಮಖಂಡಿ, ಸುನಿಲ್ ಸಾಹುಕಾರ್, ನಿಂಗಣ್ಣ ವಡಿಗೇರಿ, ಶಿವಣ್ಣ ಸೇರಿದಂತೆ ಗ್ರಾಮದ ರೈತರು ಉಪಸ್ಥಿತರಿದ್ದರು.

## ಹೀರೋ ಮೋಟೋಕಾರ್ಪ್ ಆಂಧ್ರದಲ್ಲಿ ಹೂಡಿಕೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ವಿಶ್ವದ ಅತಿ ದೊಡ್ಡ ದ್ವಿಚಕ್ರ ವಾಹನ ತಯಾರಕ ಸಂಸ್ಥೆಯಾದ ಹೀರೋ ಮೋಟೋಕಾರ್ಪ್, ಆಂಧ್ರಪ್ರದೇಶದಲ್ಲಿ ಬರೋಬ್ಬರಿ 3,200 ಕೋಟಿ ರೂಪಾಯಿಗಳಿಗೂ ಅಧಿಕ ಬೃಹತ್ ಹೂಡಿಕೆ ಮಾಡುವುದಾಗಿ ಘೋಷಿಸಿದೆ. ಈ ಮಹತ್ವಾಕಾಂಕ್ಷಿ ಯೋಜನೆಯ ಭಾಗವಾಗಿ ತಿರುಪತಿಯಲ್ಲಿ ಕಂಪನಿಯ ಎರಡನೇ ಜಾಗತಿಕ ಬಿಡಿಭಾಗಗಳ ಕೇಂದ್ರಕ್ಕೆ ಅದ್ದೂರಿಯಾಗಿ ಭೂಮಿಪೂಜೆ ನೆರವೇರಿಸಲಾಯಿತು.

750 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಈ ಜಾಗತಿಕ ಕೇಂದ್ರವು ಅತ್ಯಾಧುನಿಕ ಲಾಜಿಸ್ಟಿಕ್ಸ್ ತಂತ್ರಜ್ಞಾನವನ್ನು ಹೊಂದಿರಲಿದ್ದು, ಹೀರೋ ಮೋಟೋಕಾರ್ಪ್ ನ ಜಾಗತಿಕ ಪೂರೈಕೆ ಸರಪಳಿಯನ್ನು ಬಲಪಡಿಸುತ್ತದೆ ಮತ್ತು ಆಟೋಮೋಟಿವ್ ಹಾಗೂ ಇವಿ ಪರಿಸರ ವ್ಯವಸ್ಥೆಯಲ್ಲಿ ಭಾರತದ ಸ್ಥಾನವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ. ಈ ಹೂಡಿಕೆಯ ಮೂಲಕ ತಿರುಪತಿಯನ್ನು ವಿಶ್ವದರ್ಜೆಯ ಇವಿ ಮತ್ತು ಉತ್ಪಾದನಾ ಹಬ್ ಆಗಿ ಪರಿವರ್ತಿಸುವ



ಗುರಿಯನ್ನು ಕಂಪನಿ ಹೊಂದಿದೆ. ಇದು ಹೀರೋ ಮೋಟೋಕಾರ್ಪ್‌ನ ಜಾಗತಿಕ ಸರಬರಾಜು ಜಾಲವನ್ನು ಬಲಪಡಿಸುವುದಲ್ಲದೆ, ಭಾರತದ ಆಟೋಮೊಬೈಲ್ ರಂಗಕ್ಕೆ ಹೊಸ ಶಕ್ತಿ ತುಂಬಲಿದೆ.

ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಅವರು, ಆಂಧ್ರಪ್ರದೇಶದ ಬೆಳವಣಿಗೆಯ ಪಯಣದಲ್ಲಿ ಹೀರೋ ಮೋಟೋಕಾರ್ಪ್ ಅತ್ಯಮೂಲ್ಯ ಪಾಲುದಾರನಾಗಿದೆ ಮತ್ತು ತಿರುಪತಿಯಲ್ಲಿ ಜಾಗತಿಕ ಬಿಡಿಭಾಗಗಳ ಕೇಂದ್ರವನ್ನು ಸ್ಥಾಪಿಸುವ ಅದರ ನಿರ್ಧಾರವು ರಾಜ್ಯದ ಪ್ರಗತಿಪರ ನೀತಿಗಳು ಮತ್ತು ಹೂಡಿಕೆದಾರ ಸ್ನೇಹಿ ಪರಿಸರ ವ್ಯವಸ್ಥೆಗೆ ದೊರೆತ ದೊಡ್ಡ ಮನ್ನಣೆಯಾಗಿದೆ.

## ಶಿಕ್ಷಣಕ್ಕಾಗಿ ಜೀವದ ಹಂಗು..! ನೇತಾಡಿಕೊಂಡು ಶಾಲೆಗೆ ತೆರಳುವ ವಿದ್ಯಾರ್ಥಿಗಳು

• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**

ಕಲಿಯುವ ಆಸೆ ಇದೆ... ಆದರೆ ಸುರಕ್ಷಿತವಾಗಿ ಶಾಲೆಗೆ ತಲುಪುವ ವ್ಯವಸ್ಥೆಯೇ ಇಲ್ಲ! ತಾಲ್ಲೂಕಿನ ಕೇಶ್ವಾರ್ ಸೇರಿದಂತೆ ಹಲವು ಗ್ರಾಮಗಳ ವಿದ್ಯಾರ್ಥಿಗಳು ಪ್ರತಿದಿನ ಜೀವವನ್ನು ಪಣಕ್ಕಿಟ್ಟು ಕೆಎಸ್‌ಆರ್‌ಟಿಸಿ ಬಸ್‌ಗಳ ಬಾಗಿಲಿಗೆ ನೇತಾಡಿಕೊಂಡೇ ಶಾಲೆ-ಕಾಲೇಜುಗಳಿಗೆ ತೆರಳುತ್ತಿದ್ದಾರೆ. ಆಸನ ಸಿಗುವುದು ದೂರದ ಮಾತು, ನಿಲ್ಲಲೂ ಜಾಗವಿಲ್ಲದ ಬಸ್‌ಗಳಲ್ಲಿ ಪ್ರಯಾಣಿಸುವ ವಿದ್ಯಾರ್ಥಿಗಳ ದುಸ್ಥಿತಿ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ.

ಸರ್ಕಾರ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡಿದೆ. ಆದರೆ ಪ್ರಯಾಣಿಸಲು ಸಾಕಷ್ಟು ಬಸ್‌ಗಳೇ ಇಲ್ಲದಿದ್ದರೆ ಆ ಸೌಲಭ್ಯದ ಪ್ರಯೋಜನವೇನು ಎಂಬ ಪ್ರಶ್ನೆ ಸಾರ್ವಜನಿಕರನ್ನು ಕಾಡುತ್ತಿದೆ. "ಉಚಿತ ಬಸ್ ಪಾಸ್ ಮಾತ್ರವಲ್ಲ, ಸುರಕ್ಷಿತವಾಗಿ ಶಾಲೆಗೆ ತಲುಪುವಂತಹ ಸಮರ್ಪಕ ಬಸ್ ವ್ಯವಸ್ಥೆ ಬೇಕು" ಎಂಬುದು ವಿದ್ಯಾರ್ಥಿಗಳು ಮತ್ತು ಪೋಷಕರ ಒಕ್ಕೊರಲಿನ ಆಗ್ರಹವಾಗಿದೆ.

ಕೇಶ್ವಾರ್ ಮಾತ್ರವಲ್ಲ, ಸುತ್ತಮುತ್ತಲಿನ ಅನೇಕ ಗ್ರಾಮಗಳ ನೂರಾರು ವಿದ್ಯಾರ್ಥಿಗಳು ಇದೇ ಸಂಕಷ್ಟ ಅನುಭವಿಸುತ್ತಿದ್ದಾರೆ. ಶಾಲಾ-ಕಾಲೇಜು



ಆರಂಭ ಮತ್ತು ಮುಕ್ತಾಯದ ವೇಳೆಯಲ್ಲಿ ಹೆಚ್ಚುವರಿ ಬಸ್‌ಗಳನ್ನು ಓಡಿಸದ ಕಾರಣ ವಿದ್ಯಾರ್ಥಿಗಳು ಪ್ರತಿದಿನ ಅಪಾಯದ ನಡುವೆ ಪ್ರಯಾಣಿಸಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಪೋಷಕರು ಮಕ್ಕಳನ್ನು ಶಾಲೆಗೆ ಕಳುಹಿಸಲು ಆತಂಕ ಪಡುತ್ತಿದ್ದಾರೆ.

ಶಿಕ್ಷಣದ ಗುಣಮಟ್ಟ ಹೆಚ್ಚಬೇಕು ಎಂದು ಹೇಳುವ ಸರ್ಕಾರ ಮತ್ತು ಅಧಿಕಾರಿಗಳು ಮೊದಲು ವಿದ್ಯಾರ್ಥಿಗಳು ಸುರಕ್ಷಿತವಾಗಿ ಶಾಲೆಗೆ ತಲುಪುವ ವ್ಯವಸ್ಥೆ ಕಲ್ಪಿಸಬೇಕು. ಸಮಯಕ್ಕೆ ಸರಿಯಾದ ಬಸ್, ಗ್ರಾಮಗಳಿಗೆ ಉತ್ತಮ ರಸ್ತೆ, ನಿರಂತರ ವಿದ್ಯುತ್ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಿದಾಗ ಮಾತ್ರ ಕಲ್ಯಾಣ ಕರ್ನಾಟಕ ಭಾಗ ನಿಜವಾದ ಅರ್ಥದಲ್ಲಿ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯ.

ಇನ್ನಾದರೂ ಗುರುಮಠಕಲ್ ಮತ್ತು ಯಾದಗಿರಿ ಕೆಎಸ್‌ಆರ್‌ಟಿಸಿ ಘಟಕದ ಅಧಿಕಾರಿಗಳು ಎಚ್ಚೆತ್ತು ವಿದ್ಯಾರ್ಥಿಗಳ ಜೀವಕ್ಕೆ ಬೆಲೆ ನೀಡಿ, ಅಗತ್ಯಕ್ಕೆ ಅನುಗುಣವಾಗಿ ಹೆಚ್ಚುವರಿ ಬಸ್‌ಗಳ ವ್ಯವಸ್ಥೆ ಮಾಡುವರೇ? ಅಥವಾ ಯಾವುದಾದರೂ ದುರಂತ ಸಂಭವಿಸಿದ ನಂತರವೇ ಕ್ರಮ ಕೈಗೊಳ್ಳುವರೇ? ಎಂಬ ಪ್ರಶ್ನೆಯನ್ನು ಸಾರ್ವಜನಿಕರು ಎತ್ತಿದ್ದಾರೆ.

## ಶಾಸಕ ದರ್ಶನಾಪುರ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ?





ಕಲ್ಯಾಣ ಕರ್ನಾಟಕ ಭಾಗದ ಹಿರಿಯ ನಾಯಕ, ಐದು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಶಹಾಪುರ ಮತಕ್ಷೇತ್ರದ ಶರಣಬಸಪ್ಪಗೌಡ ದರ್ಶನಾಪುರ ಅವರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನೂತನ ಕಾಂಗ್ರೆಸ್ ಸರ್ಕಾರದಲ್ಲಿ ಸಚಿವ ಸ್ಥಾನ ಒಲಿದು ಬರಲಿ ಎಂಬುದು ಯಾದಗಿರಿ ಜಿಲ್ಲೆಯಾದ್ಯಂತ ಇರುವ ಅವರ ಅಸಂಖ್ಯಾತ ಅಭಿಮಾನಿಗಳು ಹಾಗೂ ಕಾರ್ಯಕರ್ತರ ಹಕ್ಕೊತ್ತಾಯ ಕೇಳಿಬರುತ್ತಿದೆ. ನೆಚ್ಚಿನ ನಾಯಕ ಮತ್ತೊಮ್ಮೆ ಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲಿ ಎಂಬ ಆಶಯದೊಂದಿಗೆ ಜಿಲ್ಲೆಯ ವಿವಿಧೆಡೆ ಬೆಂಬಲಿಗರು ಹಾಗೂ ಯುವಕರು ಮುಖ್ಯಮಂತ್ರಿಗಳಿಗೆ ಮನವಿ ಸೇರಿದಂತೆ ಧಾರ್ಮಿಕ ಸ್ಥಳಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ, ಹರಕೆ ಹೊತ್ತು ದೇವರ ಮೊರೆ ಹೋಗುತ್ತಿರುವುದು ಕ್ಷೇತ್ರದಲ್ಲಿ ಕಂಡುಬರುತ್ತಿದೆ.

**ಸುದೀರ್ಘ ರಾಜಕೀಯ ಅನುಭವ ಮತ್ತು ಹಿನ್ನೆಲೆ**

ದರ್ಶನಾಪೂರ ರವರ ತಂದೆ ದಿವಂಗತ ಬಾಪುಗೌಡ ದರ್ಶನಾಪುರ ಅವರ ಅಗಲಿಕೆಯ ನಂತರ, ಅಭಿಮಾನಿಗಳ ಒತ್ತಾಯದ ಮೇರೆಗೆ ಇಂಜಿನಿಯರಿಂಗ್ ಹುದ್ದೆಗೆ ರಾಜೀನಾಮೆ ನೀಡಿ ರಾಜಕೀಯ ಪ್ರವೇಶ ಮಾಡಿದ ಶರಣಬಸಪ್ಪಗೌಡ ದರ್ಶನಾಪುರ ಅವರು ಮೊದಲಬಾರಿಗೆ 1994 ರಲ್ಲಿ, 2004, 2008, 2018 ಮತ್ತು 2023ರ ವಿಧಾನಸಭಾ ಚುನಾವಣೆಗಳಲ್ಲಿ ಐದು ಬಾರಿ ಶಹಾಪುರ ಕ್ಷೇತ್ರದಿಂದ ವಿಜಯಶಾಲಿಯಾಗಿದ್ದಾರೆ. 1996 ರಲ್ಲಿ ಜೆ.ಎಚ್. ಪಟೇಲ್ ರ ಸಂಪುಟದಲ್ಲಿ ವಿದ್ಯುತ್ ಖಾತೆ ರಾಜ್ಯ ಸಚಿವರಾಗಿ, 2006 ರಲ್ಲಿ ಕೃಷಿ ಮಾರುಕಟ್ಟೆ ಸಚಿವರಾಗಿ, ಅವಿಭಜಿತ ಗುಲ್ಬರ್ಗ ಜಿಲ್ಲೆಯ ಉಸ್ತುವಾರಿ ಸಚಿವರಾಗಿ, 2018 ರಲ್ಲಿ ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರಾಗಿ ಹಾಗೂ ಸಿದ್ದರಾಮಯ್ಯನವರ ನೇತೃತ್ವದ ಹಿಂದಿನ ಸಂಪುಟದಲ್ಲಿ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ.

ಕಲಬುರ್ಗಿ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆ ಸೇರಿದಂತೆ ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲಿ ವ್ಯಾಪಕ ಅಭಿಮಾನಿ ಬಳಗವನ್ನು ಹೊಂದಿರುವ ದರ್ಶನಾಪುರ ಅವರು, ಪಕ್ಷ ಸಂಘಟನೆಯಲ್ಲಿ



ಪ್ರಮುಖ ಪಾತ್ರ ವಹಿಸುತ್ತಾ ಬಂದಿದ್ದಾರೆ. ಅವರ ಈ ಸುದೀರ್ಘ ರಾಜಕೀಯ ಅನುಭವ ಮತ್ತು ನಾಯಕತ್ವದ ಗುಣಗಳನ್ನು ಪರಿಗಣಿಸಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಂಪುಟದ ಮುಂದಿನ ವಿಸ್ತರಣೆ ಅಥವಾ ಪುನಾರಚನೆಯಲ್ಲಿ ಅವರಿಗೆ ಪ್ರಮುಖ ಖಾತೆಯನ್ನು ನೀಡಬೇಕು ಎಂಬ ಬೇಡಿಕೆ ಕಾರ್ಯಕರ್ತರ ವಲಯದಲ್ಲಿ ಬಲವಾಗಿ ಕೇಳಿಬರುತ್ತಿದೆ.

**ಉಪಚುನಾವಣೆ ಮತ್ತು ಲೋಕಸಭೆಯಲ್ಲಿ ಯಶಸ್ವಿ ಜವಾಬ್ದಾರಿ:** ಕಾಂಗ್ರೆಸ್ ಪಕ್ಷದ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿರುವ ದರ್ಶನಾಪುರ ರವರು ಇತ್ತೀಚಿನ ಸುರಪುರ ಮತಕ್ಷೇತ್ರದ ಉಪಚುನಾವಣೆ ಹಾಗೂ ಲೋಕಸಭಾ ಚುನಾವಣೆಗಳಲ್ಲಿ ಪಕ್ಷ ನೀಡಿದ ಜವಾಬ್ದಾರಿಯನ್ನು ಅತ್ಯಂತ ದಕ್ಷತೆಯಿಂದ ನಿರ್ವಹಿಸಿ ಹೈಕಮಾಂಡ್ ಮಟ್ಟದಲ್ಲಿ ಗಮನ ಸೆಳೆದಿದ್ದಾರೆ ಎನ್ನಬಹುದು. ಶಹಾಪುರ ಮತಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಯ ಜೊತೆಗೆ ಯಾದಗಿರಿ ಜಿಲ್ಲೆಯ ಪ್ರಗತಿಗಾಗಿ ಶ್ರಮಿಸುತ್ತಿರುವ ದರ್ಶನಾಪುರ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಿದರೆ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಕ್ಷ ಮತ್ತಷ್ಟು ಬಲಿಷ್ಠವಾಗಿ ಸಂಘಟಿತಗೊಳ್ಳಲಿದೆ ಎಂಬುದು ಪಕ್ಷದ ಹಿರಿಯ ಮುಖಂಡರ ವಿಶ್ಲೇಷಣೆಯಾಗಿದೆ.

ಯಾದಗಿರಿ ಜಿಲ್ಲೆಯ ಜಿಲ್ಲಾ ಉಸ್ತುವಾರಿ ಸಚಿವರಾಗಿಯೂ ಜವಾಬ್ದಾರಿ ನಿಭಾಯಿಸಿರುವ ದರ್ಶನಾಪುರ ಅವರ ಹೆಸರು ಮತ್ತು ಅಭಿವೃದ್ಧಿ ಒಂದಕ್ಕೊಂದು ಪೂರಕ ಎನ್ನುವ ಕಾರ್ಯಕರ್ತರ ಈ ಕಾತುರ ಹಾಗೂ ನಿರೀಕ್ಷೆಗೆ ಮುಂಬರುವ ದಿನಗಳಲ್ಲಿ ಹೈಕಮಾಂಡ್ ಮತ್ತು ಮುಖ್ಯಮಂತ್ರಿಗಳು ಯಾವ ರೀತಿ ಸ್ಪಂದಿಸಲಿದ್ದಾರೆ? ಸಚಿವ ಸಂಪುಟ ಸೇರ್ಪಡೆಯ ಮೂಲಕ ಬೆಂಬಲಿಗರ ಆಶಯ ಈಡೇರಲಿದೆಯೇ ಎಂಬುದನ್ನು ಕಾದುನೋಡಬೇಕಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)